22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 108 | ನವದೆಹಲಿ | ಬೆಲೆ ₹10 | ಅಕ್ಟೋಬರ್ 19, 2024 ಶನಿವಾರ

## ಒಳಪುಟಗಳಲ್ಲಿ

ನಾಳೆ ಐಲೇಸಾದಿಂದ ಸಾಂಪ್ರದಾಯಿಕ ಕೃಷಿ ಧ್ವನಿಯ ಒರಾಲ್ ಹಾಡು ಬಿಡುಗಡೆ - ಪು.4

# ಪಂಚಮಸಾಲಿ-ಲಿಂಗಾಯತ ಸಮುದಾಯಕ್ಕೆ ಪ್ರವರ್ಗ 2ಎ ಅಡಿ ಮೀಸಲಾತಿ: ಸಿದ್ದರಾಮಯ್ಯ ನೇತೃತ್ವದ ಸಭೆ

**ಬೆಂಗಳೂರು, ಅ,18: ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ನೀಡುವ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ, ಸಮುದಾಯದ ಸಚಿವರು, ಪ್ರಮುಖರು ಹಾಗೂ ಜನಪ್ರತಿನಿಧಿಗಳೊಂದಿಗೆ ಮಹತ್ವದ ಸಮಾಲೋಚನೆ ನಡೆಸಿದರು.**



ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಶಿವರಾಜ್ ತಂಗಡಗಿ, ಲಕ್ಷ್ಮಿ ಹೆಬ್ಬಾಳ್ಕರ್, ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್, ವಿನಯ್ ಕುಲಕರ್ಣಿ, ವಿಜಯಾನಂದ ಕಾಶ್ಯಪ್ಪನವರ್, ಕೂಡಲ ಸಂಗಮ ಗುರುಪೀಠದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಉಪಸ್ಥಿತರಿದ್ದರು.

ಪಂಚಮಸಾಲಿ ಲಿಂಗಾಯತ ಸಮುದಾಯಕ್ಕೆ ಪ್ರವರ್ಗ 2ಎ ಅಡಿ ಮೀಸಲಾತಿಯನ್ನು ಸಂವಿಧಾನದ ಆಶಯಕ್ಕೆ ಅನುಗುಣವಾಗಿ ಕಲ್ಪಿಸುವಲ್ಲಿ ಸರ್ಕಾರ ತೀರ್ಮಾನ ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಸಂದರ್ಭದಲ್ಲಿ ಆಶ್ವಾಸನೆ ನೀಡಿದ್ದಾರೆ. ಸರ್ಕಾರ ಮೀಸಲಾತಿ ವಿಷಯದಲ್ಲಿ ಮುಕ್ತ ಮನಸ್ಸು ಹೊಂದಿದೆ, ನಮ್ಮ ಸರ್ಕಾರ ಸಾಮಾಜಿಕ ನ್ಯಾಯದ ಪರವಾಗಿದೆ, ಎಲ್ಲಾ ದುರ್ಬಲ ವರ್ಗದವರಿಗೂ ನ್ಯಾಯ ದೊರೆಯಬೇಕು ಎಂಬುವುದು ನಮ್ಮ ಸರ್ಕಾರದ ನಿಲುವು. ಶಾಶ್ವತ ಹಿಂದುಳಿದ ವರ್ಗಗಳ ಆಯೋಗವಿದೆ, ಅದರ ಅಂತಿಮ ಶಿಫಾರಸ್ಸು ಇನ್ನೂ ನಮ್ಮ ಕೈಗೆ ತಲುಪಿಲ್ಲ, ಚುನಾವಣಾ ನೀತಿಸಂಹಿತೆ ಜಾರಿಯಲ್ಲಿ ಇರುವುದರಿಂದ ಮೀಸಲಾತಿ ಕುರಿತಾಗಿ ಅಡ್ವೊಕೇಟ್ ಜನರಲ್, ಕಾನೂನು ಇಲಾಖೆ, ತಜ್ಞರೊಂದಿಗೆ ಸಮಾಲೋಚಿಸಿ ನಂತರ ಸಂಪುಟದಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದಿದ್ದಾರೆ. ಮೀಸಲಾತಿ ಕುರಿತು ಶಾಶ್ವತ ಹಿಂದುಳಿದ ವರ್ಗಗಳ ಆಯೋಗದ ಮುಂದೆ ಪ್ರಸ್ತಾವನೆ ಸಲ್ಲಿಸಬೇಕು, ಅದರ ಶಿಫಾರಸಿನ ಅನ್ವಯ ಕ್ರಮ ಕೈಗೊಳ್ಳಬೇಕು ಎಂಬುದಾಗಿ ಈ ಹಿಂದೆಯೂ ಪಂಚಮಸಾಲಿ ಸಮುದಾಯದ ಮುಖಂಡರ ಭೇಟಿ ವೇಳೆ ಸಲಹೆ ನೀಡಿದ್ದೆ, ಯಾವುದೇ ತೀರ್ಮಾನ ನ್ಯಾಯಯುತವಾಗಿ ಎಲ್ಲರಿಗೂ ಒಪ್ಪಿಗೆಯಾಗುವಂತೆ, ನ್ಯಾಯಾಲಯಕ್ಕೂ ಒಪ್ಪಿಗೆಯಾಗುವಂತಿರಬೇಕು ಎಂದು ಮುಖ್ಯಮಂತ್ರಿ ತಿಳಿಸಿದರು.

**ಪ್ರಕರಣ ನ್ಯಾಯಾಲಯದಲ್ಲಿ :**

ಹಿಂದಿನ ಸರ್ಕಾರ ನಿಮ್ಮ ಮನವಿ ಮೇರೆಗೆ 2ಸಿ ಮತ್ತು 2ಡಿ ಎಂಬ ಹೊಸ ಪ್ರವರ್ಗ ಮಾಡಿತು, 3ಎನಲ್ಲಿರುವ ಒಕ್ಕಲಿಗರನ್ನು 2ಸಿಗೆ ಸೇರಿಸುವುದು, 3ಬಿಯಲ್ಲಿರುವ ಲಿಂಗಾಯತರನ್ನು 2ಡಿಗೆ ಸೇರಿಸುವ ಪ್ರಸ್ತಾಪ ಮುಂದಿಟ್ಟಿತು, ಮುಸ್ಲಿಮರ ಮೀಸಲಾತಿ ತೆಗೆದು ಹಾಕಿತ್ತು, ಮುಸ್ಲಿಮರು ಇದನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಿದಾಗ, ಯಥಾಸ್ಥಿತಿ ಮುಂದುವರೆಸಲು ರಾಜ್ಯ ಸರ್ಕಾರ ಒಪ್ಪಿಕೊಂಡಿತ್ತು, ಆದ್ದರಿಂದ ಈ ಪ್ರಕರಣ ಇನ್ನೂ ನ್ಯಾಯಾಲಯದಲ್ಲಿದೆ. ಪೂರ್ವನಿಗದಿಯಂತೆ ಸಮುದಾಯದ ಮುಖಂಡರೊಂದಿಗೆ ಇಂದು ಸಭೆ ನಡೆಸಲಾಗಿದೆ, ಪಂಚಮಸಾಲಿ ಸಮುದಾಯ ಪ್ರಸ್ತುತ ಪ್ರವರ್ಗ–3ಬಿಯಲ್ಲಿದೆ, ಈ ಪ್ರವರ್ಗದಡಿ ಲಿಂಗಾಯತ ಹಾಗೂ ಅದರ ಉಪಜಾತಿಗಳೇ ಮೀಸಲಾತಿ ಸೌಲಭ್ಯ ಪಡೆಯುತ್ತಿವೆ, ಹಾಗಾಗಿ 2ಎ ಪ್ರವರ್ಗದಡಿ ಪಂಚಮಸಾಲಿ ಸಮುದಾಯ ಸೇರಿಸಬೇಕು ಎಂದು ನಿಯೋಗ ಒತ್ತಾಯಿಸಿತು.

ಸೂಕ್ತ ಮೀಸಲಾತಿ ಇಲ್ಲದೆ ಸಮುದಾಯದ ವಿದ್ಯಾರ್ಥಿಗಳು ಉನ್ನತ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ, ಕೃಷಿ ಕಾರ್ಮಿಕರೇ ಹೆಚ್ಚಾಗಿರುವ ಪಂಚಮಸಾಲಿ ಸಮುದಾಯವನ್ನು ಪ್ರವರ್ಗ–2ಎಗೆ ಸೇರಿಸಿ ಸಾಮಾಜಿಕ ನ್ಯಾಯ ಒದಗಿಸಲು ನಿಯೋಗ ಮನವಿ ಮಾಡಿತು. ಪಂಚಮಸಾಲಿಗಳಿಗೆ ಮೀಸಲಾತಿ ನೀಡುವ ಸಂಬಂಧ ವರದಿ ಸಲ್ಲಿಸಲು ಜಯಪ್ರಕಾಶ್ ಹೆಗಡೆ ಅಧ್ಯಕ್ಷತೆಯ ಹಿಂದುಳಿದ ವರ್ಗಗಳ ಆಯೋಗ ಅಧ್ಯಯನ ನಡೆಸಿ, ಮಧ್ಯಂತರ ವರದಿ ಸಲ್ಲಿಸಿದ್ದರೂ, ಯಾವುದೇ ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ನೀಡಬೇಕೆಂಬುದು ಹಲವು ದಶಕಗಳ ಹೋರಾಟವಾಗಿದೆ. ಈ ಹಿಂದೆ ಹಲವಾರು ಪಾದಯಾತ್ರೆಗಳು, ಪ್ರತಿಭಟನೆಗಳು ನಡೆದಿದ್ದವು. ಹಿಂದುಳಿದ ವರ್ಗಗಳ ವ್ಯಾಪ್ತಿಗೊಳಪಟ್ಟಂತೆ ಅಲ್ಪಸಂಖ್ಯಾತರಿಗೆ ನೀಡಲಾಗಿದ್ದ ಶೇ.4ರಷ್ಟು ಮೀಸಲಾತಿಯನ್ನು ಬಸವರಾಜ ಬೊಮ್ಮಾಯಿ ಅವರ ನೇತೃತ್ವದ ಸರ್ಕಾರದ ಅವಧಿಯಲ್ಲಿ ಹಿಂಪಡೆದರು. ಪಂಚಮಸಾಲಿ ಸೇರಿದಂತೆ ಲಿಂಗಾಯತ –ವೀರಶೈವ ಹಾಗೂ ಒಕ್ಕಲಿಗ ಸಮುದಾಯಕ್ಕೆ ತಲಾ 2ರಂತೆ ಹಂಚಿಕೆ ಮಾಡಲಾಗಿತ್ತು. ಆಯುಕ್ತರು ಈ ನಿರ್ಧಾರದಿಂದ ಪಂಚಮಸಾಲಿಗಳು ತೃಪ್ತರಾಗಿರಲಿಲ್ಲ. ಆದರೆ ಚುನಾವಣೆ ಕಾರಣಕ್ಕಾಗಿ ಹೋರಾಟವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿತ್ತು. ಇಂದು ನಡೆದ ಸಭೆಯಲ್ಲಿ ಹಿಂದಿನ ನಿರ್ಧಾರದ ಔಚಿತ್ಯವನ್ನು ಚರ್ಚೆಗೊಳಪಡಿಸಲಾಗಿದೆ. ಪಂಚಮಸಾಲಿ ಸಮುದಾಯವನ್ನು 2ಎಗೆ ಸೇರ್ಪಡೆ ಮಾಡಲು ಕಾನೂನಾತ್ಮಕ ಸಾಧ್ಯತೆಗಳ ಬಗ್ಗೆ ವಿಸ್ತೃತ ವಿಶ್ಲೇಷಣೆ ನಡೆದಿದೆ. ರಾಜ್ಯ ಸರ್ಕಾರ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಜಾತಿಗಣತಿಯ ವರದಿಯನ್ನು ಬಹಿರಂಗ ಮಾಡುವ ಇರಾದೆಯಲ್ಲಿರುವುದನ್ನು ಲಿಂಗಾಯಿತ ವೀರಶೈವ ಸಮುದಾಯ ಪ್ರಬಲವಾಗಿ ವಿರೋಧಿಸಿದೆ. ಈ ಹಂತದಲ್ಲಿ ಸಮುದಾಯದ ಉಪಪಂಗಡವಾಗಿರುವ ಪಂಚಮಸಾಲಿಗಳ ಮೀಸಲಾತಿ ಕುರಿತಂತೆ ಸಭೆ ನಡೆಸಿರುವುದು ನಾನಾ ರೀತಿಯ ಚರ್ಚೆಗಳಿಗೆ ಕಾರಣವಾಗಿದೆ.

## ಬ್ರಿಕ್ಸ್ ಶೃಂಗಸಭೆ: ಅ.22ರಿಂದ ಮೋದಿ ರಷ್ಯಾ ಪ್ರವಾಸ

**ನವದೆಹಲಿ, ಅ.18:** ಪ್ರಧಾನಿ ನರೇಂದ್ರ ಮೋದಿ ಅವರು ಅ.22ರಿಂದ 23ರವರೆಗೆ ರಷ್ಯಾ ಪ್ರವಾಸ ಕೈಗೊಳ್ಳಲಿದ್ದಾರೆ. ರಷ್ಯಾ ಅಧ್ಯಕ್ಷ ವ್ಲಾದಿಮಿರ್ ಪುಟಿನ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ಮೋದಿ ಅವರು ಕಜಾನ್‌ನಲ್ಲಿ ನಡೆಯಲಿರುವ 16ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲಿದ್ದಾರೆ. ರಷ್ಯಾ ಪ್ರವಾಸದ ವೇಳೆ ಮೋದಿ ಅವರು ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ನಾಯಕರ ಜೊತೆ ದ್ವಿಪಕ್ಷೀಯ ಮಾತುಕತೆ ನಡೆಸುವ ಸಾಧ್ಯತೆಗಳಿವೆ ಎಂದು ವಿದೇಶಾಂಗ ಇಲಾಖೆಯ ಪ್ರಕಟಣೆ ತಿಳಿಸಿದೆ. ಜಾಗತಿಕ ಅಭಿವೃದ್ಧಿ ಮತ್ತು ಸುರಕ್ಷತೆಗಾಗಿ ಅಂತರರಾಷ್ಟ್ರೀಯ ಸಂಬಂಧಗಳನ್ನು ಬಲಪಡಿಸುವುದು ಈ ಬಾರಿಯ ಬ್ರಿಕ್ಸ್ ಶೃಂಗದ ಧ್ಯೇಯವಾಗಿದ್ದು, ಪ್ರಮುಖ ಜಾಗತಿಕ ಸಮಸ್ಯೆಗಳ ಬಗ್ಗೆ ಚರ್ಚೆಗೆ ಇದು ವೇದಿಕೆಯಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

## 2 ವರ್ಷಗಳ ಬಳಿಕ ಸತ್ಯೇಂದ್ರ ಜೈನ್‌ಗೆ ಜಾಮೀನು



**ನವದೆಹಲಿ, ಅ.18:** ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದ ಎಎಪಿ ನಾಯಕ, ದೆಹಲಿಯ ಮಾಜಿ ಸಚಿವ ಸತ್ಯೇಂದ್ರ ಜೈನ್ ಅವರಿಗೆ ದೆಹಲಿ ನ್ಯಾಯಾಲಯವು ಶುಕ್ರವಾರ ಜಾಮೀನು ಮಂಜೂರು ಮಾಡಿದೆ. ಪ್ರಕಣದ ವಿಚಾರಣೆಯು ವಿಳಂಬವಾಗುತ್ತಿದ್ದು, ಜೊತೆಗೆ ಆರೋಪಿ ದೀರ್ಘಕಾಲದಿಂದ ಸೆರೆವಾಸದಲ್ಲಿದ್ದಾರೆ ಎಂಬ ವಿಚಾರವನ್ನು ನ್ಯಾಯಾಲಯ ಉಲ್ಲೇಖಿಸಿದೆ. ಸತ್ಯೇಂದ್ರ ಜೈನ್ ಅವರಿಗೆ ಸಂಬಂಧಿಸಿರುವ ನಾಲ್ಕು ಕಂಪನಿಗಳ ಮೂಲಕ ಹಣ ಅಕ್ರಮ ವರ್ಗಾವಣೆ ಮಾಡಲಾಗಿದೆ ಎಂದು ಆರೋಪಿಸಿ 2022ರ ಮೇ 30ರಂದು ಜಾರಿ ನಿರ್ದೇಶನಾಲಯ (ಇಡಿ) ಅವರನ್ನು ಬಂಧಿಸಿತ್ತು. ಅಂದಿನಿಂದ ಅವರು ನ್ಯಾಯಾಂಗ ಬಂಧನದಲ್ಲಿದ್ದಾರೆ. ಆದಾಗ್ಯೂ, ಅವರು 2023ರ ಮೇ ಮತ್ತು 2024ರ ಮಾರ್ಚ್ ನಡುವೆ ವೈದ್ಯಕೀಯ ಜಾಮೀನಿನ ಮೇಲೆ ಬಿಡುಗಡೆಯಾಗಿದ್ದರು. "ವಿಚಾರಣೆಯಲ್ಲಿನ ವಿಳಂಬ ಮತ್ತು 18 ತಿಂಗಳ ಸುದೀರ್ಘ ಸೆರೆವಾಸವನ್ನು ಪರಿಗಣಿಸಿ ಮತ್ತು ಪ್ರಕರಣದ ತನಿಖೆ ಪ್ರಾರಂಭಿಸಲು ಬಹಳ ಸಮಯ ತೆಗೆದುಕೊಳ್ಳುತ್ತದೆ ಎಂಬ ಅಂಶವನ್ನು ಪರಿಗಣಿಸಿ ಈ ತೀರ್ಮಾನಕ್ಕೆ ಬಂದಿದ್ದು, ಆರೋಪಿಯು ಜಾಮೀನಿಗೆ ಅರ್ಹರಾಗಿದ್ದಾರೆ ಎಂದು ವಿಶೇಷ ನ್ಯಾಯಾಧೀಶ ವಿಶಾಲ್ ಗೋಗ್ನೆ ಹೇಳಿದ್ದಾರೆ. ಅಷ್ಟೇ ಮೊತ್ತದ ಇಬ್ಬರ ಶ್ಯೂರಿಟಿಯೊಂದಿಗೆ 50,000 ರೂಪಾಯಿ ಜಾಮೀನಿನ ಮೇಲೆ ನ್ಯಾಯಾಧೀಶರು ಜಾಮೀನು ಮಂಜೂರು ಮಾಡಿದ್ದಾರೆ. ಭ್ರಷ್ಟಾಚಾರ ತಡೆ ಕಾಯಿದೆಯಡಿ 2017ರಲ್ಲಿ ಕೇಂದ್ರೀಯ ತನಿಖಾ ದಳವು(ಸಿಬಿಐ) ಸತ್ಯೇಂದ್ರ ಜೈನ್ ವಿರುದ್ಧ ಎಫ್‌ಐಆರ್ ದಾಖಲಿಸಿದ ಹಿನ್ನೆಲೆಯಲ್ಲಿ ಇಡಿ ಪ್ರಕರಣದ ದಾಖಲಿಸಿತ್ತು. ವಿಚಾರಣಾ ನ್ಯಾಯಾಲಯವು ಈ ಹಿಂದೆ 2022ರ ನವೆಂಬರ್ 17ರಂದು ಸತ್ಯೇಂದ್ರ ಜೈನ್ ಅವರ ಜಾಮೀನು ಅರ್ಜಿಯನ್ನು ತಿರಸ್ಕರಿಸಿತ್ತು.

# ಪೌಷ್ಟಿಕ ಆಹಾರ ವಿತರಣೆಗೆ ಸಿರಿಧಾನ್ಯ ಖರೀದಿ ಹೆಚ್ಚಳ

### 2023–24ರ ಮುಂಗಾರು ಋತುವಿನ 12.49 ಎಲ್‌ಎಂಟಿ ಮಿಲೆಟ್ಸ್ ಖರೀದಿ





**ನವದೆಹಲಿ, ಅ.18:** ದೇಶವಾಸಿಗಳಿಗೆ ಅಗತ್ಯ ಪೌಷ್ಟಿಕ ಆಹಾರ ವಿತರಣೆಗಾಗಿ ಕೇಂದ್ರ ಸರ್ಕಾರ ಮಿಲೆಟ್ಸ್ ಖರೀದಿಯನ್ನು ಹೆಚ್ಚಿಸಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಮೂರನೇ ಅವಧಿ ಆಡಳಿತದಲ್ಲಿ ಹಿಂದೆಂದಿಗಿಂತ ಅಧಿಕ ಮಿಲೆಟ್ಸ್ ಖರೀದಿ ಮಾಡುತ್ತಿದೆ ಎಂದಿದ್ದಾರೆ.

**12.49 ಲಕ್ಷ ಮೆಟ್ರಿಕ್ ಟನ್ ಖರೀದಿ:** ಕೇಂದ್ರ ಸರ್ಕಾರ, 2023–24ರ ಮುಂಗಾರು ಮಾರುಕಟ್ಟೆ ಋತುವಿನಲ್ಲಿ 12.49 ಲಕ್ಷ ಮೆಟ್ರಿಕ್ ಟನ್ ಮಿಲೆಟ್ಸ್ ಖರೀದಿ ಮಾಡಿದೆ ಎಂದು ಸಚಿವರು ತಿಳಿಸಿದ್ದಾರೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ ಶೇ.170ರಷ್ಟು ಮಿಲೆಟ್ಸ್ ಖರೀದಿ ಹೆಚ್ಚಳ ಕಂಡಿರುವುದು ಗಮನಾರ್ಹ ಸಂಗತಿಯಾಗಿದೆ ಎಂದಿದ್ದಾರೆ ಸಚಿವರು. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ ಮೂರನೇ ಅವಧಿಯ ಮೊದಲ 100 ದಿನಗಳಲ್ಲಿ ಸಾರ್ವಜನಿಕ ವಿತರಣಾ ವ್ಯವಸ್ಥೆ ಮತ್ತು ಇತರ ಕಲ್ಯಾಣ ಯೋಜನೆಗಳ ಫಲಾನುಭವಿಗಳಲ್ಲಿ ಪೌಷ್ಟಿಕಾಂಶಕ್ಕೆ ಮಹತ್ವ ನೀಡಿದೆ.

ಈ ನಿಟ್ಟಿನಲ್ಲಿ ಸರ್ಕಾರ ಅನೇಕ ಕ್ರಮಗಳನ್ನು ಕೈಗೊಂಡಿದ್ದು, ಮಿಲೆಟ್ಸ್ ಖರೀದಿಯಲ್ಲಿನ ಹೆಚ್ಚಳ ಪ್ರಮುಖವಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

## ಜಮ್ಮು ಮತ್ತು ಕಾಶ್ಮೀರ: ನೂತನ ಸಚಿವರಿಗೆ ಖಾತೆ ಹಂಚಿದ ಲೆಫ್ಟಿನೆಂಟ್ ಗವರ್ನರ್



**ಶ್ರೀನಗರ, ಜಿ.18:** ಒಮರ್ ಅಬ್ದುಲ್ಲಾ ನೇತೃತ್ವದ ಸರ್ಕಾರದಲ್ಲಿ ಪ್ರಮಾಣ ವಚನ ಸ್ವೀಕರಿಸಿದ ನೂತನ ಸಚಿವರಿಗೆ ಜಮ್ಮು ಮತ್ತು ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಶುಕ್ರವಾರ ಖಾತೆ ಹಂಚಿಕೆ ಮಾಡಿದ್ದಾರೆ.

ಮುಖ್ಯಮಂತ್ರಿಗಳ ಸಲಹೆ ಮೇರೆಗೆ ನೂತನ ಸಚಿವರಿಗೆ ಖಾತೆ ಹಂಚಿಕೆ ಮಾಡುವ ಆದೇಶ ಹೊರಡಿಸಿದ್ದಾರೆ. ಉಪಮುಖ್ಯಮಂತ್ರಿ ಸುರೀಂದರ್ ಕುಮಾರ್ ಚೌದರಿ ಅವರಿಗೆ ಲೋಕೋಪಯೋಗಿ, ಕೈಗಾರಿಕೆ ಹಾಗೂ ವಾಣಿಜ್ಯ, ಕಾರ್ಮಿಕ, ಉದ್ಯೋಗ ಹಾಗೂ ಕೌಶಲ್ಯಾಭಿವೃದ್ಧಿ ಖಾತೆ ಹಂಚಿಕೆ ಮಾಡಲಾಗಿದೆ. ಸಂಪುಟದಲ್ಲಿರುವ ಏಕೈಕ ಮಹಿಳಾ ಸಚಿವೆ ಸಕೀನಾ ಮಸೂದ್ ಅವರಿಗೆ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ, ಶಾಲಾ ಶಿಕ್ಷಣ, ಉನ್ನತ ಶಿಕ್ಷಣ ಹಾಗೂ ಸಮಾಜ ಕಲ್ಯಾಣ ಇಲಾಖೆ ಖಾತೆ ಹಂಚಿಕೆಯಾಗಿವೆ. ಅವರು ಈ ಹಿಂದಿನ ಒಮರ್ ಅವರ ಸರ್ಕಾರದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಚಿವರಾಗಿದ್ದರು.

ಜಾವೇದ್ ರಣಾ ಅವರಿಗೆ ಜಲಶಕ್ತಿ, ಅರಣ್ಯ, ಪರಿಸರ ವಿಜ್ಞಾನ, ಮತ್ತು ಬುಡಕಟ್ಟು ವ್ಯವಹಾರಗಳ ಇಲಾಖೆಯ ಜವಾಬ್ದಾರಿ ವಹಿಸಲಾಗಿದೆ. ಜಾವಿದ್ ಅಹ್ಮದ್‌ದಾರ್ ಅವರಿಗೆ ಕೃಷಿ ಉತ್ಪಾದನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಸಹಕಾರ ಹಾಗೂ ಚುನಾವಣೆ ಖಾತೆಗಳನ್ನು ಹಂಚಲಾಗಿದೆ.

ಸತೀಶ್ ಶರ್ಮಾ ಅವರಿಗೆ ಆಹಾರ ಹಾಗೂ ನಾಗರಿಕ ಸರಬರಾಜು, ಗ್ರಾಹಕ ವ್ಯವಹಾರ, ಸಾರಿಗೆ, ವಿಜ್ಞಾನ ಮತ್ತು ತಂತ್ರಜ್ಞಾನ, ಯುವಜನ ಹಾಗೂ ಕ್ರೀಡೆ, ಕೃಷಿ ಮತ್ತು ಗ್ರಾಮೀಣ ಕೈಗಾರಿಕೆ, ತರಬೇತಿ ಇಲಾಖೆಯ ಜವಾಬ್ದಾರಿ ನೀಡಲಾಗಿದೆ. ಯಾವುದೇ ಹಂಚಿಕೆಯಾಗದ ಖಾತೆಗಳು ಇದ್ದರೆ ಅದು ಮುಖ್ಯಮಂತ್ರಿಯವರ ಬಳಿ ಇರಲಿದೆ ಎಂದು ಆದೇಶದಲ್ಲಿ ಹೇಳಲಾಗಿದೆ.



ಬೆಳಗಾವಿಯ ಸುವರ್ಣಸೌಧದಲ್ಲಿ ಶುಕ್ರವಾರ ವಿಧಾನಸಭಾಧ್ಯಕ್ಷ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಅಧಿಕಾರಿಗಳೊಂದಿಗೆ ಚಳಿಗಾಲದ ಅಧಿವೇಶನದ ವ್ಯವಸ್ಥೆ ಪರಿಶೀಲಿಸಿದರು.

# ಮಂಡ್ಯದಲ್ಲಿ ಉದ್ಯೋಗ ಮೇಳಕ್ಕೆ ಭರ್ಜರಿ ಪ್ರತಿಕ್ರಿಯೆ: 150 ಕಂಪನಿಗಳಿಂದ ಸ್ಥಳದಲ್ಲಿಯೇ ನೇಮಕಾತಿ ಪತ್ರ

**ಬೆಂಗಳೂರು, ಅ.18:** ಕೇಂದ್ರದ ಭಾರೀ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವರು ಹಾಗೂ ಕ್ಷೇತ್ರದ ಸಂಸದರೂ ಆಗಿರುವ ಎಚ್.ಡಿ.ಕುಮಾರಸ್ವಾಮಿ ಅವರು ತಮ್ಮ ಸ್ವಕ್ಷೇತ್ರ ಮಂಡ್ಯದಲ್ಲಿ ಹಮ್ಮಿಕೊಂಡಿದ್ದ ಮಂಡ್ಯ ಟೂ ಇಂಡಿಯಾ ಬೃಹತ್ ಉದ್ಯೋಗ ಮೇಳಕ್ಕೆ ಮೊದಲ ದಿನ ಅಭೂತಪೂರ್ವ ಸ್ಪಂದನೆ ದೊರೆಯಿತು.

ಶುಕ್ರವಾರ ಮತ್ತು ಶನಿವಾರ ಎರಡು ದಿನಗಳ ಕಾಲ ನಡೆಯುತ್ತಿರುವ ಉದ್ಯೋಗ ಮೇಳದಲ್ಲಿ ಭಾರತೀಯ ಭೂಸೇನೆ, ವಾಯುಪಡೆ, ನೌಕಾಪಡೆ ಸೇರಿದಂತೆ ಮೇಕಾನ್, ಭಾರತೀಯ ಉಕ್ಕು ಪ್ರಾಧಿಕಾರ, ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮ, ಲೈಲೋಡ್ಸ್ ಮೆಟಲ್ಸ್, ಭಾರತ್ ಹೆವಿ ಎಲೆಕ್ಟ್ರಿಕಲ್, ಜಿಂದಾಲ್ ಸ್ಟೀಲ್, ಹ್ಯುಂಡೈ ಸೇರಿದಂತೆ 150ಕ್ಕೂ ಹೆಚ್ಚು ಪ್ರತಿಷ್ಠಿತ ಉದ್ಯೋಗದಾತ ಕಂಪನಿಗಳು ಭಾಗಿಯಾಗಿ ಒಟ್ಟಾರೆ ಸಾವಿರಾರು ಪ್ರತಿಭಾನ್ವಿತ ಯುವಜನರನ್ನು ಆಯ್ಕೆ ಮಾಡಿಕೊಂಡಿವೆ.

ಆಯ್ಕೆಯಾದ ಅಭ್ಯರ್ಥಿಗಳಿಗೆ ಉದ್ಯೋಗದಾತ ಕಂಪನಿಗಳು ನೇಮಕಾತಿ ಆದೇಶ ಪತ್ರಗಳನ್ನು ವಿತರಿಸುತ್ತಿದ್ದು, ಎಷ್ಟು ಮಂದಿಗೆ ನೇಮಕಾತಿ ಆಗಿದೆ ಎಂಬ ಮಾಹಿತಿಯನ್ನು ಉದ್ಯೋಗ ಮೇಳದ ಕೊನೆಯ ದಿನವಾದ ಶನಿವಾರ ತಿಳಿಸಲಾಗುವುದು ಎಂದು ಸಚಿವ ಕುಮಾರಸ್ವಾಮಿ ಅವರು ಹೇಳಿದರು.



ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ಶುಕ್ರವಾರ ಮಂಡ್ಯದಲ್ಲಿ ಉದ್ಯೋಗ ಮೇಳವನ್ನು ಉದ್ಘಾಟಿಸಿದರು.

ಮಂಡ್ಯ ಟೂ ಇಂಡಿಯಾ: ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿದ ಕೇಂದ್ರ ಸಚಿವರು; ಮಂಡ್ಯ ಟೂ ಇಂಡಿಯಾ ಎನ್ನುವ ಘೋಷವಾಕ್ಯದೊಂದಿಗೆ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿತ್ತು. ಮಂಡ್ಯದ ಇತಿಹಾಸದಲ್ಲಿಯೇ ಇದೊಂದು ಮೈಲುಗಲ್ಲು ಎಂಬುದು ನನ್ನ ಭಾವನೆ. ರೈತಾಪಿ ಜನರ ಮಕ್ಕಳಿಗೆ ಉದ್ಯೋಗ ಕಲ್ಪಿಸಬೇಕು ಎನ್ನುವುದು ನನ್ನ ಮಹದಾಸೆ ಆಗಿತ್ತು. ನನ್ನ ಮನವಿಗೆ ಸ್ಪಂದಿಸಿ ಅನೇಕ ಕಂಪನಿಗಳು ಮಂಡ್ಯಕ್ಕೆ ಬಂದಿವೆ ಎಂದು ಕೇಂದ್ರ ಸಚಿವರು ಹೇಳಿದರು.

ಉದ್ಯೋಗ ಮೇಳಕ್ಕೆ ಎಚ್‌ಎಂಟಿ, ಬಿಎಚ್‌ಇಎಲ್, ಎನ್‌ಎಂಡಿಸಿ ಆರ್‌ಐಎಲ್ ಸೇರಿದಂತೆ ಹಲವಾರು ಕಂಪನಿಗಳ ಅಧ್ಯಕ್ಷ ವ್ಯವಸ್ಥಾಪಕ ನಿರ್ದೇಶಕರು ಬಂದಿದ್ದರು. ಅವರೆಲ್ಲರೂ ನಮ್ಮ ಭಾಗದ ಯುವಜನರಿಗೆ ಉದ್ಯೋಗ ಕಲ್ಪಿಸಲು ಉತ್ಸುಕರಾಗಿದ್ದಾರೆ. ಎಲ್ಲರೂ ದೊಡ್ಡ ಪ್ರಮಾಣದಲ್ಲಿ ಯುವಕರಿಗೆ ಉದ್ಯೋಗ ನೀಡುತ್ತಿದ್ದಾರೆ ಎಂದು ಸಚಿವರು ಹೇಳಿದರು.


ಪ್ರತಿದಿನವೂ ನನ್ನ ಮನೆಗೆ ಬರುವ ಅಸಂಖ್ಯಾತ ನಿರುದ್ಯೋಗಿ ಯುವ ಜನರು ಉದ್ಯೋಗ ಕೊಡಿಸಿ ಎಂದು ಕೇಳುತ್ತಾರೆ. ಅವರ ತಂದೆತಾಯಿ ಮಕ್ಕಳ ಭವಿಷ್ಯಕ್ಕಾಗಿ ಕನಸು ಕಟ್ಟಿಕೊಂಡಿದ್ದಾರೆ. ನಿತ್ಯವೂ ನೂರಾರು ಜನರು ನನ್ನ ಮನೆಯ ಬಳಿಗೆ ಬಂದಾಗ ನನ್ನ ಕೈಲಾದ ಸಹಾಯ ಮಾಡಿದ್ದೇನೆ. ಆದರೆ, ದೊಡ್ಡ ಪ್ರಮಾಣದಲ್ಲಿ ಉದ್ಯೋಗಾವಕಾಶ ಕಲ್ಪಿಸಲು ಸಾಧ್ಯವಾಗಿರಲಿಲ್ಲ. ಉದ್ಯೋಗ ಮೇಳದ ಮೂಲಕ ಸಾವಿರಾರು ಸಂಖ್ಯೆಯಷ್ಟು ಯುವ ಜನರಿಗೆ ಕೆಲಸ ಸಿಗಲಿದೆ ಎಂದು ಕುಮಾರಸ್ವಾಮಿ ಅವರು ತಿಳಿಸಿದ್ದಾರೆ.

ಭಾಗವಹಿಸುವ ಪ್ರತಿಷ್ಠಿತ ಕಂಪನಿಗಳು

ಮೇಕಾನ್, ಭಾರತೀಯ ಉಕ್ಕು ಪ್ರಾಧಿಕಾರ, ರಾಷ್ಟ್ರೀಯ ಖನಿಜಾಭಿವೃದ್ಧಿ ನಿಗಮ, ಲೈಲೋಡ್ಸ್ ಮೆಟಲ್ಸ್, ಭಾರತ್ ಹೆವಿ ಎಲೆಕ್ಟ್ರಿಕಲ್, ಜಿಂದಾಲ್ ಸ್ಟೀಲ್, ಹುಂಡೈ, ಸಿಸಿಎಫ್, ಎನ್‌ಎಸ್‌ಐಎಲ್, ಬಿಇಎಲ್, ಹೊಂಡ ಮೋಟಾರ್ಸ್, ಟಿವಿಎಸ್, ಟೊಯೊಟಾ, ಮಾರುತಿ ಸುಜುಕಿ, ಎಂ.ಜಿ ಮೋಟಾರ್ಸ್, ವೋಲ್ವೋ, ಕಿಯಾ ಮೋಟಾರ್ಸ್, ಮರ್ಸಿಡಿಸ್, ಬಿಎಂಡಬ್ಲ್ಯು, ಸ್ಕೋಡಾ, ಎಥರ್ ಸೇರಿದಂತೆ 150ಕ್ಕೂ ಹೆಚ್ಚು ಕಂಪನಿಗಳು ಭಾಗಿಯಾಗಿದ್ದವು.

ನನ್ನ ಸಚಿವಾಲಯದ ಉನ್ನತ ಅಧಿಕಾರಿಗಳು, ಮಂಡ್ಯ ಜಿಲ್ಲೆಯ ಉನ್ನತ ಹಾಗೂ ಎಲ್ಲಾ ಶ್ರೇಣಿಯ ಅಧಿಕಾರಿಗಳು ಉದ್ಯೋಗ ಮೇಳ ಯಶಸ್ಸಿಗೆ ಕೆಲಸ ಮಾಡುತ್ತಿದ್ದು, ಉದ್ಯೋಗ ಅರಸಿ ಬರುವ ಅಭ್ಯರ್ಥಿಗಳಿಗೆ ನಮ್ಮ ಸ್ವಯಂಸೇವಕರು, ಅಧಿಕಾರಿಗಳು ಸೂಕ್ತ ಮಾರ್ಗದರ್ಶನ ನೀಡಲಿದ್ದಾರೆ. ಕಂಪನಿಗಳ ಅಧಿಕಾರಿಗಳು ಅಭ್ಯರ್ಥಿಗಳ ವಿವರಗಳನ್ನು ಗಮನಿಸಿದ ನಂತರ ಅವರಿಗೆ ಸೂಕ್ತವಾದ, ಅರ್ಹವಾದ ಹುದ್ದೆಯನ್ನು ನೀಡುವ ವ್ಯವಸ್ಥೆ ಮಾಡಲಿದ್ದಾರೆ ಎಂದು ಎಚ್‌ಡಿಕೆ ಮಾಹಿತಿ ನೀಡಿದ್ದಾರೆ.

## ನಿತ್ಯ ಪಂಚಾಂಗ 19.10.2024 ಶನಿವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ದಕ್ಷಣಾಯನ-ಶರದ್ ಋತು,
ಚಾಂದ್ರಮಾನ, ಆಶ್ವಯುಜ
ಬಹುಳ

ಬಿದಿಗೆ, ಭರಣಿ ನಕ್ಷತ್ರ,
ಸಿಂದಗಿ ಬಿಂದಗಿ ಪೂಜೆ,
ಹಿರೇ ಹಡಗಲಿ ಹಾಲಸ್ವಾಮಿ ರಥ,
ಹಡಗಲಿ ಸೋಗಿ ಬೆಟ್ಟದ ಮಲ್ಲೇಶ್ವರ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಯಾವುದೇ ಸಮುದಾಯಕ್ಕೆ ಅನ್ಯಾಯವಾಗಬಾರದು ಎಂಬುದು ಸರ್ಕಾರದ ಉದ್ದೇಶ: ಡಿಸಿಎಂ

**ಬೆಂಗಳೂರು, ಅ.18–** 'ಯಾವುದೇ ಸಮುದಾಯಕ್ಕೆ ಅನ್ಯಾಯವಾಗಬಾರದು ಎಂಬುದು ನಮ್ಮ ಸರ್ಕಾರದ ಉದ್ದೇಶ. ಮೀಸಲಾತಿ ವಿಚಾರ ನ್ಯಾಯಾಲಯದಲ್ಲಿದ್ದು ನಾವು ಹಸ್ತಕ್ಷೇಪ ಮಾಡಲು ಆಗುವುದಿಲ್ಲ. ಮುಂದಿನ ದಿನಗಳಲ್ಲಿ ಪಂಚಮಸಾಲಿ ಸಮುದಾಯದ ಜತೆ ಮತ್ತೆ ಚರ್ಚೆ ಮಾಡುತ್ತೇವೆ' ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಪಂಚಮಸಾಲಿ ಲಿಂಗಾಯತರ ಮೀಸಲಾತಿ ವಿಚಾರವಾಗಿ ಸಮುದಾಯದ ನಾಯಕರುಗಳ ಜತೆ ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿ ಸಭೆ ಬಳಿಕ ಶಿವಕುಮಾರ್ ಮಾತನಾಡಿ, 'ಕಾಲಮಿತಿಯಲ್ಲಿ ಮೀಸಲಾತಿ ನೀಡಬೇಕು ಎಂದರೆ ಅದು ಸಾಧ್ಯವಾಗುವುದಿಲ್ಲ ಎಂದು ಮುಖ್ಯಮಂತ್ರಿಗಳು ಸ್ಪಷ್ಟವಾಗಿ ಹೇಳಿದ್ದಾರೆ. ಹಿಂದೆ ಬಿಜೆಪಿ ಸರ್ಕಾರ ತರಾತುರಿಯಲ್ಲಿ ಬೇರೆ ಸಮಾಜಗಳಿಗೆ ನೋವಾಗುವಂತೆ ತೀರ್ಮಾನ ಮಾಡಿತ್ತು. ನಂತರ ಆ ಸರ್ಕಾರವೇ ನಾವು ಯಾವುದೇ ಮೀಸಲಾತಿ ಜಾರಿ ಮಾಡುವುದಿಲ್ಲ ಎಂದು ನ್ಯಾಯಾಲಯದಲ್ಲಿ ಅಫಿಡವಿಟ್ ಸಲ್ಲಿಸಿದೆ. ಈ ವಿಚಾರ ನ್ಯಾಯಾಲಯದಲ್ಲಿ ಇರುವಾಗ ನಾವು ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ' ಎಂದು ತಿಳಿಸಿದರು.

'ಈಗ ಚುನಾವಣಾ ನೀತಿಸಂಹಿತೆ ಇದೆ. ಇದಾದ ನಂತರ ಸಭೆ ಕರೆದು ಮಾತನಾಡುತ್ತೇವೆ ಎಂದು ಸಮುದಾಯದ ಮುಖಂಡರುಗಳಿಗೆ ಗೌರವಯುತವಾಗಿ ಹೇಳಿದ್ದೇವೆ ಅವರ ಭಾವನೆ, ಕಳಕಳಿ ನಮಗೆ ಅರ್ಥವಾಗುತ್ತದೆ. ಮುಂದಿನ ದಿನಗಳಲ್ಲಿ ನಾವು ಅವರ ವಿಚಾರವನ್ನು ಪರಿಗಣಿಸುತ್ತೇವೆ ಎಂದು ತಿಳಿಸಿದರು. ತಮ್ಮ ಹೋರಾಟ ಮುಂದುವರಿ ಸುತ್ತೇವೆ ಎಂದು ಸಮುದಾಯದವರು ಹೇಳಿರುವ ಬಗ್ಗೆ ಕೇಳಿದಾಗ, ಹೋರಾಟ ಮಾಡುವವರಿಗೆ ನಾವು ಏನು ಹೇಳಲು ಆಗುತ್ತದೆ' ಎಂದು ತಿಳಿಸಿದರು.

**ಕುಮಾರಸ್ವಾಮಿ ನಮ್ಮ ವಿರುದ್ಧ ದಾಖಲೆ ಹುಡುಕುತ್ತಿದ್ದಾರೆ:** ಕುಮಾರಸ್ವಾಮಿ ಅವರು ಎಸ್ಐಟಿಯನ್ನು ಶಿವಕುಮಾರ್ ತನಿಖಾ ಸಂಸ್ಥೆ ಎಂದು ಟೀಕಿಸಿರುವ ಬಗ್ಗೆ ಕೇಳಿದಾಗ, 'ಕುಮಾರಸ್ವಾಮಿ ಅವರಿಗೆ ನನ್ನನ್ನು ಸ್ಮರಿಸುತ್ತಿರಬೇಕು. ಇಲ್ಲದಿದ್ದರೆ ಅವರಿಗೆ ನಿದ್ದೆ ಬರುವುದಿಲ್ಲ. ಅವರು ಹಾಗೂ ಅವರ ಸಹೋದರರು ನನ್ನ ಸ್ಮರಿಸುತ್ತಲೇ ಇರುತ್ತಾರೆ. ಅವರು ನನ್ನ ದಾಖಲೆಗಳನ್ನು ಹುಡುಕುತ್ತಿದ್ದಾರೆ. ನನ್ನ ಎಲ್ಲಾ ದಾಖಲೆಗಳು ಇಡಿ, ಸಿಬಿಐ ಬಳಿ ಇವೆ. ಹೊಸದಾಗಿ ಹುಡುಕುವುದೇನಿಲ್ಲ. ಅವರು ನನಗೆ ಕೇಳಿದ್ದರೆ ನಾನೇ ಅವರಿಗೆ ನನ್ನ ದಾಖಲೆಗಳನ್ನು ಒದಗಿಸುತ್ತಿದ್ದೆ. ನಾವು ಇನ್ನು ಅವರ ಸುದ್ದಿಗೆ ಹೋಗಿಲ್ಲ. ಉಳಿದ ವಿಚಾರ ಆನಂತರ ಮಾತನಾಡೋಣ' ಎಂದು ತಿಳಿಸಿದರು.

**ಇಡಿ ದಾಖಲೆ ಕೇಳುತ್ತಿರಬಹುದು:** ಮೂಡಾ ಪ್ರಕರಣದಲ್ಲಿ ಹಣಕಾಸು ವ್ಯವಹಾರ ಇಲ್ಲವಾದರೂ ಇಡಿ ದಾಳಿ ಬಗ್ಗೆ ಕೇಳಿದಾಗ, 'ಇಡಿ ಅವರು ಮಾಹಿತಿ ಸಂಗ್ರಹಿಸುತ್ತಿರಬಹುದು. ಅದನ್ನು ದಾಳಿ ಎಂದು ಹೇಗೆ ಹೇಳುತ್ತೀರಿ. ಅವರು ದಾಖಲೆ ಕೇಳಬಹುದು, ಇವರು ಕೊಡಬಹುದು. ದಾಖಲೆ ಪರಿಶೀಲನೆ ಮಾಡಬಹುದು.



ಅದಕ್ಕಿಂತ ಹೆಚ್ಚಾಗಿ ಇನ್ನೇನು ಮಾಡಲು ಸಾಧ್ಯ' ದಾಖಲೆಗಳನ್ನು ಹೊಸದಾಗಿ ತಿದ್ದಲು ಸಾಧ್ಯವೇ. ಪ್ರಕರಣದ ಎಲ್ಲಾ ದಾಖಲೆಗಳು ಸಾರ್ವಜನಿಕವಾಗಿವೆ. ನಾವು ಕಾನೂನು ರೀತಿಯ ಹೋರಾಟ ಮಾಡುತ್ತೇವೆ. ವಾಸ್ತವಾಂಶ ಜನರ ಮುಂದಿಡುತ್ತೇವೆ ಎಂದರು. ಈ ಹಿಂದೆ ಇಡಿ ದಾಳಿ ರಾಜಕೀಯ ಪ್ರೇರಿತ ಎಂದು ಅನೇಕ ಬಾರಿ ಹೇಳಿದ್ದೀರಿ ಎಂದು ಕೇಳಿದಾಗ, ಈ ಪ್ರಕರಣ ನ್ಯಾಯಾಲಯದಲ್ಲಿದೆ, ಅವರು ಮೂಡಾ ಕಚೇರಿಗೆ ಭೇಟಿ ನೀಡಿದ್ದಾರೆ. ನನಗೆ ಬಂದ ಮಾಹಿತಿ ಪ್ರಕಾರ ಇಡಿ ಅವರು ದಾಖಲೆಗಳನ್ನು ಕೇಳಿದ್ದರು, ಇವರು ದಾಖಲೆ ಕೊಟ್ಟಿದ್ದಾರೋ ಇಲ್ಲವೋ ಗೊತ್ತಿಲ್ಲ. ದಾಖಲೆ ನೀಡುವುದು ತಡವಾಗಿರಬಹುದು, ಇದಕ್ಕಾಗಿ ಇಡಿ ಅವರೇ ಕಚೇರಿಗೆ ಹೋಗಿರಬಹುದು ಎಂದರು. ನೈಸ್ ರಸ್ತೆ ವಿಚಾರವಾಗಿ ಕುಮಾರಸ್ವಾಮಿ ಅವರ ವಿಚಾರವಾಗಿ ಕೇಳಿದಾಗ, ನೈಸ್ ವ್ಯಾಪ್ತಿಯಲ್ಲಿ ಅವರ ಆಸ್ತಿ ಎಷ್ಟಿದೆ ಎಂದು ಮೊದಲು ಅವರು ಬಹಿರಂಗಪಡಿಸಲಿ. ಸಮಯ ಬಂದಾಗ ನಾನು ಅದನ್ನು ಹೇಳುತ್ತೇನೆ' ಎಂದು ತಿಳಿಸಿದರು. ಚನ್ನಪಟ್ಟಣ ಉಪಚುನಾವಣೆ ಅಭ್ಯರ್ಥಿ ಬಗ್ಗೆ ಕೇಳಿದಾಗ, ನಾನೇ ಅಭ್ಯರ್ಥಿ. ಡಿ.ಕೆ. ಶಿವಕುಮಾರ್, ಸಿದ್ದರಾಮಯ್ಯ ಹಾಗೂ ಹಸ್ತದ ಗುರುತೇ ಅಭ್ಯರ್ಥಿ ಎಂದು ತಿಳಿಸಿದರು.

### ತುಮಕೂರಿನಲ್ಲಿ ವಿಮಾನ ನಿಲ್ದಾಣ ಮಾಡಿದರೆ ಅನುಕೂಲ: ಜಿ.ಪರಮೇಶ್ವರ್

# ತುಮಕೂರನ್ನು ಗ್ರೇಟರ್ ಬೆಂಗಳೂರು ಎಂದು ಪರಿಗಣಿಸಲು ಪ್ರಸ್ತಾವನೆ ಸಲ್ಲಿಕೆ

**ಬೆಂಗಳೂರು, ಅ.18–** ಬೆಂಗಳೂರಿನ ಭಾಗವಾಗಿ ತುಮಕೂರು ಬೆಳೆಯುತ್ತಿದ್ದು, ವಿಮಾನ ನಿಲ್ದಾಣ ಮಾಡಿದರೆ ಅನುಕೂಲವಾಗಲಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ ಅವರು ಹೇಳಿದರು. ಸದಾಶಿವನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 20 ಸಾವಿರ ಎಕರೆ ಜಾಗದಲ್ಲಿ ಏಷ್ಯಾದ ಅತಿದೊಡ್ಡ ಕೈಗಾರಿಕಾ ಪ್ರದೇಶ ತುಮಕೂರಿನಲ್ಲಿ ನಿರ್ಮಾಣವಾಗುತ್ತಿದೆ. ಮೊದಲ ಮತ್ತು ಎರಡನೇ ಹಂತದ ಕಾಮಗಾರಿ ಮುಗಿದಿದೆ. 150 ಕೈಗಾರಿಕೆಗಳು ಹಾಗೂ ಜಪಾನ್ ಟೌನ್ಶಿಪ್ ಬರುತ್ತಿದೆ. ಎಚ್ಎಎಲ್ ಹೆಲಿಕ್ಯಾಪ್ಟರ್ ಫ್ಯಾಕ್ಟರಿ ಕೆಲಸ ಆರಂಭಿಸಿದೆ. ಇನ್ನೂ ಹಲವು ದೊಡ್ಡ ಕೈಗಾರಿಕೆಗಲಕು ಬರಲಿವೆ. ಇದನ್ನೆಲ್ಲ ಗಮನದಲ್ಲಿಟ್ಟುಕೊಂಡು ವಿಮಾನ ನಿಲ್ದಾಣ ಮಾಡಿದರೆ ಉತ್ತಮ ಎಂಬುದನ್ನು ತಿಳಿಸಲಾಗಿದೆ ಎಂದರು.

ಮುಂದಿನ ದಿನಗಳಲ್ಲಿ ತುಮಕೂರು ಅಭಿವೃದ್ಧಿಗೆ ಬೇರೆಬೇರೆ ಹೊಸ ಯೋಜನೆಗಳನ್ನು ಇಟ್ಟುಕೊಳ್ಳಲಾಗಿದೆ. ತುಮಕೂರು ಬೆಂಗಳೂರಿನ ಒಂದು ಭಾಗವಾಗಿ ಬೆಳೆಯುತ್ತಿದ್ದು ಗ್ರೇಟರ್ ಬೆಂಗಳೂರು ಎಂದು ಪರಿಗಣಿಸುವಂತೆ ಕೇಳಿಕೊಳ್ಳಲಾಗಿದೆ. ನೆಲಮಂಗಲ, ದಾಬಸ್ಪೇಟೆವರೆಗೆ



ಬೆಂಗಳೂರು ಬೆಳೆದಿದೆ. ತುಮಕೂರುವರೆಗೆ ಮೆಟ್ರೋ ರೈಲು ವಿಸ್ತರಣೆಗೂ ಪ್ರಸ್ತಾವನೆ ಸಲ್ಲಿಸಲಾಗಿದೆ. ತುಮಕೂರನ್ನು ಗ್ರೇಟರ್ ಬೆಂಗಳೂರು ಎಂದು ಕರೆಯಬಹುದು. ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಸಹೋದರನ ವಿರುದ್ಧದ ಪ್ರಕರಣದ ಕುರಿತು ಪ್ರತಿಕ್ರಿಯಿಸಿ, ದೂರು ಬಂದಾಗ ಗಂಭೀರವಾಗಿ ತೆಗೆದುಕೊಳ್ಳಬೇಕಲ್ಲವೇ ಈಗಾಗಲೇ ಮೂವರನ್ನು ಬಂಧಿಸಲಾಗಿದೆ. ಗೋಪಾಲ್ ಜೋಷಿ ಎಂಬುವರು ತಲೆಮರೆಸಿಕೊಂಡಿದ್ದು ತನಿಖೆ ಮುಂದುವರಿದಿದೆ. ಪೊಲೀಸರು ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಿದ್ದಾರೆ ಎಂದು ಹೇಳಿದರು. ಈ ಪ್ರಕರಣದಲ್ಲಿ ಪ್ರಹ್ಲಾದ್ ಜೋಷಿ ಅವರ ಪಾತ್ರ ಇರುವುದು ನನಗೆ ಗೊತ್ತಿಲ್ಲ. ಬಂಧಿತರನ್ನು ವಿಚಾರಣೆ ನಡೆಸಿ, ಹೇಳಿಕೆ ಪಡೆದಾಗ ಯಾರಿದ್ದಾರೆ ಎಂಬುದು ಗೊತ್ತಾಗುತ್ತದೆ. ತನಿಖೆಗೆ ಮೊದಲು ಹೇಳುವುದು ಸರಿಯಲ್ಲ. ಪ್ರಕರಣದಲ್ಲಿ ನೇರವಾಗಿ ಭಾಗಿಯಾಗಿದ್ದಾರೆಯೇ ಅಥವಾ ಇಲ್ಲವೇ ಎಂಬುದು ಗೊತ್ತಾಗಲಿದೆ. ವರದಿ ಬಾರದೆ ಏನು ಹೇಳಲು ಆಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಕಲಬುರಗಿ ಕೇಂದ್ರ ಕಾರಾಗೃಹಕ್ಕೆ ಡಿಜಿ ಮಾಲಿನಿ ಕೃಷ್ಣಮೂರ್ತಿ ಅವರು ಭೇಟಿ ನೀಡಿದ್ದಾರೆ. ಇವತ್ತು ವರದಿ ನೀಡಲಿದ್ದಾರೆ. ವರದಿ ಆಧರಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು. ಆಂತರಿಕವಾಗಿ ಗಂಭೀರ ವಿಚಾರ ಆಗಿರುವುದರಿಂದ ಭೇಟಿ ನೀಡಿ ವರದಿ ನೀಡುವಂತೆ ರಾಜ್ಯ ಬಂಧಿಖಾನೆ ಮತ್ತು ಸುಧಾರಣಾ ಸೇವೆಗಳ ಪೊಲೀಸ್ ಮಹಾನಿರ್ದೇಶಕರಿಗೆ ಸೂಚಿಸಿದ್ದೇನೆ ಎಂದರು.

ಜಾತಿಗಣತಿ ವಿಚಾರದ ಕುರಿತು ಪ್ರತಿಕ್ರಿಯಿಸಿದ ಸಚಿವ ಪರಮೇಶ್ವರ ಅವರು, ಕಾಂಗ್ರೆಸ್ ಶಾಸಕ ಶಾಮನೂರು ಶಿವಶಂಕರಪ್ಪ ಅವರು ಯಡಿಯೂರಪ್ಪ ಮತ್ತು ಬಸವರಾಜ್ ಬೊಮ್ಮಾಯಿ ಅವರನ್ನ ಯಾವ ವಿಚಾರಕ್ಕೆ ಭೇಟಿ ಮಾಡಿದ್ದಾರೆ ಎಂಬುದು ನನಗೆ ಗೊತ್ತಿಲ್ಲ. ಸರ್ಕಾರವು 160 ಕೋಟಿ ರೂ. ಖರ್ಚು ಮಾಡಿ ಜಾತಿಗಣತಿ ಸಮೀಕ್ಷೆ ನಡೆಸಿದೆ. ಅಷ್ಟೊಂದು ಹಣ ಖರ್ಚು ಮಾಡಿದ ಮೇಲೆ ಜನಗಳಿಗೆ ಗೊತ್ತಾಗಬೇಕಲ್ಲವೇ ಮುಂದೆ ಏನು ಮಾಡುತ್ತೇವೆ ಎಂಬುದು ಎರಡನೇ ಪ್ರಶ್ನೆ. ಯಾವ ಸಮುದಾಯಗಳು ಎಷ್ಟೆಷ್ಟು ಸಂಖ್ಯೆಯಲ್ಲಿದ್ದಾರೆ ಎಂದು ಜನಸಮುದಾಯಕ್ಕೆ ತಿಳಿಸುವ ವರದಿಯನ್ನು ಸಚಿವ ಸಂಪುಟದ ಮುಂದೆ ತರುವುದಾಗಿ ಮುಖ್ಯಮಂತ್ರಿ ಹೇಳಿದ್ದಾರೆ. ಯಾವುದೇ ವಿಚಾರವನ್ನು ನೂರಕ್ಕೆ ನೂರರಷ್ಟು ಜನ ಒಪ್ಪಿಕೊಳ್ಳುವುದಿಲ್ಲ. ಪರ–ವಿರೋಧ ಇದ್ದೇ ಇರುತ್ತಾರೆ ಎಂದು ಹೇಳಿದರು.

ಪೊಲೀಸ್ ದಂಪತಿ ವರ್ಗಾವಣೆ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದೆ. ಈಗಾಗಲೇ ನೂರಕ್ಕು ಹೆಚ್ಚು ಪೊಲೀಸ್ ದಂಪತಿ ಸಿಬ್ಬಂದಿಗಳನ್ನು ವರ್ಗಾವಣೆ ಮಾಡಲಾಗಿದೆ. ಕೆಲವರಿಗೆ ತೊಂದರೆಯಾದಾಗ ಬಂದು ನನಗೆ ಮನವಿ ಸಲ್ಲಿಸುತ್ತಾರೆ. ಅದನ್ನು ಪರಿಶೀಲಿಸಿ ವರ್ಗಾವಣೆ ಮಾಡಲಾಗುತ್ತದೆ ಎಂದು ತಿಳಿಸಿದರು.

### ಜಾರಿ ನಿರ್ದೇಶನಾಲಯದ ದಾಳಿಗೆ ರಾಜಕೀಯ ಕಾರಣವಲ್ಲ

# 3–4 ಸಾವಿರ ಕೋಟಿ ಅಕ್ರಮ ನಡೆದಿದೆ ಎಂದು ಹೇಳಿದ್ದು ಕಾಂಗ್ರೆಸ್‌ನವರು: ಆರ್.ಅಶೋಕ್ ತಿರುಗೇಟು

**ಬೆಂಗಳೂರು, ಅ.18–** ಶುಕ್ರವಾರ ಜಾರಿ ನಿರ್ದೇಶನಾಲಯದ ದಾಳಿಗೆ ರಾಜಕೀಯ ಕಾರಣವಲ್ಲ. 3–4 ಸಾವಿರ ಕೋಟಿ ರೂ. ಅಕ್ರಮ ನಡೆದಿದೆ ಎಂದು ಹೇಳಿದ್ದೇ ಕಾಂಗ್ರೆಸ್‌ವರು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗಾರರೊಂದಿಗೆ, ಮುಡಾದ ಮೇಲೆ ಜಾರಿ ನಿರ್ದೇಶನಾಲಯ ದಾಳಿ ಮಾಡಿದೆ. ಸಿಎಂ ಸಿದ್ದರಾಮಯ್ಯ ಅವರದ್ದೂ ಸೇರಿದಂತೆ 1,200 ಕ್ಕೂ ಅಧಿಕ ನಿವೇಶನಗಳ ಹಗರಣ ನಡೆದಿದೆ ಎಂಬ ದೂರು ಬಂದಿದ್ದು, ಅದಕ್ಕಾಗಿ ದಾಳಿ ಮಾಡಲಾಗಿದೆ. 3–4 ಸಾವಿರ ಕೋಟಿ ರೂ. ಹಗರಣ ನಡೆದಿದೆ ಎಂದು ಮುಡಾ ಅಧ್ಯಕ್ಷರಾಗಿದ್ದ, ಕಾಂಗ್ರೆಸ್‌ನವರೇ ಆದ ಮರಿಗೌಡ ಪತ್ರದಲ್ಲಿ ತಿಳಿಸಿದ್ದರು.

ಅದಾದ ಬಳಿಕ ಸ್ನೇಹಮಯಿ ಕೃಷ್ಣ ಇ.ಡಿ.ಗೆ ದೂರು ನೀಡಿದ್ದಾರೆ. ಇದರಲ್ಲಿ ರಾಜಕೀಯದ ಪ್ರಶ್ನೆ ಉದ್ಭವವೇ ಆಗುವುದಿಲ್ಲ. ಇದರಲ್ಲಿ ಬಿಜೆಪಿ ಅಥವಾ ಕೇಂದ್ರ ಸರ್ಕಾರದ ಪಾತ್ರವೇ ಇಲ್ಲ. ಇದನ್ನು ರಾಜಕೀಯವಾಗಿ ನೋಡಬಾರದು. ನಿವೇಶನಗಳು ವಾಪಸ್ ಸಿಕ್ಕರೆ ಹಾಗೂ ಹಣ ಸಿಕ್ಕರೆ ರಾಜ್ಯ ಸರ್ಕಾರಕ್ಕೆ ಲಾಭವಾಗುತ್ತದೆ. ಸರ್ಕಾರದಲ್ಲಿ ಖಜಾನೆ ಖಾಲಿಯಾಗಿ ಸಂಬಳ ಕೊಡಲಾಗದ ಪರಿಸ್ಥಿತಿ ಇದೆ. ಇಂತಹ ಸ್ಥಿತಿಯಲ್ಲಿ ಖಜಾನೆಗೆ ಹಣ ಬಂದರೆ ಒಳ್ಳೆಯದು. ಇದನ್ನು ಕಾಂಗ್ರೆಸ್‌ನವರು ಸ್ವಾಗತಿಸಬೇಕು.

ಅಕ್ರಮ ಹಣ ವರ್ಗಾವಣೆ ಯಾಗಿಲ್ಲ ಎಂದಾದರೆ 3–4 ಸಾವಿರ ಕೋಟಿ ರೂ. ಹಣದ ಅಕ್ರಮ ನಡೆದಿರುವುದು



ಹೇಗೆ ನಿವೇಶನ ಮಂಜೂರಾಗಿದೆ ಎಂದಮೇಲೆ ಅದರ ಹಣ ಯಾರಿಗಾದರೂ ಸಿಕ್ಕೇ ಸಿಕ್ಕಿರುತ್ತದೆ. ಅದಕ್ಕೆ ನಗದಿನಲ್ಲಿ ಹಣ ನೀಡಲಾಗಿರುತ್ತದೆ. ಅಂತಹ ನಗದು ಕಪ್ಪು ಹಣವೇ ಆಗುತ್ತದೆ. ಇಡಿ ಬಗ್ಗೆ ಪ್ರಶ್ನೆ ಮಾಡುವವರು ಕೋರ್ಟ್‌ನಲ್ಲಿ ಪ್ರಶ್ನೆ ಮಾಡಬಹುದಿತ್ತು. ಆದರೆ ಸಿಎಂ ಸಿದ್ದರಾಮಯ್ಯನವರು ಕೋರ್ಟ್‌ಗೆ ಹೋಗಲೇ ಇಲ್ಲ. ಇಡಿಗೆ ಅಧಿಕಾರ ಇಲ್ಲವೆಂದಾದರೆ ಎಸ್ಐಟಿ ಮಾಡಲು ಸರ್ಕಾರಕ್ಕೆ ಅಧಿಕಾರವಿದೆಯೇ ಎಂದು ಪ್ರಶ್ನಿಸಬೇಕಾಗುತ್ತದೆ ಮುಂದಿನ ಹೋರಾಟದ ಕುರಿತು ಪಕ್ಷದ ಮಟ್ಟದಲ್ಲಿ ಚರ್ಚಿಸಲಾಗುವುದು. ಇಡಿ ದಾಳಿಯ ನಂತರ ದಾಖಲೆಗಳು ಸಿಕ್ಕ ಬಳಿ ಪರಿಶೀಲಿಸಿ ಹೋರಾಟ ಮಾಡಲಾಗುವುದು ಎಂದು ಅಶೋಕ್ ಹೇಳಿದರು.

# ಕೋರ್ಟ್ ಕೇಸ್‌ಗಳನ್ನು ಸರಿಯಾಗಿ ನಿರ್ವಹಣೆ ಮಾಡದಿದ್ದರೆ ಅಧಿಕಾರಿಗಳೇ ಹೊಣೆ

**ಬೆಂಗಳೂರು,ಅ.18–** ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸಮರ್ಪಕವಾಗಿ ನಿರ್ವಹಿಸುವುದು ಹಾಗೂ ನ್ಯಾಯಾಲಯಕ್ಕೆ ಅಗತ್ಯ ದಾಖಲೆಗಳನ್ನು ಸರಿಯಾದ ಸಮಯದಲ್ಲಿ ಸಲ್ಲಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಇದನ್ನ ಸಮರ್ಪಕವಾಗಿ ನಿಭಾಯಿಸದೇ ಇದ್ದಲ್ಲಿ ಅಧಿಕಾರಿಗಳನ್ನೇ ಹೊಣೆಗಾರರನ್ನಾಗಿಸುವ ನಿಟ್ಟಿನಲ್ಲಿ ಸುತ್ತೋಲೆ ಹೊರಡಿಸುವಂತೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್.ಎಸ್. ಭೋಸರಾಜು ಸೂಚನೆ ನೀಡಿದರು.

ವಿಕಾಸಸೌಧದಲ್ಲಿ ಸಭೆ ನಡೆಸಿ, ಹಲವಾರು ವರ್ಷಗಳಿಂದ ವಿವಿಧ ನ್ಯಾಯಾಲಯಗಳಲ್ಲಿ ಇತ್ಯರ್ಥವಾಗದೇ ಇರುವಂತಹ ಅನೇಕ ಪ್ರಕರಣಗಳ ಬಗ್ಗೆ ಅಡ್ವೋಕೇಟ್ ಜನರಲ್ ಅವರೊಂದಿಗೆ ಚರ್ಚಿಸಿದರು. ರೈತರಿಗೆ



ಅನ್ಯಾಯವಾಗದಂತೆ ಹಾಗೂ ಸರಕಾರಕ್ಕೆ ಹೊರೆ ಆಗದಂತೆ ಈ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ನಿಟ್ಟಿನಲ್ಲಿ ಅಡ್ವೋಕೇಟ್ ಜನರಲ್ ಅವರಿಂದ ಸಲಹೆಯನ್ನು ಪಡೆದು ಕೊಳ್ಳಲಾಯಿತು.

**ಭೂಸ್ವಾಧೀನ ಪ್ರಕರಣಗಳ ಹೆಚ್ಚು:** ಸಣ್ಣ ನೀರಾವರಿ ಇಲಾಖೆಯಲ್ಲಿ ಭೂಸ್ವಾಧೀನ ಪ್ರಕರಣಗಳು ಹೆಚ್ಚಾಗಿ ಬಾಕಿಯಿವೆ. ಕೆಲವು ಪ್ರಕರಣಗಳಲ್ಲಿ ಸರಿಯಾದ ದಾಖಲೆ ಸಲ್ಲಿಸದೇ ಇರುವ ಕಾರಣ ಹೆಚ್ಚುವರಿ ಹಣ ನೀಡುವ ಪರಿಸ್ಥಿತಿ ಎದುರಾಗಿದೆ. ಈ ಪ್ರಕರಣಗಳಲ್ಲಿ ಸರಿಯಾದ ಸಮಯದಲ್ಲಿ ದಾಖಲೆ ಸಲ್ಲಿಸದೇ ಅಧಿಕಾರಿಗಳು ನಿರ್ಲಕ್ಷವಹಿಸಿರುವುದು ಕಂಡು ಬಂದಿದೆ. ಇಂತಹ ಉದಾಸೀನ ಧೋರಣೆಯಿಂದಾಗಿ ಸರಕಾರದ ಬೊಕ್ಕಸಕ್ಕೆ ಹೆಚ್ಚಿನ ಹೊರೆಯಾಗುತ್ತಿದೆ. ಮುಂದಿನ ದಿನಗಳಲ್ಲಿ ನ್ಯಾಯಾಲಯದಲ್ಲಿನ ಪ್ರಕರಣಗಳ ಬಗ್ಗೆ ಉದಾಸೀನ ತೋರಿಸುವ ಅಧಿಕಾರಿಗಳನ್ನು ಹೊಣೆಗಾರರನ್ನಾಗಿಸುವ ನಿಟ್ಟಿನಲ್ಲಿ ಸರಕಾರದಿಂದ ಸುತ್ತೋಲೆಯನ್ನು ಹೊರಡಿಸುವಂತೆ ಸಚಿವರು ಸಣ್ಣ ನೀರಾವರಿ ಇಲಾಖೆಯ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದರು.

ಹೊಸ ಯೋಜನೆಗಳನ್ನು ಪ್ರಾರಂಭಿಸುವ ಸಮಯದಲ್ಲಿ ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರದಲ್ಲಿ ಮುಗಿಸಲು ಆದ್ಯತೆ ನೀಡಬೇಕು. ಒನ್ ಟೈಮ್ ಸೆಟ್ಲಮೆಂಟ್ ಗೇ ಆದ್ಯತೆ ನೀಡಬೇಕು ಪ್ರಕರಣಗಳು ನ್ಯಾಯಾಲಯಕ್ಕೆ ಹೋಗದಂತೆ ರೈತರಿಗೆ ಶೀಘ್ರದಲ್ಲಿ ಹಣ ಪಾವತಿಸಬೇಕು ಎಂದು ಸೂಚನೆ ನೀಡಿದರು.

# ಹಾಲು, ಬಸ್ ಪ್ರಯಾಣ, ನೀರಿನ ದರ ಏರಿಕೆ ಶೀಘ್ರ: ಸಚಿವ ಕೆ.ವೆಂಕಟೇಶ್

**ಬೆಂಗಳೂರು,ಅ.18–** ವಿಧಾನ ಸಭೆಯ ಉಪಚುನಾವಣೆಯ ಬಳಿಕ ಮುಂದಿನ ದಿನಗಳಲ್ಲಿ ರಾಜ್ಯದ ಜನರಿಗೆ ಹಾಲಿನ ದರ, ಬಸ್ ಪ್ರಯಾಣ ದರ, ನೀರಿನ ದರಗಳ ಏರಿಕೆಯ ಶಾಕ್ ಎದು ರಾಗುವ ಸಾಧ್ಯತೆ ಇದೆ.

ಸುದ್ದಿಗಾರರೊಂದಿಗೆ ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಪ್ರತಿ ಲೀಟರ್‌ಗೆ 5 ರೂ. ಹಾಲಿನ ದರ ಹೆಚ್ಚಿಸಬೇಕೆಂಬ ಪ್ರಸ್ತಾವನೆಯಿದೆ. ಅದರ ಕುರಿತು ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದು ಹೇಳಿದ್ದಾರೆ. ಈ ಮೊದಲು ರಾಮನಗರದಲ್ಲಿ ನಡೆದ ರೈತರ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಲಿನ ದರ ಹೆಚ್ಚಳದ ಸುಳಿವು ನೀಡಿದ್ದರು. ರೈತರ ಜೊತೆ ಸಭೆ ನಡೆಸಿ ಚರ್ಚಿಸಿದ ಬಳಿಕ ಈ ಕುರಿತು ನಿರ್ಧಾರ ತೆಗೆದುಕೊಳ್ಳುವುದಾಗಿ ತಿಳಿಸಿದ್ದರು. ಈಗ ರೈತರ ಅನುಕೂಲಕ್ಕಾಗಿ ಮತ್ತೊಮ್ಮೆ ದರ ಹೆಚ್ಚಿಸಬೇಕೆಂಬ ಪ್ರಸ್ತಾವನೆ ಇದೆ ಎಂದರು.

ಈ ಹಿಂದೆ ಪ್ರತಿ ಲೀಟರ್ ಹಾಲಿಗೆ 50 ಗ್ರಾಂ ಹೆಚ್ಚುವರಿ ಹಾಲನ್ನು ಸೇರ್ಪಡೆ ಮಾಡಿ 2 ರೂ. ದರ ಹೆಚ್ಚಿಸಲಾಗಿತ್ತು. ಇತ್ತೀಚೆಗೆ ಹೆಚ್ಚುವರಿ ಹಾಲಿನ ಪ್ರಮಾಣ ನಾಪತ್ತೆಯಾಗಿದೆ. ಈಗ ನೇರವಾಗಿ ಹಾಲಿನ ದರವನ್ನೇ ಹೆಚ್ಚಿಸುವ ಚರ್ಚೆಗಳು ನಡೆಯುತ್ತಿವೆ.



ಮತ್ತೊಂದೆಡೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಬಳಿಕ ನಷ್ಟದಲ್ಲಿರುವ ಕೆಎಸ್ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ ಸಾರಿಗೆ ಸಂಸ್ಥೆಗಳ ಪ್ರಯಾಣ ದರವನ್ನು ಹೆಚ್ಚಳ ಮಾಡುವ ಚರ್ಚೆಗಳಾಗಿವೆ. ಬಹುತೇಕ ಡಿಸೆಂಬರ್ ಅಂತ್ಯದೊಳಗೆ ಮತ್ತೊಂದು ಸುತ್ತಿನ ಸಭೆ ನಡೆಸಿ ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆ ಇದೆ. ಜೊತೆಯಲ್ಲಿನ ಬೆಂಗಳೂರಿನ ಮೆಟ್ರೊ ಸಂಚಾರ ದರವನ್ನು ರಚಿಸಬೇಕೆಂಬ ಚರ್ಚೆಗಳಿವೆ. ಇದಕ್ಕಾಗಿ ಈಗಾಗಲೇ ಸಮಿತಿ ಯೊಂದನ್ನು ರಚನೆ ಮಾಡಿ ಪರಿಶೀಲಿಸಲಾಗುತ್ತಿದೆ ಎಂದು ತಿಳಿಸಿದರು.

ಬೆಂಗಳೂರಿನಲ್ಲಿ ನೀರಿನ ದರ ಏರಿಕೆ ಆಗಬೇಕು ಎಂಬುದು ಹಲವು ದಿನಗಳಿಂದಲೂ ಬಿಡಬ್ಲ್ಯುಎಸ್‌ಎಸ್‌ಬಿ ಪ್ರಸ್ತಾವನೆ ಮಾಡುತ್ತಲೇ ಇದೆ. ಪ್ರಸ್ತುತ ಸಂಗ್ರಹವಾಗುತ್ತಿರುವ ನೀರಿನ ದರದಲ್ಲಿ ಶೇ.70ರಷ್ಟು ವಿದ್ಯುತ್ ಬಿಲ್ ಪಾವತಿಗೆ ಖರ್ಚಾಗುತ್ತಿದೆ.

ಉಳಿದ ಹಣದಲ್ಲಿ ನೀರು ಸರಬರಾಜು ವ್ಯವಸ್ಥೆಯನ್ನು ನಿಭಾಯಿಸುವುದು ಕಷ್ಟ ಎಂಬ ಮಾಹಿತಿ ಇದೆ. ಹೀಗಾಗಿ ಒಂದರ ಮೇಲೊಂದರಂತೆ ದರ ಏರಿಕೆಯು ಜನರನ್ನು ಕಾಡುವ ಸಾಧ್ಯತೆ ಇದೆ. ಉಪಚುನಾವಣೆಗೂ ಮುನ್ನವೇ ಬೆಲೆ ಏರಿಕೆಯಾಗಲಿದೆಯೇ ಅಥವಾ ಈ ಕುರಿತು ಕ್ರಮ ಕೈಗೊಳ್ಳುತ್ತಾರೆಯೇ ಎಂಬುದನ್ನು ಕಾದು ನೋಡಬೇಕಿದೆ.





**ಮಾಜಿ ಸಚಿವೆ, ಹಿರಿಯ ಸಮಾಜ ಚಿಂತಕಿ ಲೀಲಾದೇವಿ ಪ್ರಸಾದ್ ಅವರಿಗೆ ಶುಕ್ರವಾರ ಸನ್ಮಾನ ಸಮಾರಂಭ ಏರ್ಪಡಿಸಲಾಗಿತ್ತು. ಪೂಜ್ಯ ಸುತ್ತೂರು ಜಗದ್ಗುರು, ಅಥಣಿ ಮೋಟಗಿ ಶ್ರೀಗಳು, ಬಿ.ಎಲ್.ಶಂಕರ್, ಅರವಿಂದ ಜತ್ತಿ, ಕೆ.ವಿ.ನಾಗರಾಜಮೂರ್ತಿ ಪಾಲ್ಗೊಂಡಿದ್ದರು. ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ. ಸಿ. ಸೋಮಶೇಖರ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.**

# ಪತ್ರಕರ್ತರ ಮೇಲೆ ಪೊಲೀಸ್ ದೌರ್ಜನ್ಯ ಸೂಕ್ತ ಕ್ರಮದ ಭರವಸೆ

**ಬೆಂಗಳೂರು, ಅ.18–**ಮಾಧ್ಯಮದವರ ಮೇಲೆ ಪೊಲೀಸ್ ದೌರ್ಜನ್ಯವಾಗದಂತೆ ಸೂಕ್ತ ಕ್ರಮ ಕೈಗೊಳ್ಳಲು ಹಿರಿಯ ಅಧಿಕಾರಿಗಳಿಗೆ ಕೂಡಲೇ ನಿರ್ದೇಶನ ನೀಡಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ ಅವರು ಭರವಸೆ ನೀಡಿದ್ದಾರೆ.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಶುಕ್ರವಾರ ವಿಧಾನಸೌಧದಲ್ಲಿ ಗೃಹ ಸಚಿವರನ್ನು ಭೇಟಿ ಮಾಡಿ, ಮೈಸೂರಿನಲ್ಲಿ ದಸರಾ ಸಂದರ್ಭದಲ್ಲಿ ಕರ್ತವ್ಯನಿರತ ಫೋಟೋಗ್ರಾಫರ್‌ಗಳ ಮೇಲೆ ಪೊಲೀಸರು ಮಾಡಿರುವ ದೌರ್ಜನ್ಯ ಮತ್ತು ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿಯಲ್ಲಿ ಪತ್ರಕರ್ತರ ಮೇಲೆ ನಡೆದ ದೌರ್ಜನ್ಯದ ಘಟನೆಗಳನ್ನು ಗೃಹ ಸಚಿವರ ಗಮನಕ್ಕೆ ತಂದರು. ಕರ್ತವ್ಯ ನಿರತ ಪತ್ರಕರ್ತರು, ಫೋಟೋಗ್ರಾರ್ಸ್, ವಿಡಿಯೋ ಜರ್ನಲಿಸ್ಟ್‌ಗಳ ಮೇಲೆ, ಆಗಿಂದಾಗ್ಗೆ ದೌರ್ಜನ್ಯ ಘಟನೆಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳುವಂತೆ ಕೆಯುಡಬ್ಲ್ಯೂಜೆ ಒತ್ತಾಯಿಸಿತು.

ಮನವಿ ಸ್ವೀಕರಿಸಿ ಪ್ರತಿಕ್ರಿಯಿಸಿದ ಸಚಿವರು, ಮಾಧ್ಯಮದವರು ಮೇಲೆ ಈ ರೀತಿಯ ಘಟನೆಗಳು ಆಗಬಾರದು. ಹಿರಿಯ ಅಧಿಕಾರಿಗಳ ಹಂತದಲ್ಲಿ ಈ ರೀತಿಯ ಘಟನೆಗಳು ಆಗುವುದಿಲ್ಲ. ಆದರೆ, ತಳ ಹಂತದಲ್ಲಿ ಒಮ್ಮೊಮ್ಮೆ ಘಟನೆಗಳು ನಡೆದಿರುವುದು ನನ್ನ ಗಮನಕ್ಕೆ ಬಂದಿದೆ ಎಂದರು.

# 3 ಕ್ಷೇತ್ರಗಳ ಉಪಚುನಾವಣೆ: ಪಕ್ಷಗಳ ಅಭ್ಯರ್ಥಿಗಳ ಸಂಭವನೀಯ ಪಟ್ಟಿ ಅಂತಿಮ ಸಂಭವ

**ಬೆಂಗಳೂರು, ಅ.18–** ಪ್ರತಿಷ್ಠೆಯ ಕಣವಾಗಿ ಪರಿಣಮಿಸಿರುವ ಮೂರು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಗೆ ಅಭ್ಯರ್ಥಿಗಳ ಆಯ್ಕೆ ಸಂಬಂಧ ವರಿಷ್ಠರ ಚರ್ಚಿಸಲು ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಭಾನುವಾರ ನವದೆಹಲಿಗೆ ತೆರಳುತ್ತಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡ ಕೇಂದ್ರ ಗೃಹಸಚಿವ ಅಮಿತ್ ಷಾ, ರಾಷ್ಟ್ರೀಯ ಸಂಘಟನಾ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಸೇರಿದಂತೆ ಮತ್ತಿತರ ಪ್ರಮುಖರ ಜೊತೆ ಚರ್ಚಿಸಿ ಅಭ್ಯರ್ಥಿಗಳ ಸಂಭವನೀಯ ಪಟ್ಟಿಯನ್ನು ನೀಡಲಿದ್ದಾರೆ.

ನಂತರ ವರಿಷ್ಠರು ಮತ್ತೊಂದು ಸುತ್ತಿನ ಮಾತುಕತೆ ನಡೆಸಿ ಅಂತಿಮವಾಗಿ ಪಕ್ಷದ ಕೇಂದ್ರ ಚುನಾವಣಾ ಸಮಿತಿಗೆ ಕಳುಹಿಸಿ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಆಕಾಂಕ್ಷಿಗಳ ಪಟ್ಟಿ ಹೆಚ್ಚಾಗಿದ್ದರಿಂದ ಅಂತಿಮವಾಗಿ ಪಕ್ಷದ ರಾಷ್ಟ್ರೀಯ ನಾಯಕರೇ ಅಭ್ಯರ್ಥಿಗಳ ಹೆಸರನ್ನು ಅಂತಿಮಗೊಳಿಸಲಿ ಎಂಬುದು ರಾಜ್ಯ ನಾಯಕರ ಒತ್ತಾಸೆಯಾಗಿದೆ.ಯಾರಿಗೆ ಟಿಕೆಟ್ ಕೊಟ್ಟರೂ ಟಿಕೆಟ್ ಕೈ ತಪ್ಪಿದವರು ಮುನಿಸಿಕೊಂಡು ಅಧಿಕೃತ ಅಭ್ಯರ್ಥಿ ವಿರುದ್ಧ ಬಂಡಾಯ ಸಾರಬಹುದೆಂಬ ಎಚ್ಚರಿಕೆ ಹಿನ್ನಲೆಯಲ್ಲಿ ಎಲ್ಲವನ್ನೂ ದೆಹಲಿ ನಾಯಕರೇ ತೀರ್ಮಾನಿಸಲಿ ಎಂಬ ನಿರ್ಧಾರಕ್ಕೆ ರಾಜ್ಯ ನಾಯಕರು ಬಂದಂತಿದೆ. ಇಲ್ಲಿ ಯಾವುದೇ ಅಭ್ಯರ್ಥಿ ಹೆಸರನ್ನು ಸಿದ್ದಪಡಿಸಿದರೂ ಅಂತಿಮವಾಗಿ ವರಿಷ್ಠರ ಮುದ್ರೆ ಬಿದ್ದ ನಂತರವೇ ಅಧಿಕೃತವಾಗುತ್ತದೆ ಎಂಬ ಹಿನ್ನಲೆಯಲ್ಲಿ ಕೆಲವು ಸಂಭವನೀಯ ಪಟ್ಟಿಗಳನ್ನು ಮಾತ್ರ ವಿಜಯೇಂದ್ರ ವರಿಷ್ಠರಿಗೆ ನೀಡಲಿದ್ದಾರೆ ಎಂದು ಗೊತ್ತಾಗಿದೆ. ಕಗ್ಗಂಟಾಗಿ ಪರಿಣಮಿಸಿರುವ ಚನ್ನಪಟ್ಟಣ ಕ್ಷೇತ್ರಕ್ಕೆ ಜೆಡಿಎಸ್, ಬಿಜೆಪಿ ಬೆಂಬಲಿತ ಎನ್ಡಿಎ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಸಲಹೆ ಮಾಡಲಿದ್ದಾರೆ. ಈ ಕ್ಷೇತ್ರದ ಪ್ರಬಲ ಆಕಾಂಕ್ಷಿಯಾಗಿರುವ ಸಿ.ಪಿ.ಯೋಗೇಶ್ವರ್ ಅವರಿಗೆ ಟಿಕೆಟ್ ನೀಡುವುದು ಇಲ್ಲವೇ ಬಿಡುವುದು ವರಿಷ್ಠರೇ ತೀರ್ಮಾನಿಸಬೇಕು. ಅವರನ್ನು ಕರೆಸಿ ಮಾತುಕತೆ ನಡೆಸಿ ಮನವೊಲಿಸುವ ಜವಾಬ್ದಾರಿಯನ್ನು ದೆಹಲಿ ನಾಯಕರಿಗೆ ಬಿಡಲಾಗಿದೆ.

ರಾಜ್ಯ ನಾಯಕರ ಮಾತನ್ನು ಕೇಳುವ ಸ್ಥಿತಿಯಲ್ಲಿ ಇಲ್ಲದ ಕಾರಣ ಯೋಗೇಶ್ವರ್ ಸಮಾಧಾನಪಡಿಸಿ ಅವರಿಗೆ ಟಿಕೆಟ್ ನೀಡಬೇಕೇ ಇಲ್ಲವೇ ಸಂಪುಟದ ಯಾವುದಾದರೂ ಸ್ಥಾನಮಾನವನ್ನು ನೀಡುವುದಾದರೆ ನಮ್ಮ ಅಭ್ಯಂತರವಿಲ್ಲ. ಇಬ್ಬರ ಜಗಳದಲ್ಲಿ ಮೂರನೇಯವರಿಗೆ ಲಾಭ ಎಂಬಂತೆ ಯೋಗೇಶ್ವರ್ ಬಂಡಾಯ ಅಭ್ಯರ್ಥಿಯಾಗಿ ನಿಂತರೆ ಅದು ನೇರವಾಗಿ ಕಾಂಗ್ರೆಸ್ಗೆ ಅನುಕೂಲವಾಗುತ್ತದೆ ಎಂಬುದನ್ನು ವಿಜಯೇಂದ್ರ ಮನವರಿಕೆ ಮಾಡಲಿದ್ದಾರೆ.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮಾಯಿ ಅವರ ರಾಜೀನಾಮೆಯಿಂದ ತೆರವಾಗಿರುವ ಶಿಗ್ಗಾವಿ ಕ್ಷೇತ್ರಕ್ಕೆ ಪುತ್ರ ಭರತ್ ಬೊಮಾಯಿ ಅಭ್ಯರ್ಥಿಯಾಗುವುದು ಬಹುತೇಕ ಖಚಿತ.ನಿಮ ಮಗನಿಗೆ ಕ್ಷೇತ್ರದಲ್ಲಿ ಕೆಲಸ ಮಾಡಲು ಸೂಚಿಸಿ ಎಂದು ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಬೊಮಾಯಿಗೆ ಸೂಚಿಸಿರುವುದರಿಂದ ಬಹುತೇಕ ಭರತ್ ಬೊಮಾಯಿ ಮೊದಲ ಬಾರಿಗೆ ಉಪ ಚುನಾವಣೆಯ ಅಗ್ನಿ ಪರೀಕ್ಷೆ ಎದುರಿಸಲಿದ್ದಾರೆ.ಇದೇ ಕ್ಷೇತ್ರದಿಂದ ಮಾಜಿ ಸಚಿವ ಮುರುಗೇಶ್ ನಿರಾಣಿ ತಮಗೆ ಟಿಕೆಟ್ ನೀಡಬೇಕೆಂದು ದೆಹಲಿಯಲ್ಲಿ ಲಾಬಿ ನಡೆಸಲಿದ್ದಾರೆ. ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಯಲ್ಲಿ ಸೋತಿರುವ ಶ್ರೀರಾಮುಲು, ಕಳೆದ ವಿಧಾನಸಭೆ ಚುನಾವಣೆಯಲ್ಲಿ ಪರಾಭವಗೊಂಡಿದ್ದ ಶಿಲ್ಪ, ಮಾಜಿ ಸಂಸದ ಎನ್.ವೈ.ದೇವೇಂದ್ರಪ್ಪ, ಕೆ.ಎಸ್.ದಿವಾಕರ್ ಸೇರಿದಂತೆ ಹಲವು ಹೆಸರುಗಳು ಮುಂಚೂಣಿಯಲ್ಲಿವೆ. ನಾಮಪತ್ರ ಸಲ್ಲಿಸಲು ಇದೇ ತಿಂಗಳು 25 ಕಡೆಯ ದಿನವಾಗಿರುವುದರಿಂದ ಮುಂದಿನ ವಾರ ಅಭ್ಯರ್ಥಿಗಳ ಹೆಸರು ಅಧಿಕೃತವಾಗಿ ಘೋಷಣೆಯಾಗಲಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ನನಗೂ ನನ್ನ ಸಹೋದರನಿಗೂ ಯಾವುದೇ ಕೌಟುಂಬಿಕ, ಹಣಕಾಸಿನ ಸಂಬಂಧ ಇಲ್ಲ: ಪ್ರಹ್ಲಾದ್ ಜೋಶಿ ಸ್ಪಷ್ಟನೆ

**ನವದೆಹಲಿ, ಅ.18:** ಗೋಪಾಲ್ ಜೋಶಿ ನನ್ನ ಸಹೋದರ, ಅದರಲ್ಲಿ ಯಾವುದೇ ಅನುಮಾನವಿಲ್ಲ, ಆದರೆ ಈಗ ಅವರಿಗೂ ನನಗೂ ಯಾವುದೇ ಕೌಟುಂಬಿಕ ಹಾಗೂ ಹಣಕಾಸಿಕ ಸಂಬಂಧಗಳಿಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸ್ಪಷ್ಟಪಡಿಸಿದ್ದಾರೆ.

ಲೋಕಸಭೆ ಚುನಾವಣೆಗೆ ಟಿಕೆಟ್ ಕೊಡಿಸುವ ಆಮಿಷವೊಡ್ಡಿ ಗೋಪಾಲ್ ಜೋಶಿ ಎರಡು ಕೋಟಿ ರೂಪಾಯಿ ಮೋಸ ಮಾಡಿರುವ ಆರೋಪಕ್ಕೆ ಸಂಬಂಧಿಸಿದಂತೆ ದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಸ್ಪಷ್ಟನೆ ನೀಡಿದರು. ಗುರುವಾರ ನನ್ನ ಸಹೋದರನ ಮೇಲೆ ಎಫ್ಐಆರ್ ದಾಖಲಾಗಿದೆ, ಇಂದು ಕಾಂಗ್ರೆಸ್ ನಾಯಕರು ಪ್ರತಿಭಟನೆ ಮಾಡಿದ್ದಾರೆ, ನನಗೆ ಯಾರು



ಸಹೋದರಿ ಇಲ್ಲ, ನಾವು ನಾಲ್ವರು ಸಹೋದರರು, 1984 ರಲ್ಲಿ ಒಬ್ಬ ಸಹೋದರರ ತೀರಿ ಹೋದರು ಈಗ ಮೂವರು ಸಹೋದರರು ಇದ್ದೇವೆ. ಗೋಪಾಲ್ ಜೋಶಿ ಅವರು ನನ್ನ ಹಿರಿಯ ಸಹೋದರ ಇದರ ಜೊತೆಗೆ ಸಹೋದರಿ ಅಂತಲೂ ಬರುತ್ತಿದೆ ಅವರು ಯಾರು ಗೊತ್ತಿಲ್ಲ ಎಂದರು.

ನನ್ನ ಹಿರಿಯ ಸಹೋದರ ಗೋಪಾಲ್ ಜೋಶಿ ಅವರು ನಾನು ಬೇರೆಯಾಗಿ 33 ವರ್ಷವಾಗಿದೆ. ಈ ಹಿಂದೆಯೂ ಅವರ ವಿರುದ್ಧ ಎರಡು ಸಲ ಆರೋಪ ಕೇಳಿ ಬಂದಿತ್ತು ಅದಕ್ಕಾಗಿ ನಾನು ಹಿಂದೆಯೇ ಗೋಪಾಲ್ ಜೋಶಿ ಅವರೊಂದಿಗೆ ನನ್ನ ಹೆಸರು ಲಿಂಕ್ ಮಾಡಬಾರದು ಎಂದು ಕೋರ್ಟ್ ನಿಂದ ಆದೇಶ ತಂದಿದ್ದೇನೆ, ಸಾಮಾಜಿಕವಾಗಿ ಆರ್ಥಿಕವಾಗಿ ಯಾವುದೇ ಸಂಬಂಧ ಇಲ್ಲ ಎಂದು ಕೋರ್ಟ್ ಗೆ ಮಾಹಿತಿ ನೀಡಿದೆ ಐದು ಬಾರಿ ಸಂಸದ, ಬಿಜೆಪಿ ಜಿಲ್ಲಾ ಅಧ್ಯಕ್ಷನಾಗಿದ್ದೇನೆ, ಸಾರ್ವಜನಿಕ ಜೀವನದಲ್ಲಿದ್ದೇನೆ, ಯಾರಾದರೂ ಬಂದು ಪೋಟೊ ತೆಗೆಸಿಕೊಂಡಿದ್ದರೆ ಗೊತ್ತಿಲ್ಲ, ನನ್ನ ಮಕ್ಕಳ ಮದುವೆಗೆ ಸಹೋದರರನ್ನ ಅನಿವಾರ್ಯವಾಗಿ ಆಹ್ವಾನ ಮಾಡಿದ್ದು ಬಿಟ್ಟರೇ ಅವರಿಗೂ ನನಗೂ ಯಾವುದೇ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸಿದರು.

ದುಡ್ಡು ಕಳೆದುಕೊಂಡಿದ್ದು ದುರ್ದೈವ, ನನ್ನನ್ನು ಬಂಧಿಸಬೇಕು ಎನ್ನುವುದು ಕಾಂಗ್ರೆಸ್ ಬೌಧಿಕ ದಿವಾಳಿತನ ತೋರಿಸುತ್ತದೆ, ಇದಕ್ಕೂ ನನಗೂ ಯಾವುದೇ ಸಂಬಂಧ ಇಲ್ಲ, ಕಾನೂನು ಕ್ರಮ ಆಗಲಿ, ನಾನು ಶುದ್ಧ ಹಸ್ತದಿಂದ ಕೆಲಸ ಮಾಡುತ್ತಿದ್ದೇನೆ ನನ್ನ ಮೇಲೆ ಮಾಡಿರುವ ಆರೋಪಗಳೇಲ್ಲ ಬೋಗಸ್ ಕಾನೂನಿನ ಪ್ರಕಾರ ಏನು ಬೇಕಾದರೂ ಕ್ರಮವಾಗಲಿ ಎಂದರು.

# ಭವಾನಿ ರೇವಣ್ಣಗೆ ಸುಪ್ರೀಂಕೋರ್ಟ್ ರಿಲೀಫ್ ನಿರೀಕ್ಷಣಾ ಜಾಮೀನು ರದ್ದುಮಾಡಲು ನಕಾರ

**ನವದೆಹಲಿ, ಅ. 18 :** ಕೆ.ಆರ್ ನಗರ ಮೂಲದ ಮಹಿಳೆಯೊಬ್ಬರನ್ನು ಅಪಹರಿಸಿದ ಪ್ರಕರಣದಲ್ಲಿ ಮಾಜಿ ಸಚಿವ ಎಚ್‌ಡಿ ರೇವಣ್ಣ ಅವರ ಪತ್ನಿ ಭವಾನಿ ರೇವಣ್ಣ ಅವರಿಗೆ ನಿರೀಕ್ಷಣಾ ಜಾಮೀನು ನೀಡಿರುವುದನ್ನು ಪ್ರಶ್ನಿಸಿ ಕರ್ನಾಟಕ ರಾಜ್ಯ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ವಜಾಗೊಳಿಸಿದೆ. ಎಸ್‌ಐಟಿ ಸಲ್ಲಿಸಿದ್ದ ಅರ್ಜಿಯನ್ನು ನ್ಯಾ. ಸೂರ್ಯಕಾಂತ್ ನೇತೃತ್ವದ ದ್ವಿ ಸದಸ್ಯ ಪೀಠ ವಿಚಾರಣೆ ನಡೆಸಿತು.

ಎಸ್‌ಐಟಿ ವಾದ ವಾದಿಸಿದ ವಕೀಲರು, ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರುದಾರೆ ಮಹಿಳೆಯನ್ನು ಅಪಹರಣ ಮಾಡಲಾಗಿದೆ. ಇದರಲ್ಲಿ ಭವಾನಿ



ರೇವಣ್ಣ ನೇರವಾಗಿ ಭಾಗಿಯಾಗಿದ್ದಾರೆ, ಪ್ರತಿಷ್ಠಿತ ರಾಜಕೀಯ ಕುಟುಂಬದ ವ್ಯಕ್ತಿಯಾಗಿರುವ ಹಿನ್ನಲೆ ನಿರೀಕ್ಷಣಾ ಜಾಮೀನು ನೀಡಬಾರದು ಎಂದು ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ಪೀಠ ಆರೋಪಿ ಭವಾನಿ ರೇವಣ್ಣ 55–56 ವರ್ಷ ವಯಸ್ಸಿನ ಮಹಿಳೆಯಾಗಿದ್ದು, ಆಕೆಯ ಮಗ ಮಾಡಿದ ಅಪಹರಣಕ್ಕೆ ಪ್ರಚೋದನೆಗೆ ಸಂಬಂಧಿಸಿದ ಆರೋಪಗಳನ್ನು ಉಲ್ಲೇಖಿಸಿದೆ. ಪ್ರಮುಖ ರೋಪಿಯನ್ನು ಬಂಧಿಸಿ ಕಸ್ಟಡಿ ವಿಚಾರಣೆಗೆ ಒಳಪಡಿಸಲಾಗಿದೆ.

ಈಗ ಎಂದು ಕೋರ್ಟ್ ಗಮನಿಸಿತು. ಮುಖ್ಯವಾಗಿ ಪ್ರಕರಣದಲ್ಲಿ ಆರೋಪಪಟ್ಟಿಯನ್ನೂ ಸಲ್ಲಿಸಿರುವುದನ್ನು ಪರಿಗಣಿಸಿದ ನ್ಯಾಯಲಯ ನಿರೀಕ್ಷಣಾ ಜಾಮೀನು ನೀಡುವ ಹೈಕೋರ್ಟ್ ಆದೇಶದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ತೀರ್ಮಾನಿಸಿತು, ಎಸ್‌ಐಟಿ ಸಲ್ಲಿಸಿದ್ದ ಅರ್ಜಿಯನ್ನು ವಜಾ ಮಾಡಿತು. ಸುಪ್ರೀಂಕೋರ್ಟ್ ಆದೇಶದಿಂದ ಸದ್ಯ ಭವಾನಿ ರೇವಣ್ಣ ಬಂಧನದ ಭೀತಿಯಿಂದ ಪಾರಾಗಿದ್ದಾರೆ.



ಮೈಸೂರಿನ ದೇವಕೆರೆ ಚಾಮುಂಡಿ ಬೆಟ್ಟದಲ್ಲಿ ಶ್ರೀ ಚಾಮುಂಡೇಶ್ವರಿ ತೆಪ್ಪೋತ್ಸವ ಶುಕ್ರವಾರ ನಡೆಯಿತು.

# ಸಹೋದರನಿಂದ ಟಿಕೆಟ್ ವಂಚನೆ: ಪ್ರಲ್ಹಾದ್ ಜೋಶಿ ರಾಜೀನಾಮೆಗೆ ದಿನೇಶ್ ಗುಂಡೂರಾವ್ ಆಗ್ರಹ

**ಬೆಂಗಳೂರು, ಅ. 18 :** ಪ್ರಲ್ಹಾದ್ ಜೋಶಿಯವರ ಸಹೋದರ ಗೋಪಾಲ್ ಜೋಶಿಯರ ಮೇಲೆ ಟಿಕೆಟ್ ವಂಚನೆ ಪ್ರಕರಣ ದಾಖಲಾದ ಹಿನ್ನೆಲೆಯಲ್ಲಿ ಸಚಿವ ಪ್ರಲ್ಹಾದ್ ಜೋಶಿಯವರ ರಾಜೀನಾಮೆಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಆಗ್ರಹಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಗೋಪಾಲ್ ಜೋಶಿಯವರು ಪ್ರಲ್ಹಾದ್ ಜೋಶಿಯವರ ಜೊತೆಗೆ ಇದ್ದಾರೆ ಎಂಬುದು ಹುಬ್ಬಳ್ಳಿ ಭಾಗದ ಜನರಿಗೆ ಗೊತ್ತಿರುವ ಸಂಗತಿ. ಸಹೋದರ ಗೋಪಾಲ್ ಜೋಶಿಯವರ ಮೇಲೆ ಬಂದಿರುವ ಆರೋಪ, ನನಗೆ ಸಂಬಂಧವಿಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ನುಣಿಚಿಕೊಳ್ಳುವುದು ಸರಿಯಲ್ಲ. ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದರು.

ಮಾಜಿ ಶಾಸಕ ದೇವಾನಂದ ಚೌಹಾಣ್ ಗೌರವ ಹೊಂದಿರುವ ವ್ಯಕ್ತಿ. ಚೌಹಾಣ್ ಅವರಿಗೆ ಲೋಕಸಭೆಯಲ್ಲಿ ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಜೋಶಿಯವರ ಸಹೋದರ ಗೋಪಾಲ್ ಜೋಶಿ 2 ಕೋಟಿ ಹಣ ಪಡೆದು ವಂಚಿಸಿದ್ದಾರೆ. ಈ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ದೇನಾನಂದ ಚೌಹಾಣ್ ಅವರು ದಾಖಲೆ ಕೊಟ್ಟಿದ್ದಾರೆ. ಅಮಿತ್



ಶಾ ಅವರ ಹೆಸರನ್ನ ಬಳಸಿಕೊಳ್ಳಾಗಿದೆ. ಪ್ರಲ್ಹಾದ್ ಜೋಶಿಯವರ ಪ್ರಭಾವ ಬಳಿಸಿಕೊಂಡು ವಂಚಿಸಲಾಗಿದೆ. ಇಡಿ, ಐಟಿಯವರನ್ನ ಛೂ ಬಿಟ್ಟು ಹೆದರಿಸಿ ದೇವಾನಂದ ಚೌಹಾಣ್ ಅವರನ್ನ ಬಿಜೆಪಿ ಪಕ್ಷಕ್ಕೆ ಸೇರಿಸಿಕೊಂಡಿದ್ದರು. ಟಿಕೆಟ್ ಕೊಡಿಸುವುದಾಗಿ ಹೇಳಿ 2 ಕೋಟಿ ಹಣ ಪಡೆದು ವಂಚಿಸಿರುವುದು ಇದೀಗ ಬೆಳಕಿಗೆ ಬಂದಿದೆ. ಗೋಪಾಲ್ ಜೋಶಿಯವರು ಆರ್.ಎಸ್.ಎಸ್ ನಲ್ಲಿ ತೊಡಗಿಸಿಕೊಂಡವರು. ಆರ್.ಎಸ್.ಎಸ್‌ನ ಕೆಲ ನಾಯಕರು ಈ ರೀತಿಯ ಟಿಕೆಟ್ ದಂಧೆಯಲ್ಲಿ ತೊಡಗಿರುವ ಬಗ್ಗೆ ಹಲವು ಪ್ರಕರಣಗಳು ಬೆಳಕಿಗೆ ಬಂದಿವೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದರು.

**ಇಡಿ ಜನರ ವಿಶ್ವಾಸ ಕಳೆದುಕೊಂಡಿದೆ :** ಮುಡಾ ಪ್ರಕರಣದಲ್ಲಿ ಇಡಿ ಬಂದಿರುವುದೇ ಸಿಎಂ ಸಿದ್ದರಾಮಯ್ಯ ಅವರನ್ನ ಸಿಕ್ಕಿಹಾಕಿಸಬೇಕು ಎಂಬ



ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಹೋದರ ಗೋಪಾಲ್ ಜೋಶಿ ಚುನಾವಣೆಗೆ ಟಿಕೆಟ್ ಕೊಡಿಸುವುದಾಗಿ ವಂಚನೆ ಮಾಡಿರುವ ಹಿನ್ನೆಲೆಯಲ್ಲಿ ಕೂಡಲೇ ಜೋಶಿಯನ್ನು ಕೇಂದ್ರ ಸಚಿವ ಸಂಪುಟದಿಂದ ವಜಾ ಮಾಡಬೇಕು, ಗೋಪಾಲ್ ಜೋಶಿಯನ್ನು ಬಂಧಿಸಬೇಕೆಂದು ಕಾಂಗ್ರೆಸ್ ಕಾರ್ಯಕರ್ತರು ಬೆಂಗಳೂರಿನಲ್ಲಿ ಧರಣಿ ನಡೆಸಿದರು.

ದುರುದ್ದೇಶದಿಂದ. ಈ ರೀತಿಯ ನಡವಳಿಕೆಗಳಿಂದಾಗಿ ಇಡಿ ಜನರ ವಿಶ್ವಾಸವನ್ನ ಕಳೆದುಕೊಂಡಿದೆ ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಮುಡ ಕಚೇರಿ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ ಸಂಬಂಧ ಪ್ರತಿಕ್ರಿಯೆ ನೀಡಿದ ಸಚಿವರು, ಇಡಿ ಒಂದು ಸ್ವಾಯತ್ತ ಸಂಸ್ಥೆಯಾಗಿ ಕೆಲಸ ಮಾಡುತ್ತಿಲ್ಲ. ಕೇಂದ್ರದ ಕೈಗೊಂಬೆಯಾಗಿದೆ. ಕಳೆದ 10 ವರ್ಷದಲ್ಲಿ ಬಿಜೆಪಿಯವರ ಬಂಧನವಾಗಿದೆಯಾ. ವಿಪಕ್ಷ ನಾಯಕರು ಎಲ್ಲಿ ಇರ್ತಾರೆ ಅಲ್ಲಿ ಮಾತ್ರ ಇಡಿ, ಐಟಿ ಛೂ ಬಿಡ್ತಾರೆ ಎಂದರು. ವಿರೋಧ ಪಕ್ಷದ ನಾಯಕರು ಇರುವ ಕಡೆ ಇಡಿ ಸಿಬಿಐವರು ಬರ್ತಾರೆ. ಕೇಜ್ರಿವಾಲ್, ಸೂರೇನ್, ಡಿಕೆಶಿಯನ್ನ ಜೈಲಿಗೆ ಹಾಕಿದ್ರು. ಯಡಿಯೂರಪ್ಪ, ವಿಜಯೇಂದ್ರ ಯಾಕೆ ಕಣ್ಣಿಗೆ ಕಾಣಲ್ಲ.

ಈ ಕಾನೂನು ದುರ್ಬಳಕೆ ಆಗುತ್ತಿದೆ. ಹೇಗಾದರು ಸರಿ ಸಿಎಂ ಅವರನ್ನು ಸಿಕ್ಕಿಸಬೇಕು ಎಂದು ವ್ಯವಸ್ಥಿತವಾದ ಸಂಚು ನಡೆದಿದೆ. ಸಿಎಂ ಅವರ ಹೆಸರು ಹೇಳಲು ಇಡಿ ಒತ್ತಡ ಹಾಕಿದರು ಎಂದು ಮಾಜಿ ಸಚಿವ ನಾಗೇಂದ್ರ ಕೂಡ ಹೇಳಿದ್ದಾರೆ. ಹೆದರಿಸುವ ಕೆಲಸ ಇಡಿ ಮಾಡುತ್ತಿದೆ ಎಂದು ದಿನೇಶ್ ಗುಂಡೂರಾವ್ ಕಟು ಟೀಕೆ ಮಾಡಿದರು.

# ರಾಜ್ಯತ್ವ ಮರುಸ್ಥಾಪನೆ ನಿರ್ಣಯ ಮಾಡಿದ ಜಮ್ಮು-ಕಾಶ್ಮೀರ ಸಂಪುಟ



**ಶ್ರೀನಗರ, ಅ. 18:** ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ನೇತೃತ್ವದ ಜಮ್ಮು ಮತ್ತು ಕಾಶ್ಮೀರ ಸಚಿವ ಸಂಪುಟ ತನ್ನ ಮೊದಲ ಸಭೆಯಲ್ಲೇ ರಾಜ್ಯತ್ವವನ್ನು ಮರುಸ್ಥಾಪಿಸುವ ನಿರ್ಣಯವನ್ನು ಅಂಗೀಕರಿಸಿದೆ. ನಿರ್ಣಯದ ಕರಡನ್ನು ಸಿದ್ಧಪಡಿಸಲಾಗಿದ್ದು, ಜಮ್ಮು-ಕಾಶ್ಮೀರಕ್ಕೆ ರಾಜ್ಯ ಸ್ಥಾನಮಾನವನ್ನು ಮರುಸ್ಥಾಪಿಸುವಂತೆ ಒತ್ತಾಯಿಸಿ ನಿರ್ಣಯದ ಕರಡನ್ನು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಹಸ್ತಾಂತರಿಸಲು ಮುಖ್ಯಮಂತ್ರಿಗಳು ಒಂದೆರಡು ದಿನಗಳಲ್ಲಿ ನವದೆಹಲಿಗೆ ತೆರಳಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಉಪಮುಖ್ಯಮಂತ್ರಿ ಸುರೀಂದರ್ ಚೌಧರಿ ಮತ್ತು ಸಚಿವರಾದ ಸಕೀನಾ ಮಸೂದ್ ಇಟೂ, ಜಾವೇದ್ ಅಹ್ಮದ್ ರಾಣಾ, ಜಾವೈದ್ ಅಹ್ಮದ್ ದಾರ್ ಮತ್ತು ಸತೀಶ್ ಶರ್ಮಾ ಉಪಸ್ಥಿತರಿದ್ದರು. ಕಾಂಗ್ರೆಸ್ ಜೆಕೆಪಿಸಿಸಿ ಅಧ್ಯಕ್ಷ ತಾರಿಕ್ ಹಮೀದ್ ಕರ್ರಾ ಅವರು ರಾಜ್ಯ ಸ್ಥಾನಮಾನವನ್ನು ಪುನಃಸ್ಥಾಪಿಸದ ಹೊರತು ಪಕ್ಷವು ಸಂಪುಟಕ್ಕೆ ಸೇರುವುದಿಲ್ಲ ಎಂದು ಸುದ್ದಿಗಾರರಿಗೆ ತಿಳಿಸಿದ್ದರು. ಎನ್ಸಿ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಅವರು ಕೇಂದ್ರವು ಶೀಘ್ರದಲ್ಲೇ ಜೆ-ಕೆಗೆ ರಾಜ್ಯತ್ವವನ್ನು ಮರುಸ್ಥಾಪಿಸುತ್ತದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ನಾವು ಮೊದಲು ರಾಜ್ಯತ್ವದ ಬಗ್ಗೆ ಮಾತನಾಡಿದ್ದೇವೆ ಮತ್ತು ಇಂದಿಗೂ ಸಹ, ಎರಡು ತಿಂಗಳೊಳಗೆ ರಾಜ್ಯತ್ವವನ್ನು ಮರುಸ್ಥಾಪಿಸಲು ಕೋರಿ ಸಲ್ಲಿಸಲಾದ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಒಪ್ಪಿಕೊಂಡಿದೆ. ಕೇಂದ್ರ ಸರ್ಕಾರವು ಅದನ್ನು ಶೀಘ್ರದಲ್ಲೇ ಮರುಸ್ಥಾಪಿಸುತ್ತದೆ ಎಂದು ನನಗೆ ಖಾತ್ರಿಯಿದೆ ಎಂದು ಅಬ್ದುಲ್ಲಾ ಹೇಳಿದರು.

ನ್ಯಾಷನಲ್ ಕಾನ್ಫರೆನ್ಸ್ 370 ನೇ ವಿಧಿಯ ವಿಷಯವನ್ನು ಎತ್ತುತ್ತದೆಯೇ ಅಥವಾ ಅಸೆಂಬ್ಲಿಯಲ್ಲಿ ಅದರ ವಿರುದ್ಧ ನಿರ್ಣಯವನ್ನು ಅಂಗೀಕರಿಸುತ್ತದೆಯೇ ಎಂದು ಕೇಳಿದಾಗ, ಅಬ್ದುಲ್ಲಾ ಅವರು ತಮ್ಮ ವಾದಗಳನ್ನು ಮಂಡಿಸಲು ನ್ಯಾಯಾಲಯಕ್ಕೆ ಹಿಂತಿರುಗಬೇಕಾಗಿದೆ ಎಂದು ಹೇಳಿದರು. ಸಿಟಿ ಸೆಂಟರ್ ಲಾಲ್‌ಚೌಕ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ, ರಸ್ತೆಗಳಲ್ಲಿ ವಿಐಪಿ ಸಂಸ್ಕೃತಿ ಇರುವುದಿಲ್ಲ ಎಂದು ಅಬ್ದುಲ್ಲಾ ಹೇಳಿದರು. ಜನರು ಸೈರನ್ಗಳ ಕಿರಿಕಿರಿ ಶಬ್ದದಿಂದ ಮುಕ್ತರಾಗುತ್ತಾರೆ ಎಂದು ಪ್ರತಿಪಾದಿಸಿದರು. ಸಾರ್ವಜನಿಕರಿಗೆ ಕಿವಿಯನ್ನು ಕೆರಳಿಸುವ ಸೈರನ್ ಇನ್ನು ಮುಂದೆ ಬರುವುದಿಲ್ಲ, ಇಲ್ಲಿ ಸ್ಥಳೀಯರು ಅಥವಾ ರಾಜಕಾರಣಿಗಳು ಎಲ್ಲರೂ ಸಮಾನರು, ವಿಐಪಿಗಳಿಲ್ಲ ಎಂದು ಅವರು ಹೇಳಿದರು. ಹಿಂದಿನ ಜಮ್ಮು ಮತ್ತು ಕಾಶ್ಮೀರ ರಾಜ್ಯವನ್ನು ಜೆ-ಕೆ ಮತ್ತು ಲಡಾಖ್ನ ಎರಡು ಕೇಂದ್ರಾಡಳಿತ ಪ್ರದೇಶಗಳಾಗಿ ಆಗಸ್ಟ್ 5, 2019 ರಂದು ಕೇಂದ್ರ ಸರ್ಕಾರವು 370 ನೇ ವಿಧಿಯನ್ನು ರದ್ದುಗೊಳಿಸಿದಾಗ ವಿಭಜಿಸಲಾಯಿತು.

# ಸಿಎಂ ಮನೆ ಮೇಲೆ ಇ.ಡಿ ದಾಳಿ

**ಬೆಂಗಳೂರು, ಅ, 18 ;** ಮುಡಾ ಬಿಡಿ ನಿವೇಶನ ಹಂಚಿಕೆ ಹಾಗೂ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯ (ಇ.ಡಿ.) ಬೆಂಗಳೂರು ಹಾಗೂ ಮೈಸೂರಿನಲ್ಲಿ ದಾಳಿ ನಡೆಸಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಕ್ಕಟ್ಟಿಗೆ ಸಿಲುಕಿಸಲು ಕೇಂದ್ರ ಸರ್ಕಾರ ಕಾರ್ಯೋನ್ಮುಖವಾಗಿದೆ. ನ್ಯಾಯಾಲಯದ ಆದೇಶದ ನಂತರ ಸಿದ್ದರಾಮಯ್ಯ ಅವರ ಪತ್ನಿ ಪಾರ್ವತಿ ಸೇರಿದಂತೆ ಐವರ ವಿರುದ್ಧ ಲೋಕಾಯುಕ್ತ ಎಫ್‌ಐಆರ್ ದಾಖಲಿಸಿ ತನಿಖೆ ಆರಂಭಿಸಿರುವ ಬೆನ್ನಲ್ಲೇ ಇ.ಡಿ. ದಾಳಿ, ಕಾಂಗ್ರೆಸ್ ಸರ್ಕಾರವನ್ನು ಸಂಕಷ್ಟಕ್ಕೆ ದೂಡಲು ಕಾರ್ಯೋನ್ಮುಖವಾಗಿದೆ.

ಮೈಸೂರು ನಗರಾಭಿವೃದ್ಧಿ



ನಿವೇಶನ ಹಂಚಿಕೆ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆಯಾಗಿದ್ದು, ಜಾರಿ ನಿರ್ದೇಶನಾಲಯ ಶುಕ್ರವಾರ ಎರಡು ಕಡೆ ದಾಳಿ ನಡೆಸಿ ದಾಖಲಾತಿಗಳನ್ನು ಪರಿಶೀಲಿಸಿದ್ದು, ಸಂಬಂಧಪಟ್ಟವರ ವಿಚಾರಣೆ ಆರಂಭಿಸಿದೆ. ಕೇಂದ್ರ ಸರ್ಕಾರದ ತನಿಖಾ ಸಂಸ್ಥೆಯಾದ ಜಾರಿ ನಿರ್ದೇಶನಾಲಯದ 20ಕ್ಕೂ ಹೆಚ್ಚು ಅಧಿಕಾರಿಗಳ ತಂಡ ಇಂದು ಮೈಸೂರಿನ ಮುಡಾ ಕಚೇರಿ ಹಾಗೂ ಕೆಂಗೇರಿಯಲ್ಲಿರುವ ಜಮೀನಿನ ಮಾಲೀಕ 4ನೇ ಆರೋಪಿ ದೇವರಾಜು ಅವರ ಮನೆ ಮೇಲೆ ದಾಳಿ ನಡೆಸಿದ್ದಾರೆ. ಈ ಬೆಳವಣಿಗೆ ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕುಟಂಬಕ್ಕೆ ಮುಡಾದಿಂದ ಬದಲಿ ನಿವೇಶನ ನೀಡಿರುವ ಪ್ರಕರಣ ಸುನಾಮಿಯನ್ನೇ ಎದುರಿಸಿತ್ತು. ಸಾಮಾಜಿಕ ಕಾರ್ಯಕರ್ತರಾದ ಸ್ನೇಹಮಯಿ ಕೃಷ್ಣ, ಟಿ.ಜೆ.ಅಬ್ರಹಾಂ ಹಾಗೂ ಜೆಡಿಎಸ್ ಮುಖಂಡ ಪ್ರದೀಪ್‌ಕುಮಾರ್ ಹಗರಣದ ತನಿಖೆ ನಡೆಸಬೇಕೆಂದು ಲೋಕಾಯುಕ್ತ ಮತ್ತು ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯದ ಮೊರೆ ಹೋಗಿದ್ದರು. ಕಾನೂನು ತೊಡಕು ನಿವಾರಿಸುವ ಸಲುವಾಗಿ ರಾಜ್ಯಪಾಲರಿಂದ ಸೂಕ್ತ ಪೂರ್ವಾನುಮತಿ ಪಡೆದು ಪ್ರಕರಣ ಮುಂದುವರೆಸಲಾಗಿದೆ. ಹೈಕೋರ್ಟ್ ಮತ್ತು ಕೆಳಹಂತದ ನ್ಯಾಯಾಲಯದ ನಿರ್ದೇಶನದ ಮೇರೆಗೆ ಮೈಸೂರು ಲೋಕಾಯುಕ್ತ ಪೊಲೀಸರು ಪ್ರಕರಣ ದಾಖಲಿಸಿ ವಿಚಾರಣೆ ನಡೆಸಿದ್ದರು.

ಈವರೆಗೂ 3ನೇ ಆರೋಪಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಾಮೈದ ಮಲ್ಲಿಕಾರ್ಜುನ ಸ್ವಾಮಿ ಹಾಗೂ 4ನೇ ಆರೋಪಿಯಾಗಿರುವ ಜಮೀನು ಮಾಲೀಕ ದೇವರಾಜು ಅವರ ವಿಚಾರಣೆ ಮಾತ್ರ ನಡೆದಿದೆ. ಮೊದಲನೆ ಹಾಗೂ 2ನೇ ಆರೋಪಿಗಳಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ ಅವರ ಹೇಳಿಕೆಗಳು ದಾಖಲಾಗಿಲ್ಲ. ಈ ನಡುವೆ ದೂರುದಾರರಾದ ಸ್ನೇಹಮಯಿ ಕೃಷ್ಣ, ಕೇಂದ್ರ ತನಿಖಾ ಸಂಸ್ಥೆಗಳಾದ ಸಿಬಿಐ ಅಥವಾ ಇಡಿಯಿಂದ ಮಾತ್ರ ನಿಷ್ಪಕ್ಷಪಾತ ತನಿಖೆ ಸಾಧ್ಯ ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಾ ಬಂದಿದ್ದಾರೆ. ಜಾರಿ ನಿರ್ದೇಶನಾಲಯಕ್ಕೆ ಖುದ್ದು ದೂರು ನೀಡಿ ದಾಖಲೆಗಳನ್ನು ಸಲ್ಲಿಸಿರುವುದಲ್ಲದೆ ಹೇಳಿಕೆ ನೀಡಿದರು.

# ಪುನಃಶ್ಚೇತನವಾಗದ ಬೇರೆ ಕಾರ್ಖಾನೆಗಳ ಬಗ್ಗೆ ಎಚ್‌ಡಿಕೆ ಮಾತನಾಡುವುದಿಲ್ಲ ಏಕೆ

**ಬೆಂಗಳೂರು, ಅ. 18 :** ಬೆಂಗಳೂರಿಗೆ ಬಂದಾಗಲೆಲ್ಲಾ ಎಚ್.ಎಂ.ಟಿ., ಕೆ.ಐ.ಓ.ಸಿ.ಎಲ್. ಬಗ್ಗೆ ಮಾತನಾಡುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, 10 ವರ್ಷವಾದರೂ ಆರಂಭವೇ ಆಗದ ಎನ್.ಎಂ.ಡಿ.ಸಿ. ಉಕ್ಕು ಕಾರ್ಖಾನೆ, ಪುನಶ್ಚೇತನ ಆಗದ ವಿಐಎಸ್‌ಎಲ್ ಬಗ್ಗೆ ಏಕೆ ಮಾತನಾಡುವುದಿಲ್ಲ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ತಿರುಗೇಟು ನೀಡಿದ್ದಾರೆ. ವಿಕಾಸಸೌಧ ದಲ್ಲಿರುವ ತಮ್ಮ ಕಚೇರಿಯಲ್ಲಿ ಸುದ್ದಿಗಾರರು, ಹಿಂದೂಸ್ತಾನ್ ಮಶೀನ್ ಅಂಡ್ ಟೂಲ್ಸ್ ಹಾಗೂ ಕುದುರೆಮುಖ ಕಬ್ಬಿಣ ಮತ್ತು ಅದಿರು ಸಂಸ್ಥೆ ವಿಷಯದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಹಸಿ ಸುಳ್ಳು ಹೇಳುತ್ತಿದೆ ಎಂದು ಕುಮಾರಸ್ವಾಮಿ ಆರೋಪಿಸಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಎಚ್.ಎಂ.ಟಿ. ಭೂಮಿ ಡಿನೋಟಿಫಿಕೇಷನ್ ಆಗಿಲ್ಲ ಎಂಬುದು ಸುಳ್ಳೆ, ಅರಣ್ಯೇತರ ಉದ್ದೇಶಕ್ಕೆ ಪರಿವರ್ತನೆ ಆಗದ ಭೂಮಿ ಅರಣ್ಯವಾಗೇ ಉಳಿಯುತ್ತದೆ ಎಂಬುದು ಸುಳ್ಳೇ ಎಚ್.ಎಂ.ಟಿ. 300 ಕೋಟಿ ರೂ.ಗೆ 165 ಎಕರೆ ಅರಣ್ಯ ಭೂಮಿ ಮಾರಾಟ ಮಾಡಿರುವುದು ಸುಳ್ಳೇ? ಎಂದು ಪ್ರಶ್ನಿಸಿದರು. ಕೆ.ಐ.ಓ.ಸಿ.ಎಲ್. ಗಣಿಗಾರಿಕೆ ಮಾಡುವಾಗ ಪರಿಸರವನ್ನು ಹಾಳು ಮಾಡಿರುವುದು ಸುಳ್ಳೆ, ಅರಣ್ಯ ಇಲಾಖೆಗೆ ಕೆ.ಐ.ಓ.ಸಿ.ಎಲ್. ಭೂಮಿಯನ್ನು ಹಸ್ತಾಂತರ ಮಾಡದಿರುವುದು ಸುಳ್ಳೇ ದೇವದಾರಿ ಗಣಿಗೆ ಅರಣ್ಯ ಭೂಮಿ ನೀಡಬಾರದು ಎಂದು ಅರಣ್ಯ ಇಲಾಖೆ 2020ರ ಜನವರಿ 16ರಂದು ಶಿಫಾರಸ್ಸು ಮಾಡಿರುವುದು ಸುಳ್ಳೆ ಅರಣ್ಯ ಇಲಾಖೆಯ ವಿರೋಧವಿದ್ದರೂ, ಅಂದಿನ ಬಿಜೆಪಿ ಸರ್ಕಾರ ಗಣಿಗಾರಿಕೆಗೆ ಅನುಮತಿ ನೀಡುವಂತೆ 2020ರ ಅ. 9ರಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಸುಳ್ಳೆ ಅರಣ್ಯ ಇಲಾಖೆಯ ಪ್ರತಿರೋಧವಿದ್ದ ಗಣಿ ಯೋಜನೆಗೆ ಕೇಂದ್ರ ಪರಿಸರ ಸಚಿವಾಲಯ 2021 ಆ. 13ರಂದು ಅನುಮತಿ ನೀಡಿದ್ದು ಸುಳ್ಳೆ ಯಾವುದು



ಹಸಿಸುಳ್ಳು ಎಂದು ಮರು ಪ್ರಶ್ನೆ ಮಾಡಿದರು. ಕೆ.ಐ.ಓ.ಸಿ.ಎಲ್.ನ 300 ಹೊರಗುತ್ತಿಗೆ ನೌಕರರ ಉದ್ಯೋಗದ ಬಗ್ಗೆ ಮಾತನಾಡುವ ಕುಮಾರ ಸ್ವಾಮಿ, 50 ಸಾವಿರ ಉದ್ಯೋಗ ಸೃಷ್ಟಿಸುವ ಮತ್ತು ತಾವೇ ನಿರ್ವಹಿಸುತ್ತಿರುವ ಉಕ್ಕು ಸಚಿವಾಲಯದಡಿ ಬರುವ ರಾಷ್ಟ್ರೀಯ ಖನಿಜ ಅಭಿವೃದ್ಧಿ ನಿಗಮ (ಎನ್.ಎಂ.ಡಿ.ಸಿ.)ದ ಉಕ್ಕು ಕಾರ್ಖಾನೆ ಸ್ಥಾಪನೆ ಮತ್ತು ಭದ್ರಾವತಿಯ ವಿಶ್ವೇಶ್ವರಯ್ಯ ಉಕ್ಕು ಮತ್ತು ಕಬ್ಬಿಣ ಕಾರ್ಖಾನೆ ಪುನಶ್ಚೇತನದ ಬಗ್ಗೆ ಏಕೆ ಚಕಾರ ಎತ್ತುತ್ತಿಲ್ಲ ಎಂದು ಕೇಳಿದರು.

ಎನ್.ಎಂ.ಡಿ.ಸಿ. 2014ರಲ್ಲಿಯೇ ಬಳ್ಳಾರಿ ಜಿಲ್ಲೆಯಲ್ಲಿ ಉಕ್ಕು ಕಾರ್ಖಾನೆ ಆರಂಭಿಸುವುದಾಗಿ ಹೇಳಿ ಸಾವಿರಾರು ಎಕರೆ ಭೂಮಿ ಪಡೆದಿದೆ. 10 ವರ್ಷ ಕಳೆದರೂ ಈ ಕಾರ್ಖಾನೆ ಆರಂಭವೇ ಆಗಿಲ್ಲ. ವಿಶಾಖಪಟ್ಟಣದ ರಾಷ್ಟ್ರೀಯ ಉಕ್ಕು ಕಾರ್ಖಾನೆಯನ್ನು, ಕೇಂದ್ರ ವಿತ್ತ ಸಚಿವ ನಿರ್ಮಲಾ ಸೀತಾರಾಮನ್ ಹಾಗೂ ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರ ಒತ್ತಾಸೆಯ ಮೇರೆಗೆ ಕೇವಲ ನಲವತ್ತೆಂಟು ಗಂಟೆಗಳ ಒಳಗಾಗಿ ಪುನಶ್ಚೇತನ ಮಾಡಿದ್ದಾಗಿ ಅವರು ಹೇಳಿದ್ದಾರೆ. ಎನ್.ಎಂ.ಡಿ.ಸಿ.ಗೆ ಕೇಂದ್ರ ಹಣಕಾಸು ಸಚಿವರಿಂದ ದುಡಿಯುವ ಬಂಡವಾಳ ಕೊಡಿಸಿ ಉಕ್ಕು ಕಾರ್ಖಾನೆ ಆರಂಭಿಸಿದರೆ 50 ಸಾವಿರ ಜನರಿಗೆ ಉದ್ಯೋಗ ಕೊಡಬಹುದಲ್ಲವೇ ಎಂದು ಪ್ರಶ್ನಿಸಿದರು.

ಬಳ್ಳಾರಿ ಬಳಿ ವೇಣಿವೀರಾಪುರದಲ್ಲಿ 2857.54 ಎಕರೆ ಜಮೀನನ್ನು 2014ರಲ್ಲೇ ರಾಜ್ಯ ಸರ್ಕಾರ ಎನ್.ಎಂ.ಡಿ.ಸಿ.ಗೆ ನೀಡಿದೆ. ಭೂ ಸ್ವಾಧೀನಪತ್ರ ದೊರೆತ 5 ವರ್ಷದಲ್ಲಿ ಉಕ್ಕು ಕಾರ್ಖಾನೆ ಆರಂಭವಾಗಬೇಕಿತ್ತು, ಆದರೆ ದಶಕ ಕಳೆದರೂ ಏಕೆ ಕಾರ್ಖಾನೆ ಆರಂಭ ಆಗಿಲ್ಲ. ಇತ್ತ ಈ ಭೂಮಿಯಲ್ಲಿ ರೈತರು ಬೆಳೆಯೂ ಬೆಳೆಯದಂತೆ ಆಗಿದೆ. ಸಾಗುವಳಿ ಮಾಡಲಾಗದೆ, ಕೆಲಸವೂ ಸಿಗದೆ ಸಂಕಷ್ಟದಲ್ಲಿರುವ ರೈತರ ಪರವಾಗಿ ಕುಮಾರಸ್ವಾಮಿ ಮಾತನಾಡಲಿ ಎಂದು ಸಚಿವರು ಹೇಳಿದರು.

**ದೇವದಾರಿ ದಟ್ಟಡವಿ, ಕುರುಚಲು ಕಾಡಲ್ಲ :** ದೇವದಾರಿ ಗಣಿಗಾರಿಕೆಯ ಸಂಪೂರ್ಣ ಯೋಜನಾ ವೆಚ್ಚವೇ 1783 ಕೋಟಿ. ಈ ಗಣಿ ಆರಂಭ ವಾದರೆ ಸಾವಿರಾರು ಎಕರೆ ಅರಣ್ಯ ಭೂಮಿ ನಾಶವಾಗಲಿದೆ, ಒಂದು ಲಕ್ಷ ವೃಕ್ಷಗಳಿಗೆ ಕೊಡಲಿ ಪೆಟ್ಟು ಬೀಳಲಿದೆ. ದೇವದಾರಿ ಗಣಿಗೆ ಗುರುತು ಮಾಡಿರುವ ಅರಣ್ಯ ಪ್ರದೇಶ ಕುರುಚಲು ಕಾಡು ಎಂದು ಕುಮಾರಸ್ವಾಮಿ ಹೇಳಿದ್ದಾರೆ. ಅದು ಎಲೆ ಉದುರುವ ನೈಸರ್ಗಿಕ ಕಾನನ ಮೊದಲು ಅವರು ಆ ಕಾಡಿಗೆ ಭೇಟಿ ನೀಡಿ ನೋಡಿ ಬಂದು ನಂತರ ಮಾತನಾಡಲಿ ಎಂದು ಸಲಹೆ ಮಾಡಿದರು.

# ಡಾ. ಬ್ರಿಜೇಶ್ ಭೈರಪ್ಪಗೆ ಪ್ರತಿಷ್ಠಿತ ಮಯೂರವರ್ಮ ರಾಜ್ಯ ಪ್ರಶಸ್ತಿ ಗೌರವ



**ಬೆಂಗಳೂರು, ಅ.18:** ಸ್ವರತರಂಗ ಸೇವಾ ಚಾರಿಟೇಬಲ್ ಟ್ರಸ್ಟ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ಅಯೋಜಿಸಲಾಗಿದ್ದ ಕನ್ನಡ ದೇಶದ ಪಿತಾಮಹ ಕದಂಬ ದೊರೆ ಮಯೂರವರ್ಮ ಪ್ರಶಸ್ತಿ ಪ್ರದಾನ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಡಾ. ಬ್ರಿಜೇಶ್ ಭೈರಪ್ಪರನ್ನು ಆಹ್ವಾನಿಸಿ, ಅವರಿಗೆ ಮಯೂರ ವರ್ಮ ರಾಜ್ಯ ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಿವೃತ್ತ ಸಹಾಯಕ ಪೊಲೀಸ್ ಆಯುಕ್ತ ಎಸ್ ಬಿ ಛಬ್ಬಿ, ಪದ್ಮಶ್ರೀ ಪ್ರಶಸ್ತಿ ಪುರಸ್ಕೃತರಾದ ಜೋಗತಿ ಮಂಜಮ್ಮ, ಪೂಜ್ಯಶ್ರೀ ಕೃಷ್ಣಮೂರ್ತಿ ಮಹಾ ಸ್ವಾಮಿಗಳು, ಮಲೈ ಮಹದೇಶ್ವರ ಬೆಟ್ಟ,. ರವಿಕೋಟಿ ಸೂರ್ಯ, ರವಿಕುಮಾರ್, ಡಾ.ಪೂರ್ಣಿಮಾ, ಡಾ ಲಕ್ಷ್ಮಮ್ಮ, ಡಾ.ಸಿ.ಎಂ.ಗಣೇಶ ಗೌಡ, ಕೆ.ರಾಜು, ಎಚ್.ಕೆ.ಗೋವಿಂದೇಗೌಡ ಹಾಜರಿದ್ದರು.

## ಜಿಗ್ನೇಶ್ ಮೇವಾನಿಗೆ ಅಗೌರವ; ಐಪಿಎಸ್ ಅಧಿಕಾರಿ ವಿರುದ್ಧ ಪ್ರತಿಭಟನೆ



**ಅಹಮದಾಬಾದ್, ಅ. 18 :** ವಡ್ಗಾಮ್ ಶಾಸಕ ಜಿಗ್ನೇಶ್ ಮೇವಾನಿ ಅವರೊಂದಿಗೆ ಅನುಚಿತವಾಗಿ ವರ್ತಿಸಿದ ಆರೋಪದ ಮೇಲೆ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ರಾಜಕುಮಾರ್ ಪಾಂಡಿಯನ್ ಅವರನ್ನು 24 ಗಂಟೆಗಳ ಒಳಗೆ ಹುದ್ದೆಯಿಂದ ವಜಾಗೊಳಿಸಲು ರಾಷ್ಟ್ರೀಯ ದಲಿತ ಅಧಿಕಾರ್ ಮಂಚ್ ಮತ್ತು ಇತರ ಸಂಬಂಧಿತ ಗುಂಪುಗಳು ಗುರುವಾರ ಕೋರಿವೆ. ಐಪಿಎಸ್ ಅಧಿಕಾರಿ ರಾಜಕುಮಾರ್ ಪಾಂಡಿಯನ್ ಅವರೊಂದಿಗಿನ ಜಗಳದಲ್ಲಿ ಕಾಂಗ್ರೆಸ್ ಶಾಸಕ ಜಿಗ್ನೇಶ್ ಮೇವಾನಿ ಅವರಿಗಾದ ಅಗೌರವದಿಂದ ಕುಪಿತಗೊಂಡಿರುವ ಗುಜರಾತ್‌ನ ದಲಿತ ಸಮುದಾಯವು ಅ. 23 ರಂದು ಪೊಲೀಸ್ ಪ್ರಧಾನ ಕಚೇರಿಯ ಹೊರಗೆ ಪ್ರತಿಭಟನೆಯನ್ನು ಆಯೋಜಿಸುತ್ತಿದೆ. ಮಂಗಳವಾರ ಪೊಲೀಸ್ ಕೇಂದ್ರ ಕಚೇರಿಯಲ್ಲಿ ದಲಿತರ ಸಮಸ್ಯೆಗಳನ್ನು ಮಂಡಿಸಲು ಹೋದ ಮೇವಾನಿ ಅವರನ್ನು ಐಪಿಎಸ್ ಪಾಂಡಿಯನ್ ಅವರು ಮೊಬೈಲ್ ಫೋನ್ ಹೊರಗೆ ಬಿಡುವಂತೆ ಕೇಳಿದಾಗ ಮೇವಾನಿ ಮತ್ತು ಐಪಿಎಸ್ ಪಾಂಡಿಯನ್ ನಡುವೆ ತೀವ್ರ ವಾಗ್ವಾದ ನಡೆಯಿತು.

ಅ. 15 ರಂದು, ಕಛ್ ಜಿಲ್ಲೆಯಲ್ಲಿ ಕೃಷಿ ಭೂ ಸೀಲಿಂಗ್ ಕಾಯ್ದೆಯಡಿ ದಲಿತರಿಗೆ ಮಂಜೂರು ಮಾಡಲಾದ ಭೂಮಿ ಒತ್ತುವರಿ ಸೇರಿದಂತೆ ಗುಜರಾತ್‌ನಲ್ಲಿ ದಲಿತರ ಸಮಸ್ಯೆಗಳನ್ನು ಚರ್ಚಿಸಲು ಮೇವಾನಿ ಪಾಂಡಿಯನ್ ಅವರನ್ನು ಭೇಟಿಯಾಗಿದ್ದರು. ಐಪಿಎಸ್ ಪಾಂಡಿಯನ್ ಸೇರಿದಂತೆ ಅಧಿಕಾರಿಗಳು ತಮ್ಮ ಸಮಸ್ಯೆಗಳಿಗೆ ಕಿವಿಗೊಡುವುದಿಲ್ಲ ಎಂದು ದಲಿತರು ಆರೋಪಿಸಿದರು. ಯಾರೂ ನಮ್ಮ ಮಾತನ್ನು ಕೇಳಲು ಬಯಸುವುದಿಲ್ಲ ಎಂದು ಹೇಳುವ ಮೂಲಕ ಪೊಲೀಸ್ ಅಧಿಕಾರಿಗಳ ನಡವಳಿಕೆ ಬದಲಾಗಿದೆ ಎಂದು ಅವರು ಹೇಳಿದ್ದಾರೆ. ಅಹಮದಾಬಾದ್‌ನಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಆರ್‌ಡಿಎಎಮ್‌ಎನ್ ಗುಜರಾತ್ ರಾಜ್ಯ ಸಂಚಾಲಕ ಸುಬೋಧ್ ಕುಮುದ್, ದಲಿತ ಶಾಸಕರಾಗಿದ್ದ ಮೇವಾನಿ ಅವರನ್ನು ಭೇಟಿ ಮಾಡಲು ಹೋದಾಗ ಪಾಂಡಿಯನ್ ಅವರ ದುರಹಂಕಾರದ ವರ್ತನೆ ಸಹಿಸಲಾಗದು ಎಂದು ಹೇಳಿದರು.

ಪಾಂಡಿಯನ್ ಅವರಿಗೆ ಚೇಂಬರ್ ಹೊರಗೆ ಮೊಬೈಲ್ ಫೋನ್ ಇಡಬೇಕಿತ್ತು. ರೆಕಾರ್ಡ್ ಆಗುವಂತಹದದ್ದು ಅವರು ಚೇಂಬರ್‌ನಲ್ಲಿ ಏನು ಮಾಡುತ್ತಿದ್ದಾರೆ. ಗುಜರಾತ್‌ನಲ್ಲಿ ದಲಿತರ ಸಮಸ್ಯೆಗಳನ್ನು ಆಲಿಸುವ ಜವಾಬ್ದಾರಿಯನ್ನು ಸರ್ಕಾರ ಪಾಂಡ್ಯನ್‌ಗೆ ನೀಡಿದೆ ಎಂದು ಅವರು ಹೇಳಿದರು. ಚುನಾಯಿತ ಪ್ರತಿನಿಧಿಯೊಂದಿಗೆ ಅವರು ಈ ರೀತಿ ವರ್ತಿಸುತ್ತಿದ್ದರೆ, ಸಾಮಾನ್ಯ ದಲಿತರಿಗೆ ಅವರು ಏನು ಮಾಡುತ್ತಾರೆಂದು ಊಹಿಸಿ. ಮುಂದಿನ 24 ಗಂಟೆಗಳಲ್ಲಿ ಸರ್ಕಾರ ಅವರನ್ನು ಎಡಿಜಿಪಿ ಉಸ್ತುವಾರಿಯಿಂದ ತೆಗೆದುಹಾಕದಿದ್ದರೆ ಹೋರಾಟ ಅನಿವಾರ್ಯ ಎಂದು ಕುಮುದ್ ಹೇಳಿದರು.

ಮುಂಬರುವ ವಾವ್ ವಿಧಾನಸಭಾ ಕ್ಷೇತ್ರದ ಉಪಚುನಾವಣೆ ಮತ್ತು ಮಹಾರಾಷ್ಟ್ರದ ಸಾರ್ವತ್ರಿಕ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ವಿರುದ್ಧ ಪ್ರಚಾರ ಮಾಡುವ ಮೂಲಕ ದಲಿತರು ತಮ್ಮ ಶಕ್ತಿಯನ್ನು ತೋರಿಸಲಿದ್ದಾರೆ ಎಂದು ಎಚ್ಚರಿಕೆ ನೀಡಿದರು. ದಲಿತರ ನಿಯೋಗವು ಅ. 23 ರಂದು ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಮತ್ತು ಪೊಲೀಸ್ ಮಹಾನಿರ್ದೇಶಕರನ್ನು ಭೇಟಿ ಮಾಡಲಿದೆ ಎಂದು ಕುಮುದ್ ಹೇಳಿದರು. ದಲಿತ ಸಮುದಾಯದ ಸಮಸ್ಯೆಗಳನ್ನು ಪರಿಹರಿಸಲು, ಕಾಂಗ್ರೆಸ್ ಶಾಸಕ ಜಿಗ್ನೇಶ್ ಮೇವಾನಿ ಮತ್ತು ಕಾಂಗ್ರೆಸ್‌ನ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಹಿತೇಶ್ ಪಿತಾಡಿಯಾ ಮಂಗಳವಾರ ಹೆಚ್ಚುವರಿ ಮಹಾನಿರ್ದೇಶಕ (ಎಡಿಜಿ) ರಾಜಕುಮಾರ್ ಪಾಂಡಿಯನ್ ಅವರನ್ನು ಭೇಟಿ ಮಾಡಲು ತೆರಳಿದ್ದರು.

ಎಡಿಜಿ ಪಾಂಡಿಯನ್ ಅವರು ತಮ್ಮ ಫೋನ್‌ಗಳನ್ನು ಕಚೇರಿಯ ಹೊರಗೆ ಬಿಡಲು ಶಾಸಕ ಮತ್ತು ಪಿತಾಡಿಯಾ ಅವರನ್ನು ಕೇಳಿದಾಗ ಘರ್ಷಣೆ ಪ್ರಾರಂಭವಾಯಿತು. ಇದಕ್ಕೆ ಪ್ರತಿಕ್ರಿಯಿಸಿದ ಮೇವಾನಿ, ಹೆಚ್ಚಿನ ಸರ್ಕಾರಿ ಕಚೇರಿಗಳಲ್ಲಿ ಫೋನ್‌ಗಳನ್ನು ಅನುಮತಿಸಲಾಗಿರುವುದರಿಂದ ಸರ್ಕಾರವು ಫೋನ್‌ಗಳಿಗೆ ಸಂಬಂಧಿಸಿದಂತೆ ಯಾವುದೇ ಸೂಚನೆ ಅಥವಾ ಸುತ್ತೋಲೆಯನ್ನು ಹೊರಡಿಸಿದೆಯೇ ಎಂದು ತಿಳಿಯಲು ಪ್ರಯತ್ನಿಸಿದರು. ಇದರಿಂದ ಶಾಸಕ ಹಾಗೂ ಎಡಿಜಿಪಿ ನಡುವೆ ತೀವ್ರ ವಾಗ್ವಾದ ನಡೆಯಿತು.

ಶಾಸಕರಾಗಿ ಮಾಜಿ ಐಪಿಎಸ್ ಅಧಿಕಾರಿಯ ಘನತೆಗೆ ಭಂಗ ತಂದ ಆರೋಪದ ಮೇಲೆ ಮೇವಾನಿ ಅವರು ಗುಜರಾತ್ ಅಸೆಂಬ್ಲಿ ಸ್ಪೀಕರ್‌ಗೆ ಪತ್ರ ಬರೆದಿದ್ದಾರೆ. ಎರಡು ದಿನಗಳ ನಂತರ ಈ ಬೆಳವಣಿಗೆ ನಡೆದಿದೆ. ಘಟನೆಯ ನಂತರ ಮೇವಾನಿ ಲಿಖಿತ ಅರ್ಜಿಯನ್ನು ಸಲ್ಲಿಸಿದರು ಮತ್ತು ಐಪಿಎಸ್ ವಿರುದ್ಧ ವಿಸ್ತೃತ ತನಿಖೆಗೆ ಕರೆ ಒತ್ತಾಯಿಸಿದರು.

## ಭತ್ತ ಖರೀದಿ ವಿಳಂಬ: ರೈತರ ಪ್ರತಿಭಟನೆ



**ಅಮೃತಸರ, ಅ. 18 :** ಖಾರಿಫ್ ಮಾರುಕಟ್ಟೆ ಋತುವಿನಲ್ಲಿ ಭತ್ತದ ಖರೀದಿ ವಿಳಂಬವಾಗಿದೆ ಎಂದು ಆರೋಪಿಸಿ ಪ್ರತಿಭಟನೆ ನಡೆಸುತ್ತಿರುವ ರೈತ ಮುಖಂಡರು ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಅವರ ಮಾತುಕತೆಗೆ ಆಹ್ವಾನವನ್ನು ಸ್ವೀಕರಿಸಿದ್ದಾರೆ. ರಾಜ್ಯದಾದ್ಯಂತ ಧಾನ್ಯ ಮಾರುಕಟ್ಟೆಗಳು ಬೆಳೆಯನ್ನು ಖರೀದಿ ಮಾಡುವವರೆಗೆ ತಾವು ಚಂಡೀಗಢದಲ್ಲಿಯೇ ಇರುತ್ತೇವೆ ಎಂದು ರೈತರು ಪ್ರತಿಜ್ಞೆ ಮಾಡಿದ್ದಾರೆ. ಭತ್ತ ಖರೀದಿ ವಿಳಂಬ ಪ್ರತಿಭಟನಾನಿರತ ರೈತರು ಚಂಡೀಗಢದಿಂದ ಸಿಎಂ ಮಾನ್ ಅವರ ನಿವಾಸಕ್ಕೆ ಘೇರಾವ್ ಮಾಡಲು ಪ್ರಯತ್ನಿಸಿದ್ದು, ಆದರೆ ಅವರ ಹಲವಾರು ಮುಖಂಡರನ್ನು ಪಂಜಾಬ್ ಪೊಲೀಸರು ಬಂಧಿಸಿದ್ದಾರೆ. ಅವರಲ್ಲಿ ಕೆಲವರು ಸೆಕ್ಟರ್ 35 ರ ಕಿಸಾನ್ ಭವನವನ್ನು ತಲುಪಿದ್ದು, ಭವನ ಪ್ರವೇಶಿಸಲು ಯಶಸ್ವಿಯಾಗಿದ್ದಾರೆ.

ಭದ್ರತಾ ಪಡೆಗಳು ಬ್ಯಾರಿಕೇಡ್‌ಗಳನ್ನು ಹಾಕಿದ್ದು, ಕ್ಷಿಪ್ರ ಕಾರ್ಯಾಚರಣೆ ಪಡೆ ಪರಿಸ್ಥಿತಿಯ ಮೇಲೆ ನಿಗಾ ಇರಿಸಿದೆ ಎಂದು ವರದಿಯಾಗಿದೆ. ಭತ್ತ ಖರೀದಿ ವಿಳಂಬದ ವಿರುದ್ಧ ಸಂಯುಕ್ತ ಕಿಸಾನ್ ಮೋರ್ಚಾ, ಅಕ್ಕಿ ಗಿರಣಿದಾರರು ಮತ್ತು ಕಮಿಷನ್ ಏಜೆಂಟರು ರಾಜಧಾನಿ ಚಂಡೀಗಢಕ್ಕೆ ಮೆರವಣಿಗೆ ಮಾಡಲು ಕರೆ ನೀಡಿದ್ದರು. ನಿನ್ನೆ ಸಂಜೆ ಪಂಜಾಬ್ ಮುಖ್ಯಮಂತ್ರಿ ಭಗವಂತ್ ಮಾನ್ ಪ್ರತಿಭಟನಾ ನಿರತ ರೈತರನ್ನು ಮಾತುಕತೆಗೆ ಆಹ್ವಾನಿಸಿದ್ದಾರೆ. ಪ್ರತಿಭಟನೆ ಕುರಿತು ಮಾತನಾಡಿದ ಸಂಯುಕ್ತ ಕಿಸಾನ್ ಮೋರ್ಚಾ ಹಿರಿಯ ನಾಯಕ ಹರಿಂದರ್ ಸಿಂಗ್ ಲಖೋವಾಲ್, ಪಂಜಾಬ್ ಪೊಲೀಸರು ಮತ್ತು ಚಂಡೀಗಢ ಪೊಲೀಸರು ನಮ್ಮನ್ನು ತಡೆಯಲು ಪ್ರಯತ್ನಿಸಿದರು. ಆದರೆ ನಾವು ಚಂಡೀಗಢ ತಲುಪುವಲ್ಲಿ ಯಶಸ್ವಿಯಾಗಿದ್ದೇವೆ. ಕೆಲವು ರೈತರು ಮತ್ತು ಇತರ ಮುಖಂಡರನ್ನು ಪೊಲೀಸರು ಬಂಧಿಸಿದ್ದಾರೆ. ನಾವು ಕಿಸಾನ್ ಭವನವನ್ನು ತಲುಪಿದ ನಂತರ, ನಾವು ಇಲ್ಲಿಯೇ ಇರಲಿದ್ದು, ಭತ್ತದ ಖರೀದಿ ಪೂರ್ಣ ಪ್ರಮಾಣದಲ್ಲಿ ಪ್ರಾರಂಭವಾಗುವವರೆಗೆ ನಾವು ಹೊರಗೆ ಹೋಗುವುದಿಲ್ಲ ಎಂದು ಹೇಳಿದ್ದಾರೆ.

ಮುಖ್ಯಮಂತ್ರಿಯವರು ನಮ್ಮನ್ನು ಭೇಟಿಯಾಗಿ ಮಾತುಕತೆ ನಡೆಸಲು ನಮಗೆ ಆಹ್ವಾನ ನೀಡಿದ್ದಾರೆ. ನಾವು ಆಹ್ವಾನವನ್ನು ಸ್ವೀಕರಿಸಿದ್ದೇವೆ ಮತ್ತು ನಾವು ನಾಳೆ ಅವರನ್ನು ಭೇಟಿ ಮಾಡುತ್ತೇವೆ. ಆದರೂ, ಖರೀದಿ ಪ್ರಾರಂಭವಾಗುವವರೆಗೆ ನಾವು ಹಿಂತಿರುಗುವುದಿಲ್ಲ ಎಂದು ಅವರು ಹೇಳಿದ್ದಾರೆ.



ಕಾಂಗ್ರೆಸ್ ಮುಖಂಡ ಪವನ್ ಖೇರಾ ಅವರು ಶುಕ್ರವಾರ ನವದೆಹಲಿಯ ಎಐಸಿಸಿ ಪ್ರಧಾನ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದರು.

### ಮಲಾಡ್ ಪೂರ್ವದ ಕುರಾರ್ ವಿಲೇಜ್ ಮಂದಿರದಲ್ಲಿ ಶರನ್ನವರಾತ್ರಿ ಆಚರಣೆ

## ಶ್ರೀ ದುರ್ಗಾಪರಮೇಶ್ವರಿ ಸನ್ನಿಧಿಯಲ್ಲಿ ಕಲ್ಪೋಕ್ತ ಪೂಜೆ, ಕುಂಕುಮಾರ್ಚನೆ



**ಮುಂಬಯಿ, ಅ. 18 :** ಉಪನಗರ ಮಲಾಡ್ ಪೂರ್ವದ ತಾನಾಜಿ ನಗರದ ಕುರಾರ್ ವಿಲೇಜ್‌ನಲ್ಲಿನ ಶ್ರೀ ದುರ್ಗಾ ಪರಮೇಶ್ವರಿ ಸಮಿತಿ (ರಿ.) ಸಂಚಾಲಕತ್ವದ ಶ್ರೀ ದುರ್ಗಾ ಪರಮೇಶ್ವರಿ ಮಂದಿರದಲ್ಲಿ ವಾರ್ಷಿಕ 47ನೇ ನವರಾತ್ರಿ ಮಹೋತ್ಸವ ಜರಗಿಸಲಾಯಿತು.

ಆ ಪ್ರಯುಕ್ತ ಶ್ರೀ ದೇವಿ ಸನ್ನಿಧಿಯಲ್ಲಿ ಕ್ಷೇತ್ರದ ಅರ್ಚಕ ಸೂಡ ಶ್ರೀ ರಾಘವೇಂದ್ರ ಭಟ್ ಹಾಗೂ ತಂತ್ರಿಗಳಾದ ಶಂಕರನಾರಾಯಣ ತಂತ್ರಿ ಡೊಂಬಿವಲಿ ಇವರಿಂದ ರಂಗಪೂಜೆ ಸೇವೆ, ನವದುರ್ಗಾ ಹೋಮವು ಮಹಾಪೂಜೆ ನೆರವೇರಿಸಿ ಮಂತ್ರಾಕ್ಷತೆ, ಪ್ರತಿದಿನ ಮಧ್ಯಾಹ್ನ 12.00 ಗಂಟೆಗೆ ಹಾಗೂ ರಾತ್ರಿ 8.00 ಮಹಾಸಭೆ, ತೀರ್ಥ ಪ್ರಸಾದ, ಅನ್ನಸಂತರ್ಪಣೆ ನೀಡಲಾಯಿತು. ಸಂಜೆ ಕುಮಾರಿ ದುರ್ಗಾ ಕಲ್ಪೋಕ್ತ ಪೂಜೆ, ಕುಂಕುಮಾರ್ಚನೆ ಇತ್ಯಾದಿ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಶರನ್ನವರಾತ್ರಿ ಸಂಭ್ರಮ ಆಚರಿಸಲಾಯಿತು.

ಈ ಶುಭಾವಸರದಲ್ಲಿ ಅಭ್ಯುದಯ ಕೋ.ಅಪರೇಟಿವ್ ಬ್ಯಾಂಕ್ ಆಡಳಿತ ನಿರ್ದೇಶಕ ಪ್ರೇಮನಾಥ ಸಾಲ್ಯಾನ್, ಲಿಬರ್ಟಿ ಶಿಪ್ಪಿಂಗ್ ಆಡಳಿತ ನಿರ್ದೇಶಕ ಆನಂದ ಕೆ.ಕೋಟ್ಯಾನ್, ಕರ್ನಾಟಕ ಸಂಘ ಖಾರ್‌ಘಾರ್ ಅಧ್ಯಕ್ಷ ಯೋಗೇಂದ್ರಮ್ ಕೊಟ್ಟಾರಿ, ಪ್ರಸಾದ ಆರ್.ಕೋಟ್ಯಾನ್, ಶರದ್ ಎಸ್. ಕೋಟ್ಯಾನ್, ಪ್ರಸನ್ನ ಎಸ್.ಕೋಟ್ಯಾನ್, ಮುರಳೀಧರ ಬಿ.ಪೂಜಾರಿ, ಗಿರೀಶ ಬಿ.ಸುವರ್ಣ, ಆಶ್ರಿತ ಆದರ್ಶ್ ಕೊಟ್ಟಾರಿ, ಕ್ಲಾಸಿಕ್ ಹೋಟೆಲ್‌ನ ಶೈಲೇಶ್ ಗೌಡ, ಮೊದಲಾದವರು ಉಪಸ್ಥಿತರಿದ್ದರು.

ಶ್ರೀ ದುರ್ಗಾಪರಮೇಶ್ವರಿ ಸಮಿತಿ ಅಧ್ಯಕ್ಷ ರಘುನಾಥ ಕೊಟ್ಟಾರಿ, ಗೌರವ ಪ್ರಧಾನ ಕಾರ್ಯದರ್ಶಿ ಸೋಮಪ್ಪ.ಬಿ ಕೋಟ್ಯಾನ್, ಗೌ। ಕೋಶಾಧಿಕಾರಿ ಬಾಬು ಎಂ.ಸುವರ್ಣ ಸೇರಿದಂತೆ ಪದಾಧಿಕಾರಿಗಳು, ಸದಸ್ಯರು, ಭಕ್ತರನೇಕರು ಉಪಸ್ಥಿತರಿದ್ದು ವಿವಿಧ ಸೇವೆಗಳನ್ನು ನೆರವೇರಿಸಿದರು.

## ನಾಳೆ ಐಲೇಸಾದಿಂದ ಸಾಂಪ್ರದಾಯಿಕ ಕೃಷಿ ಧ್ವನಿಯ ಒರಾಲ್ ಹಾಡು ಬಿಡುಗಡೆ



**ಮುಂಬಯಿ, ಅ. 18 :** ಯುವ ಜನತೆ ಕೃಷಿಯ ಬಗ್ಗೆ ಉದಾಸೀನತೆ ತೋರಿ ಇತರ ಉದ್ಯೋಗಗಳತ್ತ ನಗರ ಸೇರುವ ಹಿನ್ನಲೆಯಲ್ಲಿ ಕೃಷಿಗೆ ಸಂಬಂಧಿಸಿದ ವಿಶೇಷ ಹಾಡು ಒರಾಲ್ ಅನ್ನು ಐಲೇಸಾ ದಿ ವಾಯ್ಸ್ ಆಫ್ ಓಷನ್ ಸಂಸ್ಥೆ ಅಕ್ಟೋಬರ್ ತಿಂಗಳ ಇಪ್ಪತ್ತನೇ ತಾರೀಕು ಭಾನುವಾರ ರಾತ್ರಿ 8 ಗಂಟೆಗೆ ಝೂಮ್ ಡಿಜಿಟಲ್ ವೇದಿಕೆಯಲ್ಲಿ ಬಿಡುಗಡೆಗೊಳಿಸಲಿದೆ.

ಒರಾಲ್ ಎನ್ನುವುದು ಹೆಚ್ಚಾಗಿ ಕೃಷಿ ಸಮಯದಲ್ಲಿ ಉಳುಮೆಯ ಬೇಸರವನ್ನು, ಪ್ರಾಣಿಗಳ ಜಡ್ಡುತನವನ್ನು ಹೋಗಲಾಡಿಸಲು ರೈತರು ಹಾಡುವ ಒಂದು ವಿಶಿಷ್ಠ ಆಲಾಪ. ಉಳುಮೆಯ ಎತ್ತುಗಳನ್ನು ಸರಿ ದಾರಿಯಲ್ಲಿ ಹೋಗುವಂತೆ ಜಾನಪದೀಯವಾಗಿ ಹಾಡುವ ಈ ಲಯಬದ್ಧ ಹಾಡಿನಲ್ಲಿ ಮನುಷ್ಯರಿಗೂ ಹೊಂದುವಂತಹ ಜೀವನ ರೀತಿಯೂ ಸಾಹಿತ್ಯವಾಗಿ ಹರಿದಾಡುತ್ತವೆ. ಪ್ರಾದೇಶಿಕವಾಗಿ ಒರಾಲ್ ಅನ್ನು ಉರಾಲ್, ಒರಲ್, ಉರಲ್ ಹೀಗೆ ಭಿನ್ನವಾಗಿ ಉಚ್ಚರಿಸುತ್ತಾರೆ.

ಇತ್ತೀಚಿನ ದಿನಗಳಲ್ಲಿ ಕೃಷಿ ಚಟುವಟಿಕೆಗಳು ಯಾಂತ್ರಿಕ ಗೊಂಡಿದ್ದರಿಂದ ಈ ಊರಲಿನ ಧ್ವನಿ ಕ್ಷೀಣಗೊಂಡಿದ್ದು ಕೇಳುವುದೇ ಅಪರೂಪವಾಗಿದೆ. ಇದನ್ನು ಮುಂದಿನ ಪೀಳಿಗೆಗೆ ಉಳಿಸುವ ನಿಟ್ಟಿನಲ್ಲಿ ಐಲೇಸಾ ಖ್ಯಾತ ಸಂಗೀತ ನಿರ್ದೇಶಕ.ವಿ ಮನೋಹರ್ ನೇತೃತ್ವದಲ್ಲಿ ಈ ಹಾಡನ್ನು ಸಂಯೋಜನೆಗೊಳಿಸಿದೆ. ಶಾಂತಾರಾಮ್ ವಿ. ಶೆಟ್ಟಿಯವರ ಸಾಹಿತ್ಯ ಇರುವ ಈ ಹಾಡಿನಲ್ಲಿ ಹಿಂದಿನ ಸಾಂಪ್ರದಾಯಿಕ ಕೃಷಿಯ ವೈಭವ ಮತ್ತು ಆಧುನಿಕ ರಾಸಾಯನಿಕ ಕೃಷಿಯ ತಪ್ಪುದಾರಿಗಳ ಬಗ್ಗೆ ಸೂಚ್ಯ ಸಂವೇದನೆಯಿದೆ.

ಬೆಂಗಳೂರಿನ ಯುವ ಗಾಯಕ ಆತ್ಮಾರಾಮ್ ಆಳ್ವ ಹಾಡನ್ನು ಹಾಡಿದ್ದು ಮುಂಬೈಯಿಯ ಖ್ಯಾತ ಧ್ವನಿ ಕಲಾವಿದ ಸುರೇಂದ್ರ ಮಾರ್ನಾಡು ಮತ್ತು ಯಕ್ಷ ಕಲಾವಿದ ವಾಸುದೇವ ಮಾರ್ನಾಡು, ರಮೇಶ್ ಶೆಟ್ಟಿ ಪಣರೊಟ್ಟು, ಸಚ್ಚು ಮಾರ್ನಾಡ್, ಅಜೇಶ್ ಚಾರ್ಮಾಡಿ ಮೊದಲಾದ ಕಲಾವಿದರು ಅಭಿನಯಿಸಿದ್ದಾರೆ. ಸಂದೀಪ್ ಮೂಡಬಿದ್ರಿ ಅವರ ಛಾಯಾಗ್ರಹಣ ಮತ್ತು ಗೋಪಾಲ್ ಪಟ್ಟೆ ಯವರ ಸಂಕಲನದಲ್ಲಿ ಹಾಡು ಕೃಷಿ ಕಾರ್ಯದ ದೃಶ್ಯಗಳು ಸದಾ ಮೆಲುಕು ಹಾಕುವಂತೆ ಮೂಡಿ ಬಂದಿದೆ.

ತುಳುನಾಡಿನ ಮೂಲ ಸಂಸ್ಕೃತಿಯ ಬಗ್ಗೆ ವಿಶೇಷ ಕಾಳಜಿ ತೋರುವ ಸೌದಿ ಅರೇಬಿಯಾ ನರೇಂದ್ರ ಶೆಟ್ಟಿ, ಸುಮನಾ ಶೆಟ್ಟಿ ದಂಪತಿಗಳು ಈ ಹಾಡನ್ನು ನಿರ್ಮಿಸಿದ್ದು ಬೆಹರೈನ್ ಕನ್ನಡ ಸಂಘದ ಅಧ್ಯಕ್ಷ ಅಮರನಾಥ ರೈಯವರು ಒರಾಲ್ ಹಾಡನ್ನು ಬಿಡುಗಡೆಗೊಳಿಸಲಿದ್ದಾರೆ. ಅಮೇರಿಕಾದ ಆಟ ಸಂಸ್ಥೆಯ ಭಾಸ್ಕರ್ ಶೇರಿಗಾರ್ ಮತ್ತು ವಿ. ಮನೋಹರ್ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಹೆಗ್ಡೆ ಆರೋಮೆಟಿಕ್ ಆಂಡ್ ಸಮಿತ್ ಕಾರ್ಪೊರೇಷನ್‌ನ ಮಾಲೀಕರು ಮತ್ತು ನವೋದಯ ಕನ್ನಡ ಸೇವಾ ಸಂಘ ಥಾಣೆ–ಯ ಉಪಾಧ್ಯಕ್ಷ ರಂಗನಟ ರವಿ ಹೆಗ್ಡೆ ಹೆರ್ಮುಂಡೆ ಯವರು ಕಾರ್ಯಕ್ರಮವನ್ನು ನಡೆಸಿಕೊಡಲಿದ್ದಾರೆ.

ಇದೇ 20 ರಂದು ರಾತ್ರಿ 8 ಗಂಟೆಗೆ ಜೂಮ್ ವೇದಿಕೆ https://zoom.us/j/340283988 ಯಲ್ಲಿ ಬಿಡುಗಡೆಯಾಗುವ ಈ ಹಾಡಿನ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ನೇರವಾಗಿ ಅಥವಾ ಜೂಮ್ ಐಡಿ : 5340283988 ಪಾಸ್ ಕೋಡ್ : 0324 ಮೂಲಕ ಎಲ್ಲರೂ ಭಾಗವಹಿಸಲು ಐಲೇಸಾದ ಖ್ಯಾತ ಗಾಯಕ ರಮೇಶ್ಚಂದ್ರ ಅವರು ವಿನಂತಿಸಿದ್ದಾರೆ. ಹೆಚ್ಚಿನ ವಿವರಗಳಿಗೆ ಐಲೇಸಾದ ಮಾಧ್ಯಮ ಸಂಚಾಲಕ ವಿವೇಕ್ ಮಂಡೇಕರ ಅವರನ್ನು 90082 42735 ಮೊಬೈಲ್ ಸಂಖ್ಯೆಯಲ್ಲಿ ಸಂಪರ್ಕಿಸಬಹುದು.

## ಸಲ್ಮಾನ್ ಖಾನ್ ವಿರುದ್ಧದ ದ್ವೇಷ ಕೊನೆಗಾಣಿಸಲು ಐದು ಕೋಟಿ ರೂ. ಬೇಡಿಕೆ ಇಟ್ಟ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್



**ಮುಂಬೈ, ಅ. 18 :** ಬಾಲಿವುಡ್ ನಟ ಸಲ್ಮಾನ್ ಖಾನ್ ಅವರಿಗೆ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಕೊಲೆ ಬೆದರಿಕೆ ಹಾಕಿದ್ದು, ದ್ವೇಷವನ್ನು ಕೊನೆಗಾಣಿಸಲು 5 ಕೋಟಿಗೆ ಬೇಡಿಕೆ ಇಟ್ಟಿದೆ. ಮುಂಬೈ ಟ್ರಾಫಿಕ್ ಪೊಲೀಸರಿಗೆ ಕಳುಹಿಸಲಾದ ಸಂದೇಶದಲ್ಲಿ, ಹಣವನ್ನು ನೀಡದಿದ್ದರೆ ನಟನ ಭವಿಷ್ಯವು ಇತ್ತೀಚೆಗೆ ಬಿಷ್ಣೋಯ್ ಗ್ಯಾಂಗ್ ಸದಸ್ಯರಿಂದ ಹತ್ಯೆಗೀಡಾದ ಮಹಾರಾಷ್ಟ್ರದ ಮಾಜಿ ಸಚಿವ ಬಾಬಾ ಸಿದ್ದಿಕಿಗಿಂತ ಕೆಟ್ಟದಾಗಿರುತ್ತದೆ ಎಂದು ಎಚ್ಚರಿಸಿದೆ.

ವಾಟ್ಸಾಪ್ ಸಂದೇಶದಲ್ಲಿ ಎಚ್ಚರಿಕೆ ನೀಡಿರುವ ಬಿಷ್ಣೋಯ್ ಗ್ಯಾಂಗ್, ನಮ್ಮ ಎಚ್ಚರಿಕೆಯನ್ನು ಲಘುವಾಗಿ ತೆಗೆದುಕೊಳ್ಳಬೇಡಿ. ಸಲ್ಮಾನ್ ಖಾನ್ ಬದುಕಿ ಉಳಿಯಬೇಕಾದರೆ ಲಾರೆನ್ಸ್ ಬಿಷ್ಣೋಯ್ ಜೊತೆಗಿನ ದ್ವೇಷವನ್ನು ಕೊನೆಗಾಣಿಸಲು ಬಯಸಿದರೆ 5 ಕೋಟಿ ನೀಡಬೇಕು. ಹಣ ನೀಡದಿದ್ದರೆ ಬಾಬಾ ಸಿದ್ದಿಕಿಗಿಂತ ಅವರ ಸ್ಥಿತಿ ಕೆಟ್ಟದಾಗುತ್ತದೆ ಎಂದು ಗ್ಯಾಂಗ್ ಸಂದೇಶ ರವಾನಿಸಿದೆ.

ಸಂದೇಶದ ಬೆನ್ನಲೆ ಮುಂಬೈ ವರ್ಲಿ ಪೊಲೀಸರು ದೂರು ದಾಖಲಿಸಿಕೊಂಡಿದ್ದು, ಸಂದೇಶದ ಮೂಲವನ್ನು ಪತ್ತೆಹಚ್ಚುವ ಕೆಲಸ ಮಾಡುತ್ತಿದ್ದಾರೆ. ಸಲ್ಮಾನ್ ಖಾನ್ ಅವರ ಬಾಂದ್ರಾ ನಿವಾಸದ ಸುತ್ತಲೂ ಭದ್ರತೆಯನ್ನು ಹೆಚ್ಚಿಸಿದ್ದಾರೆ.

ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಎಚ್ಚರಿಕೆ ನಡುವೆಯೇ ನಿನ್ನೆ ನವಿ ಮುಂಬೈ ಪೊಲೀಸರು ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನ ಪ್ರಮುಖ ಸದಸ್ಯನನ್ನು ಬಂಧಿಸಿದ್ದಾರೆ. ಆರೋಪಿಯನ್ನು ಸುಖ ಅಲಿಯಾಸ್ ಸುಖಬೀರ್ ಬಲ್ಬೀರ್ ಸಿಂಗ್ ಎಂದು ಗುರುತಿಸಲಾಗಿದ್ದು, ಹರಿಯಾಣದ ಪಾಣಿಪತ್‌ನಲ್ಲಿ ಬಂಧಿಸಲಾಗಿದೆ. ಪ್ರಾಥಮಿಕ ತನಿಖೆಯಲ್ಲಿ ಬಾಲಿವುಡ್ ನಟನ ಹತ್ಯೆಗೆ ಸಂಚು ರೂಪಿಸಲಾಗಿತ್ತು ಎಂದು ಹೇಳಲಾಗಿದೆ. ನಟನ ಮೇಲೆ ದಾಳಿ ನಡೆಸಲು ಸಿಂಗ್ ಇತರ ಗ್ಯಾಂಗ್ ಸದಸ್ಯರಿಗೆ ಗುತ್ತಿಗೆ ನೀಡಿದೆ ಎನ್ನಲಾಗಿದೆ.

ಬಂಧಿತ ಆರೋಪಿಯು ಯೋಜಿತ ದಾಳಿ ನಡೆಸಲು ಪಾಕಿಸ್ತಾನಿ ಮೂಲದ ವ್ಯಕ್ತಿ ಡೋಗರ್ ಎಂಬಾತನೊಂದಿಗೆ ನೇರ ಸಂಪರ್ಕದಲ್ಲಿದ್ದ. ಸಂಚು ರೂಪಿಸಲು ಪಾಕಿಸ್ತಾನದಿಂದ ಕಳ್ಳಸಾಗಣೆಯಾದ AK–47, M-16 ಮತ್ತು AK–92 ಸೇರಿದಂತೆ ಹೆಚ್ಚಿನ ಸಾಮರ್ಥ್ಯದ ಬಂದೂಕುಗಳನ್ನು ಬಳಸಲು ಗ್ಯಾಂಗ್ ಉದ್ದೇಶಿಸಿತ್ತು ಎಂದು ತಿಳಿದು ಬಂದಿದೆ.

## ಇಎಸ್‌ಐ ಆಸ್ಪತ್ರೆಯಲ್ಲಿ ಭಾರಿ ಬೆಂಕಿ ಅವಘಡ ; ಓರ್ವ ರೋಗಿ ಸಾವು



**ಕೋಲ್ಕತ್ತಾ, ಅ. 18 :** ಕೋಲ್ಕತ್ತಾದ ಇಎಸ್‌ಐ ಆಸ್ಪತ್ರೆಯಲ್ಲಿ ಭಾರಿ ಬೆಂಕಿ ಅವಘಡ ಸಂಭವಿಸಿದ್ದು, ಐಸಿಯುನಲ್ಲಿದ್ದ ಓರ್ವ ರೋಗಿ ಸಾವನ್ನಪ್ಪಿದ್ದಾನೆ. ಸೀಲ್ದಾಹ್ ಪ್ರದೇಶದಲ್ಲಿರುವ ಇಎಸ್‌ಐ ಸರ್ಕಾರಿ ಆಸ್ಪತ್ರೆಯಲ್ಲಿ ಶುಕ್ರವಾರ ಬೆಳಿಗ್ಗೆ ಬೆಂಕಿ ಕಾಣಿಸಿಕೊಂಡಿದೆ. ತಕ್ಷಣ ಸ್ಥಳಕ್ಕೆ 10 ಅಗ್ನಿಶಾಮಕ ವಾಹನಗಳು ಧಾವಿಸಿದ್ದು, ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿಕೊಂಡರು.

ಈ ವೇಳೆ ಕೇವಲ 20 ನಿಮಿಷದಲ್ಲಿ 80 ರೋಗಿಗಳನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದ್ದು, ಐಸಿಯುನಲ್ಲಿದ್ದ ಓರ್ವ ರೋಗಿ ಸಾವನ್ನಪ್ಪಿದ್ದಾನೆ ಎಂದು ತಿಳಿಸಿದ್ದಾರೆ. ಮೊದಲು ಆಸ್ಪತ್ರೆಯ ಒಂದು ಕೋಣೆಯಲ್ಲಿ ಬೆಂಕಿ ಕಾಣಿಸಿಕೊಂಡಿತು. ಬೇರೆ ಕೋಣೆಗಳಿಗೆ ಹರಡುವ ಮುನ್ನ ಬೆಂಕಿಯನ್ನು ಹತೋಟಿಗೆ ತರಲಾಯಿತು. ಆದರೆ ಬೆಂಕಿ ಹೊತ್ತಿಕೊಳ್ಳಲು ನಿಖರವಾದ ಕಾರಣ ಏನು ಎಂಬುವುದು ತಿಳಿದು ಬಂದಿಲ್ಲ.

ಕೆಲವು ರೋಗಿಗಳು ಬೆಂಕಿ ಕಾಣಿಸಿಕೊಂಡ ಬಳಿಕ ತಮ್ಮ ಆರೈಕೆದಾರರ ಜೊತೆ ಹೊರಗೆ ಬಂದಿದ್ದು, ಇನ್ನುಳಿದ ಕೆಲವರನ್ನು ಬೇರೆ ಕಡೆಗೆ ಸ್ಥಳಾಂತರಿಸಲಾಯಿತು. ಸದ್ಯ ಚಿಕಿತ್ಸೆಗಾಗಿ ರೋಗಿಗಳನ್ನು ಬೇರೆ ಆಸ್ಪತ್ರೆಗೆ ವರ್ಗಾವಣೆ ಮಾಡಲಾಗಿದೆ. ಸ್ಥಳಕ್ಕೆ ಪಶ್ಚಿಮ ಬಂಗಾಳದ ಅಗ್ನಿಶಾಮಕ ಹಾಗೂ ತುರ್ತು ಸೇವೆಗಳ ಸಚಿವ ಸುಜಿತ್ ಬೋಸ್ ಭೇಟಿ ನೀಡಿದರು.

ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಟಿ. ಕೆ.ದತ್ತಾ ಮಾತನಾಡಿದ, ಇದೊಂದು ಭಯಾನಕ ಅಗ್ನಿ ಅವಘಡ. ಐಸಿಯುನಲ್ಲಿ ದಾಖಲಾಗಿದ್ದ ಓರ್ವ ರೋಗಿಯ ಹೊರತಾಗಿ, ಕೇವಲ 20 ನಿಮಿಷದಲ್ಲಿ ಎಲ್ಲಾ ರೋಗಿಗಳನ್ನು ಪ್ರಾಣಾಪಾಯದಿಂದ ರಕ್ಷಿಸುವಲ್ಲಿ ಯಶಸ್ವಿಯಾಗಿದ್ದೇವೆ. ಐಸಿಯುನಲ್ಲಿದ್ದ ಓರ್ವ ರೋಗಿಯ ಸಾವಿಗೆ ಕಾರಣ ಇನ್ನೂ ತಿಳಿದು ಬಂದಿಲ್ಲ. ಇನ್ನಿತರ ಯಾವುದೇ ಗಾಯಗಳಾಗಿಲ್ಲ. ಕೋಣೆಯಲ್ಲಿ ಹೊಗೆ ಕಾಣಿಸಿದ್ದನ್ನು ಕಂಡ ಕೆಲ ರೋಗಿಗಳು ಕಿಟಕಿಯಿಂದ ನಮ್ಮನ್ನು ಉಳಿಸಿ ಎಂದು ಕಿರುಚುತ್ತಿದ್ದರು ಎಂದು ನಡೆದ ಅವಘಡದ ಕುರಿತು ವಿವರಿಸಿದರು.

## ಜಾರ್ಖಂಡ್ ಚುನಾವಣೆ; ಸೀಟು ಹಂಚಿಕೆಯಲ್ಲಿ ಎನ್‌ಡಿಎ ನಾಯಕರ ಒಮ್ಮತ

**ರಾಂಚಿ, ಅ. 18 :** ಮುಂಬರುವ ಜಾರ್ಖಂಡ್ ವಿಧಾನಸಭೆ ಚುನಾವಣೆಗೆ ಸೀಟು ಹಂಚಿಕೆ ವಿಚಾರದಲ್ಲಿ ಎನ್‌ಡಿಎ ಒಕ್ಕೂಟ ಒಮ್ಮತಕ್ಕೆ ಬಂದಿದೆ. ಎನ್‌ಡಿಎ ನೇತೃತ್ವದ ಮೈತ್ರಿಯಲ್ಲಿ ಎಜೆಎಸ್‌ಯು 10 ಸ್ಥಾನಗಳಲ್ಲಿ, ಜೆಡಿಯು 2 ಸ್ಥಾನ, ಎಲ್‌ಜೆಪಿ 1 ಸ್ಥಾನ ಮತ್ತು ಉಳಿದ 68 ಸ್ಥಾನಗಳಲ್ಲಿ ಬಿಜೆಪಿ ಸ್ಪರ್ಧಿಸಲಿದೆ ಎಂದು ಸ್ಪರ್ಧಿಸಲಿದೆ ಹಿಮಂತ ಶರ್ಮಾ ಘೋಷಿಸಿದ್ದಾರೆ

ರಾಂಚಿಯ ಬಿಜೆಪಿ ಕಚೇರಿಯಲ್ಲಿ ನಡೆದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಅಸ್ಸಾಂ ಮುಖ್ಯಮಂತ್ರಿ ಮತ್ತು ಜಾರ್ಖಂಡ್‌ನ ಸಹ ಚುನಾವಣಾ ಉಸ್ತುವಾರಿಯು ಆಗಿರುವ ಹಿಮಂತ ಬಿಸ್ವಾ ಶರ್ಮಾ ಈ ಬಗ್ಗೆ ಅಧಿಕೃತವಾಗಿ ಘೋಷಿಸಿದ್ದಾರೆ. ನಾಮಪತ್ರ ಸಲ್ಲಿಸುವ ಅಂತಿಮ ದಿನಾಂಕದ ಮೊದಲು ಪರಿಸ್ಥಿತಿಯನ್ನು ಅವಲಂಬಿಸಿ ಒಂದು ಅಥವಾ ಎರಡು ಸ್ಥಾನಗಳಿಗೆ ಕೊನೆಯ ಕ್ಷಣದ ಬದಲಾವಣೆಗಳೂ ಮಾಡಬಹುದು ಎಂದು ಅವರು ಹೇಳಿದ್ದಾರೆ.

ಅಭ್ಯರ್ಥಿಗಳ ಘೋಷಣೆ ಕುರಿತು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಒಂದು ಅಥವಾ ಎರಡು ದಿನಗಳಲ್ಲಿ ಆ ಬಗ್ಗೆಯೂ ತೀರ್ಮಾನಿಸಲಾಗುವುದು ಎಂದು ಹೇಳಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಜಾರ್ಖಂಡ್ ಬಿಜೆಪಿ ಅಧ್ಯಕ್ಷ ಬಾಬುಲಾಲ್ ಮರಾಂಡಿ ಮತ್ತು ಎಜೆಎಸ್ಯು ಮುಖ್ಯಸ್ಥ ಸುದೇಶ್ ಮಹತೋ ಉಪಸ್ಥಿತರಿದ್ದರು.

ಈ ಹಿಂದೆ, ಕೇಂದ್ರ ಸಚಿವ ಮತ್ತು ಜಾರ್ಖಂಡ್ ಚುನಾವಣಾ ಉಸ್ತುವಾರಿ ಶಿವರಾಜ್ ಸಿಂಗ್ ಚೌಹಾಣ್, ಬಿಜೆಪಿ, ಎಜೆಎಸ್‌ಯು, ಜೆಡಿಯು ಮತ್ತು ಎಲ್‌ಜೆಪಿ (ರಾಮ್ ವಿಲಾಸ್) ಎನ್‌ಡಿಎ ಮೈತ್ರಿಯ ಅಡಿಯಲ್ಲಿ ಒಟ್ಟಾಗಿ ಚುನಾವಣೆಗಳನ್ನು ಎದುರಿಸಲಿವೆ ಮತ್ತು ಜಂಟಿಯಾಗಿ ಪ್ರಚಾರ ಮಾಡಲಿವೆ ಎಂದು ಖಚಿತಪಡಿಸಿದ್ದರು. 2024 ರ ಜಾರ್ಖಂಡ್ ವಿಧಾನಸಭಾ ಚುನಾವಣೆಯು ನವೆಂಬರ್ 13 ಮತ್ತು 20 ರಂದು ಎರಡು ಹಂತಗಳಲ್ಲಿ ನಡೆಯಲಿದ್ದು, ನವೆಂಬರ್ 23 ರಂದು ಮತ ಎಣಿಕೆ ನಡೆಯಲಿದೆ.

## ಜಿಲ್ಲಾ ಸ್ಕೌಟ್ ಆಯುಕ್ತರಾಗಿ ಜನಾರ್ದನ್ ಕೊಡವೂರು ಆಯ್ಕೆ



**ಮುಂಬಯಿ, ಅ. 18 :** ಭಾರತ್ ಸ್ಕೌಟ್ ಮತ್ತು ಗೈಡ್ಸ್ ಉಡುಪಿ ಜಿಲ್ಲಾ ಮುಖ್ಯ ಆಯುಕ್ತರಾಗಿ ಸಂಘಟಕ, ಸಹಕಾರಿ ಯೂನಿಯನ್ ಜಿಲ್ಲಾಧ್ಯಕ್ಷ ಜಯಕರ ಶೆಟ್ಟಿ ಇಂದ್ರಾಳಿ ಅವರನ್ನು ನಿಯೋಜಿಸಿ ರಾಜ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಈಗಾಗಲೇ ಆದೇಶ ಹೊರಡಿಸಿದ್ದಾರೆ.

ಇದೇ ವೇಳೆ ಉಡುಪಿ ಜಿಲ್ಲಾ ಸ್ಕೌಟ್ ಆಯುಕ್ತರನ್ನಾಗಿ ಛಾಯಾಚಿತ್ರ ಪತ್ರಕರ್ತ ಹಾಗೂ ಕಸಾಪ ಉಡುಪಿ ತಾಲೂಕು ಗೌರವ ಕಾರ್ಯದರ್ಶಿ ಜನಾರ್ದನ ಕೊಡವೂರು ಅವರನ್ನು ಜಯಕರ ಶೆಟ್ಟಿ ಇಂದ್ರಾಳಿ ನೇಮಿಸಿದ್ದಾರೆ.

## ವಿರೋಧ ಪಕ್ಷದ ಸಂಸದರಿಂದ JPC ಮುಖ್ಯಸ್ಥರಿಗೆ ಬೆದರಿಕೆ: ತೇಜಸ್ವಿ ಸೂರ್ಯ ಆರೋಪ

**ನವದೆಹಲಿ, ಅ. 18 :** ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರಿಗೆ ಪತ್ರ ಬರೆದು ವಿರೋಧ ಪಕ್ಷದ ಸದಸ್ಯರ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ.

ವಕ್ಫ್ ತಿದ್ದುಪಡಿ ಮಸೂದೆಯ ಜಂಟಿ ಸಂಸದೀಯ ಸಮಿತಿಯ ಅಧ್ಯಕ್ಷೆ ಜಗದಾಂಬಿಕಾ ಪಾಲ್ಗೆ ಮತ್ತು ಸಮಿತಿಯ ಸಭೆಯಲ್ಲಿ ಸಾಕ್ಷಿದಾರರಿಗೆ ವಿರೋಧ ಪಕ್ಷದ ಸದಸ್ಯರು ಬೆದರಿಕೆ ಹಾಕಿದ್ದಾರೆ ಎಂದು ತೇಜಸ್ವಿ ಸೂರ್ಯ ಆರೋಪಿಸಿದ್ದಾರೆ. ತೇಜಸ್ವಿ ಸೂರ್ಯ ಅವರು ಬರೆದ ಪತ್ರದಲ್ಲಿ, ಅ. 14 ರಂದು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತ ಆಯೋಗದ ಮಾಜಿ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ಅವರಿಗೆ ಕರ್ನಾಟಕದಲ್ಲಿ ಭೂ ಹಗರಣದ ಬಗ್ಗೆ ಅವರ ಅಭಿಪ್ರಾಯವನ್ನು ಕೇಳಲು ಸಮಿತಿಯು ಕರೆ ಮಾಡಿದಾಗ ವಿರೋಧ ಪಕ್ಷದ ಸಂಸದರು ಅಸಂಸದೀಯವಾಗಿ ವರ್ತಿಸಿದರು. ಸಾಕ್ಷಿ ಮತ್ತು ಸಭಾಪತಿ ಕುಳಿತಿದ್ದ ಜಾಗಕ್ಕೆ ತೆರಳಿ ಇಬ್ಬರನ್ನೂ ಬೆದರಿಸಿ ಅವರು ತಂದಿದ್ದ ನೋಟು, ಪೇಪರ್‌ಗಳನ್ನು ಕಿತ್ತು ಹರಿದು ಹಾಕಿದ್ದಾರೆ.

ಹೀಗಾಗಿ ಈ ಅನಿಯಂತ್ರಿತ ಮತ್ತು ಅಸಂಸದೀಯ ವರ್ತನೆಗೆ ಕಾರಣರಾದವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಮತ್ತು ನೀತಿ ನಿಯಮಗಳು ಮತ್ತು ಸಂಸದೀಯ ಶಿಷ್ಟಾಚಾರವನ್ನು ಅನುಸರಿಸಲು ವಿರೋಧ ಪಕ್ಷದ ಸದಸ್ಯರಿಗೆ ನಿರ್ದೇಶನ ನೀಡುವಂತೆ ಸೂರ್ಯ ಅವರು ಸ್ಪೀಕರ್ ಗೆ ಬರೆದ ಪತ್ರದಲ್ಲಿ ಮನವಿ ಮಾಡಿಕೊಂಡಿದ್ದಾರೆ.

# ಬ್ರ್ಯಾಂಡ್ ಬೆಂಗಳೂರು; ಗುಂಡಿ ಬೆಂಗಳೂರು ಆಗಿ ಪರಿವರ್ತನೆ

**ಬೆಂಗಳೂರು, ಅ. 18 :** ಒಂದೇ ಮಳೆಗೆ ಬೆಂಗಳೂರಿನ ತುಂಬಾ ಬಾಯ್ತೆರೆದಿರುವ ಯಮಸ್ವರೂಪಿ ರಸ್ತೆಗುಂಡಿಗಳು ಭ್ರಷ್ಟ ಕಾಂಗ್ರೆಸ್ ಸರ್ಕಾರದ ಅಸಲಿಯತ್ತು ಏನು ಎಂಬುದನ್ನು ಬಟಾಬಯಲು ಮಾಡಿವೆ ಎಂದು ಪ್ರತಿಪಕ್ಷದ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ.

ಈ ಕುರಿತು ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಅವರು, 40% ಕಮಿಷನ್ ಸರ್ಕಾರ ಅಂತ ಸುಳ್ಳು, ಅಪಪ್ರಚಾರದ ಮೂಲಕ ಕನ್ನಡಿಗರಿಗೆ ಟೋಪಿ ಹಾಕಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಪಕ್ಷ, ತನ್ನ ಭ್ರಷ್ಟಾಚಾರದ ಹಸಿವು, ದಾಹ ನೀಗಿಸಿಕೊಳ್ಳಲು ನಾಡಪ್ರಭು ಕೆಂಪೇಗೌಡರು ಕಟ್ಟಿದ ಬೆಂಗಳೂರು ನಗರವನ್ನು ಬಲಿ ಕೊಡುತ್ತಿದೆ ಎಂದು ಕಿಡಿಕಾರಿದ್ದಾರೆ.

ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರೇ, ರಾಜಧಾನಿಯ ರಸ್ತೆಗಳು ಕೆರೆಗಳಾಗಿವೆ, ಬಡಾವಣೆಗಳು ಜಲಾವೃತವಾಗಿವೆ. ಬ್ರ್ಯಾಂಡ್ ಬೆಂಗಳೂರು ಹೆಸರಲ್ಲಿ ಲೂಟಿ ಹೊಡೆದು, ಸಿಲಿಕಾನ್ ಸಿಟಿ ಜನರನ್ನು ಮಳೆನೀರಲ್ಲಿ ಮುಳುಗಿಸಿ, ಬೆಂಗಳೂರಿನ ಮರ್ಯಾದೆ ಹರಾಜು



ಹಾಕಿದ್ದೀರಲ್ಲ, ಇದೇನಾ ತಾವುಗಳು ಬ್ರ್ಯಾಂಡ್ ಬೆಂಗಳೂರು ನಿರ್ಮಾಣ ಮಾಡುವ ಪರಿ ಎಂದು ಪ್ರಶ್ನೆ ಮಾಡಿದ್ದಾರೆ. ಒಂದೇ ಒಂದು ರಸ್ತೆಗುಂಡಿ ಮುಚ್ಚಲು ಕೈಲಾಗದಷ್ಟು ಅಸಮರ್ಥ ಅಯೋಗ್ಯ ಕಾಂಗ್ರೆಸ್ ಸರ್ಕಾರದಿಂದ ಬ್ರ್ಯಾಂಡ್ ಬೆಂಗಳೂರು ಹೋಗಿ "ಗುಂಡಿ ಬೆಂಗಳೂರು" ಆಗಿ ಪರಿವರ್ತನೆಗೊಂಡಿದೆ. ಅಭಿವೃದ್ಧಿ ಕಾರ್ಯಗಳಿಗೆ ಹಣ ಮೀಸಲಿಡದೆ ಭ್ರಷ್ಟಾಚಾರದ ಕೂಪದಲ್ಲಿ ಮುಳುಗಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ರಸ್ತೆಗಳ ಗುಂಡಿಮುಚ್ಚಲು ಹೆಣಗಾಡುತ್ತಿದೆ. ಸ್ಕೈ ಡೆಕ್ ನಿರ್ಮಿಸುತ್ತೇನೆ, ಟನಲ್ ರಸ್ತೆ ನಿರ್ಮಿಸುತ್ತೇನೆ ಎಂದು ಅಂಗೈಯಲ್ಲೇ ಅರಮನೆ ತೋರಿಸುತ್ತಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಅಲ್ಲೊಂದು ಇಲ್ಲೊಂದು ಗುಂಡಿ ಮುಚ್ಚಿ ಬಿಟ್ಟ ಪ್ರಚಾರಕ್ಕೆ ಪೋಸ್ ಕೊಡುವುದು ಬಿಟ್ಟರೆ ಕಳೆದ 15 ತಿಂಗಳಿಂದ ಸಾಧಿಸಿದ್ದು ದೊಡ್ಡ ಶೂನ್ಯ ಎಂದು ಟೀಕಿಸಿದ್ದಾರೆ.

ರಾಜಧಾನಿಯ ಯಾವುದೇ ರಸ್ತೆಗಳಿಗೂ ಹೋದರೂ ನೂರಾರು ಗುಂಡಿಗಳು ಕಾಣುತ್ತಿವೆ. ವಾಹನ ಸವಾರರು ಜೀವ ಕೈಯಲ್ಲಿಡಿದು ಓಡಾಡಬೇಕಾದ ದುಸ್ಥಿತಿಯನ್ನು ರಾಜ್ಯ ಕಾಂಗ್ರೆಸ್ ಸರ್ಕಾರ ತಂದಿಟ್ಟಿದೆ. ಜನಸಾಮಾನ್ಯರು, ವಾಹನ ಸವಾರರು ದಿನನಿತ್ಯ ಛೀ ಥೂ ಎಂದು ಸರ್ಕಾರಕ್ಕೆ ಉಗಿಯುತ್ತಿದ್ದರೂ ದಪ್ಪ ಚರ್ಮದ ಸರ್ಕಾರ ಮಾತ್ರ ತನ್ನ ಹಗರಣ, ಭ್ರಷ್ಟಾಚಾರಗಳಲ್ಲಿ ಮುಳುಗಿರುವುದು ರಾಜ್ಯದ ದುರಂತ. ರಸ್ತೆ ಗುಂಡಿ ಮುಚ್ಚಲು ಯೋಗ್ಯತೆ ಇಲ್ಲದ ಭ್ರಷ್ಟ ಕಾಂಗ್ರೆಸ್ ಸರ್ಕಾರ ಯಾವ ಪುರುಷಾರ್ಥಕ್ಕಾಗಿ ಅಧಿಕಾರದಲ್ಲಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಗಾರ್ಡನ್ ಸಿಟಿ, ಗ್ರೀನ್, ಸಿಟಿ, ಐಟಿ ಸಿಟಿ, ಸ್ಟಾರ್ಟಪ್ ಸಿಟಿ, ಸಿಲಿಕಾನ್ ಸಿಟಿ ಎಂದು ಖ್ಯಾತಿ ಹೊಂದಿದ್ದ ನಾಡಪ್ರಭು ಕೆಂಪೇಗೌಡರು ಕಟ್ಟಿದ ಬೆಂಗಳೂರು, ಕಾಂಗ್ರೆಸ್ ಸರ್ಕಾರದ ವಕ್ರದೃಷ್ಟಿಯಿಂದ ರಸ್ತೆ ಗುಂಡಿಗಳ ನಗರ, ವಾಟರ್ ಫಾಲ್ಸ್ ನಗರ ಎಂದು ನಗೆಪಾಟಲಿಗೆ ಈಡಾಗಿದೆ. ಬೆಂಗಳೂರಿಗೆ ಈ ಕುಖ್ಯಾತಿ ತಂದುಕೊಡಲು ಡಿಸಿಎಂ ಶಿವಕುಮಾರ್ ಅವರು ಕಳೆದೊಂದು ವರ್ಷದಿಂದ ಅವಿರತವಾಗಿ ಶ್ರಮಿಸಿದ್ದಾರೆ. ಇಷ್ಟಕ್ಕೂ ಬ್ರ್ಯಾಂಡ್ ಬೆಂಗಳೂರು ಹೆಸರಿನಲ್ಲಿ ಕಾಂಗ್ರೆಸ್ ಪಕ್ಷ ಏನು ಮಾಡಿದೆ ಕಾಂಗ್ರೆಸ್ ಸರ್ಕಾರ ಕಳೆದ 15 ತಿಂಗಳ ಅವಧಿಯಲ್ಲಿ ಬೆಂಗಳೂರಿಗೆ ಬಿಡಿಗಾಸು ಅನುದಾನ ಸಹ ನೀಡಿಲ್ಲ. ಬೆಂಗಳೂರಿನ ಜನತೆ ಕಾಂಗ್ರೆಸ್ ಸರ್ಕಾರದ ವಿರುದ್ಧ ದಂಗೆ ಏಳುವ ಮುನ್ನ, ರಸ್ತೆ ಗುಂಡಿಗಳಿಂದ ಇನ್ನಷ್ಟು ಅಪಘಾತಗಳು, ಸಾವು ನೋವುಗಳು ಸಂಭವಿಸುವ ಮುನ್ನ ಸಮರೋಪಾದಿಯಲ್ಲಿ ರಸ್ತೆಗಳ ದುರಸ್ತಿ ಮಾಡಬೇಕು. ಬೆಂಗಳೂರು ನಗರಕ್ಕೆ 25,000 ಕೋಟಿ ರೂಪಾಯಿ ವಿಶೇಷ ಅನುದಾನ ನೀಡಿ, ರಸ್ತೆಗಳು, ರಾಜಕಾಲುವೆಗಳನ್ನು ಸರಿಪಡಿಸುವ ಕೆಲಸ ಮಾಡಬೇಕು ಎಂದು ಅಶೋಕ್ ಒತ್ತಾಯಿಸಿದ್ದಾರೆ.




ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ-ಕಾಲೇಜುಗಳಿಗೆ ನೆರವು ನೀಡುವಂತೆ ಒತ್ತಾಯಿಸಿ ಫೆಡರೇಷನ್ ಆಫ್ ಕರ್ನಾಟಕ ರಾಜ್ಯ ಅನುದಾನರಹಿತ ಕನ್ನಡ ಮಾಧ್ಯಮ ಶಾಲಾ-ಕಾಲೇಜುಗಳ ಸಿಬ್ಬಂದಿ ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ಶಿಕ್ಷಕರ ಸಬಲೀಕರಣ: ಶಿಕ್ಷ ಕೋ ಪೈಲಟ್ ಯೋಜನೆ

**ಬೆಂಗಳೂರು, ಅ. 18 :** ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು, ಶಿಕ್ಷಣ ಫೌಂಡೇಶನ್ ಮತ್ತು ಮೈಕ್ರೋಸಾಫ್ಟ್ ರಿಸರ್ಚ್ ಇಂಡಿಯಾದ ಸಹಯೋಗದೊಂದಿಗೆ ಸರ್ಕಾರಿ ಶಾಲೆಗಳಲ್ಲಿ ಕಲಿಕೆಯ ಫಲಿತಾಂಶಗಳನ್ನು ಸುಧಾರಿಸುವ ಗುರಿಯೊಂದಿಗೆ ಶಿಕ್ಷ ಕೋಪೈಲಟ್ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಮಧು ಬಂಗಾರಪ್ಪ ತಿಳಿಸಿದರು. ವಿಧಾನ ಸೌಧದ ಸಮಿತಿ ಕೊಠಡಿಯಲ್ಲಿ ಸಮಗ್ರ ಶಿಕ್ಷಣ ಕರ್ನಾಟಕ, ಅವರು ಶಿಕ್ಷ ಕೋಪೈಲಟ್ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ, ಸ್ಥಳೀಯ ಪಠ್ಯಕ್ರಮ, ಭಾಷೆ ಮತ್ತು ಸಂದರ್ಭವನ್ನು ಆಧರಿಸಿ ಸಮಗ್ರ ಬೋಧನಾ ಸಂಪನ್ಮೂಲಗಳು ಮತ್ತು ಕಲಿಕೆಯ ಅನುಭವಗಳನ್ನು ರಚಿಸಲು ಶಿಕ್ಷ ಕೋಪೈಲಟ್ ಯೋಜನೆ ಶಿಕ್ಷಕರನ್ನು ಸಶಕ್ತಗೊಳಿಸುತ್ತದೆ. ಕರ್ನಾಟಕ ರಾಜ್ಯದ ನಗರ ಮತ್ತು ಗ್ರಾಮೀಣ ಭಾಗಗಳ ಎಲ್ಲಾ ಶೈಕ್ಷಣಿಕ ಜಿಲ್ಲೆಗಳಲ್ಲಿ 750ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳಿಂದ ಆಯ್ದ 1000 ಶಿಕ್ಷಕರಿಗೆ ಶಿಕ್ಷ ಕೋಪೈಲಟ್-AI ಚಾಲಿತ ಡಿಜಿಟಲ್ ಸಹಾಯವನ್ನು ನೀಡಲಾಗುವುದು ಎಂದು ತಿಳಿಸಿದರು.




ಶಿಕ್ಷಣ ಕೋಪೈಲಟ್ ಉತ್ತಮ ಗುಣಮಟ್ಟದ ವೈಯಕ್ತೀಕರಿಸಿದ ವಿಷಯವನ್ನು ರಚಿಸಲು ಶಿಕ್ಷಕರನ್ನು ಸಬಲೀಕರಣಗೊಳಿಸುತ್ತದೆ. ಶಿಕ್ಷಕರ ಹಿಮ್ಮಾಹಿತಿ ಆಧಾರದ ಮೇಲೆ ಚಟುವಟಿಕೆಗಳು, ಮೌಲ್ಯಮಾಪನಗಳು, ನೈಜ-ಪ್ರಪಂಚದ ಉದಾಹರಣೆಗಳು, ಅನ್ವಯಗಳು, ಕಿರು ವೀಡಿಯೊಗಳು ಮತ್ತು ಸಮಗ್ರ ಪಾಠ ಯೋಜನೆಗಳಂತಹ ಬೋಧನಾ ಸಂಪನ್ಮೂಲಗಳನ್ನು ರಚಿಸಲು ಶಿಕ್ಷ ಕೋಪೈಲಟ್ ಸಹಾಯ ಮಾಡುತ್ತದೆ. ಇದು ಸ್ವಯಂ ಕಲಿಕೆ ಮತ್ತು ಸಂವಾದಾತ್ಮಕ ವಿಷಯ ರಚನೆಗಾಗಿ ಶಿಕ್ಷಕರಿಗೆ ಚಾಟ್-ಬಾಟ್ ಅನ್ನು ಸಹ ಒದಗಿಸುತ್ತದೆ ಎಂದು ಸಚಿವರು ತಿಳಿಸಿದರು. ಈ ಕಾರ್ಯಕ್ರಮದಲ್ಲಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ಆಯುಕ್ತ ಕೆ.ವಿ. ತ್ರಿಲೋಕಾಚಂದ್ರ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ದೂರದರ್ಶನ, ಆಕಾಶವಾಣಿ: ರೈತರು, ಮಹಿಳೆಯರ ಕಾರ್ಯಕ್ರಮಗಳಿಗೆ ಆದ್ಯತೆ

**ಬೆಂಗಳೂರು, ಅ, 18 :** ದೂರದರ್ಶನ ಮತ್ತು ಆಕಾಶವಾಣಿ ಪ್ರಸಾರದಲ್ಲಿ ರೈತರು ಮತ್ತು ಮಹಿಳೆಯರ ಕಾರ್ಯಕ್ರಮಗಳಿಗೆ ಆದ್ಯತೆ ನೀಡಲಾಗುತ್ತಿದೆ. ಇದರೊಂದಿಗೆ ವಿದ್ಯಾರ್ಥಿಗಳಿಗೆ ಉಪಯುಕ್ತ ಕಾರ್ಯಕ್ರಮಗಳು, ಧಾರ್ಮಿಕ ಕಾರ್ಯಕ್ರಮಗಳು ಮತ್ತು ಚಲನಚಿತ್ರ ಆಧರಿತ ಕಾರ್ಯಕ್ರಮಗಳಿಗೂ ಹೆಚ್ಚಿನ



ಗಮನ ಹರಿಸಬೇಕು ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿಂದು ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಅಧಿಕಾರಿಗಳೊಂದಿಗೆ ಸಚಿವರು ಸಭೆ ನಡೆಸಿದರು. ಜನಪ್ರಿಯ ವ್ಯಕ್ತಿಗಳು, ರಾಜಕೀಯ ಮುತ್ಸದ್ಧಿಗಳ ಚರ್ಚೆ ಮತ್ತು ಧ್ವನಿ ಪ್ರಸಾರದತ್ತಲೂ ಗಮನಹರಿಸಬೇಕು ಎಂದು ಅವರು ಸಲಹೆ ನೀಡಿದರು. ಸೆನ್ಸಾರ್ ಬೋರ್ಡ್, ಚಲನಚಿತ್ರ ನಿರ್ಮಾಪಕರನ್ನು ಸಂಪರ್ಕಿಸಿ ಅವರಲ್ಲಿರುವ ಚಲನಚಿತ್ರಗಳನ್ನು ದೂರದರ್ಶನಕ್ಕೆ ಒದಗಿಸುವ ಕೆಲಸ ಮಾಡಬೇಕು, ಕಾರ್ಯಕ್ರಮಗಳ ಸ್ವರೂಪ ಮತ್ತು ವಸ್ತು ವಿಷಯಗಳ ಆಯ್ಕೆಗೆ ಸಲಹೆಗಾರರನ್ನು ನೇಮಿಸಬೇಕು ಎಂದು ಸಚಿವರು ಸೂಚಿಸಿದರು. ಸಚಿವಾಲಯದ ಮಾಧ್ಯಮ ವಿಭಾಗಗಳು ಸೃಜಿಸುವ ಕಾರ್ಯಕ್ರಮಗಳನ್ನು ವಿನಿಮಯ ಮಾಡಿಕೊಳ್ಳಬೇಕು. ಸಾಮಾಜಿಕ ಜಾಲತಾಣದಲ್ಲಿ ಕಾರ್ಯಕ್ರಮಗಳನ್ನು ಒದಗಿಸುವ ವ್ಯವಸ್ಥೆ ಕಲ್ಪಿಸಬೇಕು ಎಂದು ಸಚಿವ ಮುರುಗನ್ ಸೂಚಿಸಿದರು.

# ಬಿಡಿಎ ಯೋಜನೆಗಳಿಗೆ ಗುತ್ತಿಗೆ ನೀಡಲು ಲಂಚ ಆರೋಪ ದೀಪಾವಳಿ ಬಳಿಕ ಬಿಎಸ್‌ವೈ ಅರ್ಜಿ ವಿಚಾರಣೆ ಸುಪ್ರೀಂ

**ನವದೆಹಲಿ, ಅ. 18 :** ಬೆಂಗಳೂರು ನಗರ ಅಭಿವೃದ್ಧಿ ಪ್ರಾಧಿಕಾರದ ಯೋಜನೆಗಳನ್ನು ಗುತ್ತಿಗೆ ನೀಡಲು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ಅವರ ಕುಟುಂಬಸ್ಥರು ಲಂಚ ಸ್ವೀಕರಿಸಿದ ಆರೋಪಕ್ಕೆ ಸಂಬಂಧಿಸಿದ ಪ್ರಕರಣವನ್ನು ದೀಪಾವಳಿ ಬಳಿಕ ವಿಚಾರಣೆ ನಡೆಸುವುದಾಗಿ ಸುಪ್ರೀಂಕೋರ್ಟ್ ಹೇಳಿದೆ.

ಲಂಚ ಸ್ವೀಕಾರ ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸಿ ವಿಚಾರಣೆ ನಡೆಸುವಂತೆ ಕೆಳ ಹಂತದ ನ್ಯಾಯಲಯ ನೀಡಿದ ಆದೇಶವನ್ನು ಪ್ರಶ್ನಿಸಿ ಬಿ.ಎಸ್ ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾ. ಜೆಬಿ ಪಾದ್ರಿವಾಲಾ ನೇತೃತ್ವದ ಪೀಠ, ಕಾನೂನಿನ ಅಡಿಯಲ್ಲಿ ಪ್ರಕರಣದ ವಿಚಾರಣೆಗೆ ನಾವು ಉತ್ಸುಕರಾಗಿದ್ದು, ದೀಪಾವಳಿ ರಜೆಯ ಬಳಿಕ ವಿಚಾರಣೆ ನಡೆಸುವುದಾಗಿ ಹೇಳಿತು. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಯೋಜನೆಗಳನ್ನು ಗುತ್ತಿಗೆ ನೀಡಲು ಬಿ.ಎಸ್.ಯಡಿಯೂರಪ್ಪ, ಅವರ ಕುಟುಂಬದ ಸದಸ್ಯರು ಹಾಗೂ ಸಚಿವ ಎಸ್.ಟಿ.ಸೋಮಶೇಖರ್ ಲಂಚ ಪಡೆದಿದ್ದಾರೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಪ್ರಕರಣ ದಾಖಲಿಸಿ, ತನಿಖೆ ನಡೆಸಲು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಲೋಕಾಯುಕ್ತ ಪೊಲೀಸರಿಗೆ ಆದೇಶ ನೀಡಿತ್ತು.



ಈ ಆದೇಶವನ್ನು ಹೈಕೋರ್ಟ್‌ನಲ್ಲಿ ಮಾಜಿ ಸಿಎಂ ಯಡಿಯೂರಪ್ಪ ಪ್ರಶ್ನಿಸಿದ್ದರು, ಪ್ರಕರಣದ ವಿಚಾರಣೆ ನಡೆಸಿದ್ದ ಹೈಕೋರ್ಟ್, ಶೆಲ್ ಕಂಪನಿಗಳ ಮೂಲಕ ಕೋಟ್ಯಂತರ ಹಣವನ್ನು ಅಕ್ರಮವಾಗಿ ವರ್ಗಾವಣೆ ಮಾಡಿದ ಸಂಬಂಧ ದೂರಿನಲ್ಲಿ ಉಲ್ಲೇಖಿಸಿರುವ ಆರೋಪಗಳ ಕುರಿತು ಕಾಗ್ನಿಜೆನ್ಸ್ ತೆಗೆದುಕೊಳ್ಳುವುದಕ್ಕೆ ವಿಶೇಷ ನ್ಯಾಯಾಲಯ ಅಧಿಕಾರ ಹೊಂದಿಲ್ಲ. ಆದರೆ, ಆ ಕುರಿತು ದೂರುದಾರರು ಸೂಕ್ತ ಪ್ರಕ್ರಿಯೆ ಮೂಲಕ ಮುಂದುವರಿಸಬಹುದು ಎಂದು ಹೈಕೋರ್ಟ್ ಸ್ಪಷ್ಟಪಡಿಸಿತ್ತು. ಹೈಕೋರ್ಟ್ ಈ ಆದೇಶವನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್ ಗೆ ಅರ್ಜಿ ಸಲ್ಲಿಸಿದೆ.

**ಪ್ರಕರಣದ ಹಿನ್ನೆಲೆ:** ಬಿಡಿಎ ವಸತಿ ಯೋಜನೆ ಗುತ್ತಿಗೆ ನೀಡುವ ಸಂಬಂಧ ಮುಖ್ಯಮಂತ್ರಿಯಾಗಿದ್ದ ವೇಳೆ ಬಿ.ಎಸ್.ಯಡಿಯೂರಪ್ಪ ಅವರ ಪರವಾಗಿ ಐಎಎಸ್ ಅಧಿಕಾರಿ ಡಾ.ಜಿ.ಸಿ. ಪ್ರಕಾಶ್ 12 ಕೋಟಿ ರೂ. ನೀಡಲು ರಾಮಲಿಂಗಂ ಕನ್ಸ್ಟ್ರಕ್ಷನ್ ಕಂಪನಿಗೆ ಬೇಡಿಕೆಯಿಟ್ಟಿದ್ದರು. ಚಂದ್ರಕಾಂತ್ ರಾಮಲಿಂಗ್ ಅವರು ಕೆ. ರವಿ ಅವರಿಗೆ 12 ಕೋಟಿ ರೂ. ಹಣ ನೀಡಿದ್ದರು. ಆ ಹಣವನ್ನು ಬಿ.ವೈ.ವಿಜಯೇಂದ್ರ ಮೂಲಕ ಯಡಿಯೂರಪ್ಪ ಅವರಿಗೆ ಪಾವತಿಸಲು ಪ್ರಕಾಶ್ ಪಡೆದುಕೊಂಡಿದ್ದರು ಎಂದು ದೂರುದಾರರು ಆರೋಪಿಸಿದ್ದರು. ಪ್ರಕರಣದಲ್ಲಿ ಬಿ.ಎಸ್. ಯಡಿಯೂರಪ್ಪ, ಪುತ್ರ ಬಿ.ವೈ.ವಿಜಯೇಂದ್ರ, ಮೊಮ್ಮಗ ಶಶಿಧರ ಮರಡಿ, ಅಳಿಯ ಸಂಜಯ್ ಶ್ರೀ, ಚಂದ್ರಕಾಂತ ರಾಮಲಿಂಗಮ್, ಸಚಿವ ಎಸ್.ಟಿ.ಸೋಮಶೇಖರ್, ಡಾ.ಜಿ.ಸಿ.ಪ್ರಕಾಶ್, ಕೆ.ರವಿ, ವಿರೂಪಾಕ್ಷಪ್ಪ ಯಮಕನಮರಡಿ ಆರೋಪ ಎದುರಿಸುತ್ತಿದ್ದಾರೆ.

# ಯತ್ನಾಳ್ ವಿರುದ್ಧ ಜಾಮೀನುರಹಿತ ವಾರಂಟ್ ಜಾರಿ

**ಬೆಂಗಳೂರು, ಅ, 18 :** ವಿಜಯಪುರ ನಗರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ ವಿರುದ್ಧ ಜಾಮೀನು ರಹಿತ ವಾರೆಂಟ್ ಜಾರಿಯಾಗಿದ್ದರ ಕುರಿತಾಗಿ ಗೃಹ ಸಚಿವ ಜಿ ಪರಮೇಶ್ವರ್ ಪ್ರತಿಕ್ರಿಯೆ ನೀಡಿದ್ದು ಕೋರ್ಟ್ ಆದೇಶ ನೀಡಿದರೆ ಶಾಸಕ ಯತ್ನಾಳ ಅವರನ್ನು ಬಂಧಿಸಲಾಗುತ್ತದೆ ಎಂದು ತಿಳಿಸಿದರು.

ಬೆಂಗಳೂರಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಯತ್ನಾಳ್ ವಿರುದ್ಧ ಜಾಮೀನು ರಹಿತ ವಾರಂಟ್ ಜಾರಿ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, "ನಾವು ಕೋರ್ಟ್‌ಗೆ




ಕೇಳಿಕೊಂಡಿದ್ದೇವೆ. ಅದು ಜಾಮೀನು ರಹಿತ ವಾರಂಟ್ ಆಗಿದೆ. ಕೋರ್ಟ್ ಸೂಚನೆ ಕೊಟ್ಟರೆ ಕಾನೂನು ಕ್ರಮ ತೆಗೆದುಕೊಳ್ಳುತ್ತೇವೆ. ಬಂಧನ ಪ್ರಕ್ರಿಯೆ ಸೇರಿ ಕಾನೂನು ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.

ಇನ್ನು ಲೋಕಸಭೆ ಚುನಾವಣೆಯಲ್ಲಿ ಟಿಕೆಟ್ ಕೊಡಿಸುವುದಾಗಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಸಹೋದರ ಗೋಪಾಲ್ ಜೋಶಿಯವರು ವ್ಯಕ್ತಿಯೊಬ್ಬರಿಗೆ ಕೋಟ್ಯಾಂತರ ರೂಪಾಯಿ ವಂಚನೆ ಎಸೆಗಿರುವ ಆರೋಪಕ್ಕೆ ಸಂಬಂಧ ಪಟ್ಟಂತೆ ಗೃಹ ಸಚಿವ ಜಿ ಪರಮೇಶ್ವರ್ ಅವರು ಈ ಒಂದು ಕೇಸ್‌ಗೆ ಸಂಬಂಧಪಟ್ಟಂತೆ ಪ್ರಹ್ಲಾದ್ ಜೋಶಿ ಸಹೋದರನಿಗಾಗಿ ಹುಡುಕಾಟ ನಡೆಯುತ್ತಿದೆ ಎಂದು ತಿಳಿಸಿದರು. ಈ ತರಹದ ಕೇಸ್‌ಗಳು ಬಂದಾಗ ಗಂಭೀರವಾಗಿಯೇ ತೆಗೆದುಕೊಳ್ಳಲಾಗುತ್ತದೆ. ಈಗಾಗಲೇ ಅವರಿಗಾಗಿ ಹುಡುಕಾಟ ನಡೆಯುತ್ತಿದೆ, ಅವರಿನ್ನೂ ಸಿಕ್ಕಿಲ್ಲ ಎಂದು ಅವರು ತಿಳಿಸಿದರು.

# ಶಿಗ್ಗಾವಿ, ಸಂಡೂರು ಕ್ಷೇತ್ರಗಳಲ್ಲಿ ಇಂದು ಜೆಡಿಎಸ್ ನಾಯಕರ ಸಭೆ ನಿಖಿಲ್ ಕುಮಾರಸ್ವಾಮಿ, ಸುರೇಶ್ ಬಾಬು ಸೇರಿ ಐವರು ನಾಯಕರ ಭೇಟಿ

**ಬೆಂಗಳೂರು, ಅ, 18 :** ಉಪ ಚುನಾವಣೆ ನಿಮಿತ್ತ ಎನ್‌ಡಿಎ ಮೈತ್ರಿಕೂಟಕ್ಕೆ ಶಕ್ತಿ ತುಂಬುವ ಕಾರ್ಯತಂತ್ರದ ಭಾಗವಾಗಿ ನಾಳೆ (ಶನಿವಾರ) ರಾಜ್ಯ ಜೆಡಿಎಸ್ ನಾಯಕರು ಶಿಗ್ಗಾವಿ ಹಾಗೂ ಸಂಡೂರು ವಿಧಾನಸಭೆ ಕ್ಷೇತ್ರಗಳಿಗೆ ಭೇಟಿ ನೀಡಿ ಕಾರ್ಯಕರ್ತರು, ಮುಖಂಡರ ಸಭೆ ನಡೆಸಲಿದ್ದಾರೆ.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಯುವ ಜನತಾದಳ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ, ಮಾಜಿ ಸಚಿವರಾದ



ಬಂಡೆಪ್ಪ ಕಾಶೆಂಪೂರ್, ವೆಂಕಟರಾವ್ ನಾಡಗೌಡ ಹಾಗೂ ಆಲ್ಕೋಡ್ ಹನುಮಂತಪ್ಪ ಅವರು ಈ ಸಭೆಗಳಲ್ಲಿ ಭಾಗಿಯಾಗಲಿದ್ದಾರೆ.

ಸ್ಥಳೀಯ ಜೆಡಿಎಸ್ ಮುಖಂಡರು, ಕಾರ್ಯಕರ್ತರನ್ನು ಸಜ್ಜುಗೊಳಿಸುವ ನಿಟ್ಟಿನಲ್ಲಿ ಈ ಸಭೆಗಳನ್ನು ಆಯೋಜನೆ ಮಾಡಲಾಗಿದೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ದೇಶಾದ್ಯಂತ ಕಾಂಗ್ರೆಸ್ ಪಕ್ಷದ ವಿರುದ್ಧ ಹೋರಾಟ ನಡೆಸುತ್ತಿದ್ದಾರೆ.

ಕಾಂಗ್ರೆಸ್ ಮುಕ್ತ ಭಾರತ ಮಾಡುವ ಅವರ ಸಂಕಲ್ಪದ ಭಾಗವಾಗಿ ಕೇಂದ್ರ ಸಚಿವರಾದ ಕುಮಾರಸ್ವಾಮಿ ಅವರ ಮಾರ್ಗದರ್ಶನದಲ್ಲಿ ಸಭೆಗಳನ್ನು ಆಯೋಜನೆ ಮಾಡಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಟಿಕೆಟ್ ಆಮಿಷವೊಡ್ಡಿ 2 ಕೋಟಿ ರೂ. ವಂಚನೆ

## ತನಿಖೆ ಅಂತಿಮ ಹಂತ

**ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ದರ್ಶನ್ ಹಾಗೂ ಇನ್ನಿತರರಿಗೆ ರಾಜ್ಯಾತಿಥ್ಯ ನೀಡಲಾಗಿರುವ ಬಗ್ಗೆ ದಾಖಲಾಗಿರುವ ಮೂರು ಪ್ರಕರಣಗಳ ತನಿಖೆ ಅಂತಿಮ ಹಂತದಲ್ಲಿದೆ. ಸದ್ಯದಲ್ಲಿಯೇ ಚಾರ್ಜ್‌ಶೀಟ್ ಸಲ್ಲಿಸುತ್ತೇವೆ ಎಂದರು. ಮಾದಕವಸ್ತುಗಳನ್ನು ಸಂಪೂರ್ಣವಾಗಿ ತಡೆಗಟ್ಟಲು ನಾವು ಪಣ ತೊಟ್ಟಿದ್ದೇವೆ. ಮಾದಕವಸ್ತು ಸಾಗಣೆ, ಮಾರಾಟ, ಸಂಗ್ರಹಣೆ ಬಗ್ಗೆ ಪ್ರತಿನಿತ್ಯ ನಮ ಪೊಲೀಸರು ನಿಗಾ ವಹಿಸಿದ್ದಾರೆ ಎಂದು ಇದೇ ವೇಳೆ ಸುದ್ದಿಗಾರರ ಪ್ರಶ್ನೆಗೆ ಆಯುಕ್ತರು ಪ್ರತಿಕ್ರಿಯಿಸಿದ್ದಾರೆ.**



**ಬೆಂಗಳೂರು, ಅ, 18:** ಬಿಜೆಪಿ ಟಿಕೆಟ್ ಕೊಡಿಸುವುದಾಗಿ ಎರಡು ಕೋಟಿ ಸುಲಿಗೆ ಮಾಡಿದ್ದಾರೆಂಬ ಪ್ರಕರಣದ ಬಗ್ಗೆ ಬಸವೇಶ್ವರ ನಗರ ಠಾಣೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎಂದು ನಗರ ಪೊಲೀಸ್ ಆಯುಕ್ತ ದಯಾನಂದ ಅವರು ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಆರೋಪಿಗಳು ಟಿಕೆಟ್ ಆಮಿಷವೊಡ್ಡಿ 2 ಕೋಟಿ ರೂ. ಪಡೆದುಕೊಂಡು ಟಿಕೆಟ್ ಕೊಡಿಸದೆ ಹಾಗೂ ಹಣವನ್ನೂ ಹಿಂದಿರುಗಿಸದೆ ವಂಚನೆ ಹಾಗೂ ಜಾತಿ ನಿಂದನೆ ಮಾಡಿದ್ದಾರೆಂದು ದೂರುದಾರರು ಆರೋಪಿಸಿದ್ದಾರೆ.

ಈ ಬಗ್ಗೆ ಬಸವೇಶ್ವರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ. ಸಹೋದರ-ಸಹೋದರಿ ಸೇರಿದಂತೆ ಮೂವರು ಆರೋಪಿಗಳು ಹಂತ ಹಂತವಾಗಿ 2 ಕೋಟಿ ರೂ. ಹಣ ಪಡೆದುಕೊಂಡಿರುವುದು ಗೊತ್ತಾಗಿದೆ. ತನಿಖೆ ಪ್ರಗತಿಯಲ್ಲಿದೆ ಎಂದು ಅವರು ಹೇಳಿದರು.

# ಗೌರಿ ಲಂಕೇಶ್ ಹಂತಕರಿಗೆ ಸನ್ಮಾನ, ಜಾತ್ಯತೀತರು ಮಾತನಾಡಲಿ: ಕವಿತಾ ಲಂಕೇಶ್

**ಬೆಂಗಳೂರು, ಅ, 18 :** ಪತ್ರಕರ್ತೆ, ಸಾಮಾಜಿಕ ಹೋರಾಟಗಾರ್ತಿ ಗೌರಿ ಲಂಕೇಶ್ ಅವರ ಹಂತಕರನ್ನು ಸನ್ಮಾನಿಸುವವರು ಗೋಡ್ಸೆ ವಂಶಸ್ಥರು ಎಂದು ಗೌರಿ ಅವರ ಸಹೋದರಿ ಕವಿತಾ ಲಂಕೇಶ್ ಆಕ್ರೋಶ ಹೊರ ಹಾಕಿದರು. ಪ್ರಕರಣದಲ್ಲಿ ಜಾಮೀನಿನ ಮೇಲೆ ಇತ್ತೀಚೆಗೆ ರಿಲೀಸ್ ಆಗಿದ್ದ ಆರೋಪಿಗಳಾದ ಪರಶುರಾಮ್ ವಾಗ್ಮೋಡೆ ಹಾಗೂ ಮನೋಹರ್ ಯಡವೆ ಎಂಬಾತರನ್ನು ಹಿಂದೂ ಸಂಘಟನೆಯ ಮುಖಂಡರಿಂದ ವಿಜಯಪುರ ಜಿಲ್ಲೆಯಲ್ಲಿ ಭರ್ಜರಿಯಾಗಿ ಸನ್ಮಾನ ಮಾಡಿ, ಸ್ವಾಗತಿಸಲಾಗಿತ್ತು. ಅಂತವರನ್ನು ಬಂಧಿಸದೇ ಅದನ್ನು ವಿರೋಧಿಸಿ ಪ್ರತಿಭಟಿಸುವವರನ್ನು ವಶಕ್ಕೆ ಪಡೆಯುವುದು ಸರಿಯಲ್ಲ ಎಂದು ಪೊಲೀಸರ ವಿರುದ್ಧ ಆಕ್ರೋಶ ಹೊರಹಾಕಿದರು. ಹಂತಕರನ್ನು ಈ ರೀತಿ ಸನ್ಮಾನಿಸಿದರೆ ಇನ್ನೂ ನಾಲ್ಕಾರು ಜನ ಇಂಥ ಕೊಲೆಗಡುಕರು ಹುಟ್ಟಿಕೊಳ್ಳುವ ಸಾಧ್ಯತೆ ಇರುತ್ತದೆ. ಕೊಲೆ ಮಾಡಲು ಅವರಿಗೆ ಪರವಾನಗಿ




ಸಿಕ್ಕಂತಾಗುತ್ತದೆ. ತ್ವರಿತ ನ್ಯಾಯಾಲಯವನ್ನು ರಚಿಸಿ ಗೌರಿ ಸಾವಿಗೆ ನ್ಯಾಯ ದೊರಕಿಸಿಕೊಡಬೇಕು. ಇನ್ನು ಜಾತ್ಯತೀತರು ಎಂದು ಹೇಳಿಕೊಳ್ಳುವವರು, ಸಿಎಂ ಸಿದ್ದರಾಮಯ್ಯ ಮುಂತಾದವರು ಹಂತಕರನ್ನು ಸನ್ಮಾನಿಸಿದ್ದನ್ನು ಖಂಡಿಸಲಿ ಎಂದು ಆಗ್ರಹಿಸಿದರು.

ಇದೇ ವೇಳೆ ಗೌರಿ ಲಂಕೇಶ್ ಅವರ ತಾಯಿ ಇಂದಿರಾ ಲಂಕೇಶ್ ಮಾತನಾಡಿ, ಆರೋಪಿಗಳನ್ನು ಸನ್ಮಾನ ಮಾಡಿರುವುದು ಸರಿನಾ, ಅವರೇನು ದೊಡ್ಡ ಸಾಧನೆ ಮಾಡಿದ್ದಾರಾ, ಇದನ್ನು ಕೇಳುವವರು ಯಾರು ಎಂದು ಪ್ರಶ್ನಿಸಿದರು. ಇದು ಹೀಗೆ ಮುಂದುವರಿದರೆ ಜನಪರ ಸರ್ಕಾರ ಎಂಬ ಮಾತಿಗೆ ಏನು ಅರ್ಥ ಇದೆ ಇದು ಅನ್ಯಾಯವೆಂದರು. ಶಾಸಕ ಬಿ.ಆರ್.ಪಾಟೀಲ್ ಮಾತನಾಡಿ ಸಂಘ ಪರಿವಾರದವರು ಹಂತಕರನ್ನು ಸನ್ಮಾನಿಸಿದ್ದು ಖಂಡನೀಯ ಎಂದರು. ಹಿರಿಯ ಸಾಮಾಜಿಕ ಹೋರಾಟಗಾರ್ತಿ ಬಿ.ಟಿ.ಲಲಿತಾ ನಾಯ್ಕ್ ಸೇರಿದಂತೆ ಇನ್ನಿತರರು ಇದ್ದರು.

# ಇ.ಡಿ.ಯಿಂದ ಪ್ರಾಮಾಣಿಕ ತನಿಖೆ, ಸಿಎಂ ರಾಜೀನಾಮೆ ನೀಡಿ ಸಹಕರಿಸಲಿ: ಯದುವೀರ



**ಮೈಸೂರು, ಅ. 18 :** ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಅವರ ಕುಟುಂಬವು ನೇರವಾಗಿ ಭಾಗಿಯಾಗಿದೆ ಎಂದು ಸಂಸದ ಯದುವೀರ್ ಒಡೆಯರ್ ಅವರು ಗಂಭೀರವಾಗಿ ಆರೋಪಿಸಿದರು. ಮುಡಾ ಕಚೇರಿ ಮೇಲೆ ಇಂದು ED (ಜಾರಿ ನಿರ್ದೇಶನಾಲಯ) ಅಧಿಕಾರಿಗಳು ನಡೆಸಿದ ಕುರಿತಾಗಿ ಪ್ರತಿಕ್ರಿಯೆ ನೀಡಿದ ಅವರು, ಮುಡಾ ಹಗರಣವನ್ನು ಇ.ಡಿ. ಗಂಭೀರಾವಾಗಿ ಪರಿಗಣಿಸಿದೆ. ಜಾರಿ ನಿರ್ದೇಶನಾಲಯ ಸಂಸ್ಥೆಯು ಪ್ರಾಮಾಣಿಕವಾಗಿ ತನ್ನ ತನಿಖೆಯನ್ನು ಮಾಡುತ್ತಿದೆ ಎಂಬ ವಿಶ್ವಾಸ ನನ್ನದು. ಹೀಗಾಗಿ ಮುಂದೆ ತನಿಖಾ ವರದಿ ಹೇಗೆ ಹೊರ ಬೀಳಲಿದೆ ಅಂತಾ ಕಾದು ನೋಡೋಣ ಎಂದರು.

ಮುಡಾದಿಂದ ಪಡೆದ 14 ಸೈಟ್‌ಗಳನ್ನು ಸಿಎಂ ಅವರ ಪತ್ನಿ ವಾಪಸ್ ನೀಡಿದ್ದಾರೆ. ಇದರ ಅರ್ಥ ಸಿಎಂ ಕುಟುಂಬವು ತನ್ನ ತಪ್ಪನ್ನು ಒಪ್ಪಿಕೊಂಡಂತೆ. ಆದ್ದರಿಂದ ಸಿಎಂ ರಾಜೀನಾಮೆ ನೀಡುವ ಮೂಲಕ ತನಿಖೆಗೆ ಸಹಕರಿಸುವುದು ಒಳ್ಳೆಯದ್ದು. ಈ ಮಾತನ್ನು ನಾವು ಹಗರಣ ಹೊರಬಿದ್ದಾಗಿನಿಂದಲೂ ಹೇಳುತ್ತಲೇ ಇದ್ದೇವೆ ಎಂದು ಪುನರುಚ್ಚರಿಸಿದರು.

# ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಸಿಎಂಗೆ ಕೆವಿವಿಯು ಮನವಿ

**ಕೊಪ್ಪಳ, ಅ. 18 :** ಕರ್ನಾಟಕ ವೃತ್ತಿಪರ ವ್ಯವಸಾಯ ಯೂನಿಯನ್ ವತಿಯಿಂದ ವ್ಯವಸಾಯ ಕೂಲಿ ಕಾರ್ಮಿಕರ ವಿವಿಧ ಬೇಡಿಕೆಯನ್ನು ಈಡೇರಿಸಲು ಒತ್ತಾಯಿಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಸಿಎಂಗೆ ಮನವಿ ಸಲ್ಲಿಸಲಾಯಿತು.

60 ವರ್ಷ ಪೂರೈಸಿದ ಪ್ರತಿಯೊಬ್ಬ ವ್ಯಕ್ತಿಗೂ ವೃದ್ಯಾಪ್ಯ ಪಿಂಚಣಿ ಅಲ್ಲದೆ ನಿವೃತ್ತಿ ವೇತನವನ್ನು ರೂ. 5 ಸಾವಿರ ಗೆ ಕಡಿಮೆ ಇಲ್ಲದಂತೆ ನೀಡಬೇಕು, ಪ್ರತಿ ಕುಟುಂಬ ಕಾರ್ಮಿಕರಿಗೆ ಉಚಿತವಾಗಿ ಉತ್ತಮ ಮನೆ ನಿರ್ಮಿಸಿಕೊಡಬೇಕು, ಮಾಸಿಕ ವೇತನಕ್ಕೆ ಸಮಾನವಾಗಿ ಹೆರಿಗೆ ವೇತನವನ್ನು ತಿಂಗಳಿಗೆ ರೂ.10 ಸಾವಿರ ದಂತೆ 6 ತಿಂಗಳವರೆಗೆ ನೀಡಬೇಕು, ಕೃಷಿ ಕಾರ್ಮಿಕರಿಗೆ ಸಹಜ ಸಾವು ಮತ್ತು ಆಕಸ್ಮಿಕ ಮರಣಕ್ಕೆ 5 ಲಕ್ಷ ರೂ.ಗಳ ಪರಿಹಾರ ನೀಡಬೇಕು, ವೈದ್ಯಕೀಯ ಸೌಲಭ್ಯವನ್ನು ಪಡೆಯಲು ಇ.ಎಸ್.ಐ. ಯೋಜನೆಯಡಿಯಲ್ಲಿ ಪ್ರತಿಯೊಬ್ಬ ಕೃಷಿ ಕಾರ್ಮಿಕರು ಹೆಸರನ್ನು ನೋಂದಾಯಿಸಿಕೊಳ್ಳಬೇಕು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆ ಆಗ್ರಹಿಸಲಾಯಿತು.


ಅನುದಾನರಹಿತ ಕನ್ನಡ ಮಾಧ್ಯಮ ಶಾಲಾ–ಕಾಲೇಜುಗಳಿಗೆ ನೆರವು ನೀಡುವಂತೆ ಒತ್ತಾಯಿಸಿ ಫೆಡರೇಷನ್ ಆಫ್ ಕರ್ನಾಟಕ ರಾಜ್ಯ ಅನುದಾನರಹಿತ ಕನ್ನಡ ಮಾಧ್ಯಮ ಶಾಲಾ–ಕಾಲೇಜುಗಳ ಸಿಬ್ಬಂದಿ ಶುಕ್ರವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.

# ಅನುದಾನ ಬಳಕೆಯಲ್ಲಿ ಶೇ.100ರಷ್ಟು ಆರ್ಥಿಕ, ಭೌತಿಕ ಪ್ರಗತಿ ಸಾಧಿಸಿ: ಡಾ. ಏಕ್‌ರೂಪ್ ಕೌರ್

**ಕೋಲಾರ, ಅ.18–** 2024–25ನೇ ಸಾಲಿಗೆ ಇಲಾಖೆಗಳಿಗೆ ಬಿಡುಗಡೆಯಾಗಿರುವ ಅನುದಾನಕ್ಕೆ ಸಂಬಂಧಿಸಿದಂತೆ ಆಯಾ ಇಲಾಖೆಗಳು ಕ್ರಿಯಾಯೋಜನೆ, ಟೆಂಡರ್ ಪ್ರಕ್ರಿಯೆ, ಫಲಾನುಭವಿಗಳ ಆಯ್ಕೆ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ ಬಿಡುಗಡೆಯಾಗಿರುವ ಅನುದಾನವನ್ನು ಸಂಪೂರ್ಣ ಖರ್ಚು ಮಾಡುವ ಮೂಲಕ ಶೇಕಡ 100 ರಷ್ಟು ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸಿ ಎಂದು ಕೋಲಾರ ಜಿಲ್ಲೆಯ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ. ಏಕ್‌ರೂಪ್ ಕೌರ್ ಅವರು ಹೇಳಿದರು.

ಕೋಲಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಲಾಖೆಗಳಿಗೆ ಬಿಡುಗಡೆಯಾದ ಹಣವನ್ನು ಸಂಪೂರ್ಣವಾಗಿ ಖರ್ಚು ಮಾಡಬೇಕು. ಮಾರ್ಚ್ ಅಂತ್ಯದವರೆಗೆ ಕಾಯದೆ ತ್ವರಿತವಾಗಿ ಎಲ್ಲಾ ಪ್ರಕ್ರಿಯೆ ಪೂರ್ಣಗೊಳಿಸಿ ಡಿಸೆಂಬರ್ ಅಂತ್ಯ ಅಥವಾ ಜನವರಿ ಮಾಹೆಯೊಳಗೆ ಶೇಕಡ 100 ರಷ್ಟು ಆರ್ಥಿಕ ಮತ್ತು ಭೌತಿಕ ಪ್ರಗತಿ ಸಾಧಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.



ನರೇಗಾ ಯೋಜನೆಯ ಸದ್ಬಳಕೆ ಆಗಬೇಕು. ನರೇಗಾ ಯೋಜನೆಯಡಿ ಹಲವು ಇಲಾಖೆಗಳಿಗೆ ಅನುದಾನ ಬಿಡುಗಡೆ ಆಗುತ್ತದೆ. ಅನುದಾನ ಸದ್ಬಳಕೆಯಾಗಬೇಕು. ಅರಣ್ಯ ಇಲಾಖೆಯಲ್ಲಿ ನರೇಗಾ ಯೋಜನೆಯಡಿ ಗಿಡ ನೆಡುವ ಅರಣ್ಯೀಕರಣ ಕಾರ್ಯಕ್ರಮ ಒಂದು ಉತ್ತಮ ಯೋಜನೆಯಾಗಿದೆ ಎಂದರು.

ಸಾಮಾಜಿಕ ಮತ್ತು ಪ್ರಾದೇಶಿಕ ಅರಣ್ಯ ವಿಭಾಗವು ಹೆಚ್ಚು ಹೆಚ್ಚು ಸಸಿಗಳನ್ನು ನಾಟಿ ಮಾಡಿ ಬೇಡಿಕೆ ಅನುಗುಣವಾಗಿ ರೈತರಿಗೆ, ಸಾರ್ವಜನಿಕರಿಗೆ ಹಂಚಬೇಕು. ಹಾಗೆಯೇ ವಿವಿಧ ವನಮಹೋತ್ಸವ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸರ್ಕಾರಿ ಜಾಗಗಳಲ್ಲಿ, ಬೆಟ್ಟಗುಡ್ಡಗಳಲ್ಲಿ, ಪ್ರವಾಸಿ ತಾಣಗಳಲ್ಲಿ, ರಸ್ತೆ ಬದಿಗಳಲ್ಲಿ ಹೆಚ್ಚೆಚ್ಚು ಸಸಿಗಳನ್ನು ನೆಡಬೇಕು. ನೆಟ್ಟ ನಂತರ ಸಸಿಗಳನ್ನು ಪೋಷಿಸಿ ಬೆಳೆಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪ್ರಸ್ತುತ ಈಗಿರುವ ವಾತಾವರಣ ಪರಿಸ್ಥಿತಿಯಲ್ಲಿ ಹವಾಮಾನ ವೈಪರೀತ್ಯ, ಪರಿಸರ ಸಂರಕ್ಷಣೆ, ಪ್ರಕೃತಿ ಸಮತೋಲನ ಕಾಪಾಡಲು ಗಿಡ ಮರಗಳನ್ನು ಬೆಳೆಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಅವರು ತಿಳಿಸಿದರು. ಜಿಲ್ಲೆಯಲ್ಲಿ ಪ್ರಸ್ತುತ ರಸಗೊಬ್ಬರ ಕೊರತೆ ಇರುವುದಿಲ್ಲ. ಸೆಪ್ಟೆಂಬರ್ ಮಾಹೆಯಲ್ಲಿ ಮಳೆ ಕೊರತೆ ಆಗಿದೆ. ಆದರೆ ಪ್ರಸಕ್ತ ಮಾಹೆಯಲ್ಲಿ ಸಾಕಷ್ಟು ಮಳೆಯಾಗಿದೆ ಎಂದು ಕೃಷಿ ಅಧಿಕಾರಿ ಸಭೆಗೆ ಮಾಹಿತಿ ನೀಡಿದರು.

ಎಸ್.ಎಸ್.ಎಲ್.ಸಿ, ಪಿಯುಸಿ ಯಲ್ಲಿ ಈ ವರ್ಷ ಉತ್ತಮ ಫಲಿತಾಂಶ ಬರಲು ಯೋಜನೆ ರೂಪಿಸಿ. ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸರ್ಕಾರಿ ಶಾಲೆಗಳನ್ನು ದತ್ತು ನೀಡಿ. ಶಾಲಾ ಕಾಲೇಜು ಶಿಕ್ಷಕರಿಗೆ, ಮುಖ್ಯೋಪಾಧ್ಯಾಯರಿಗೆ, ಪ್ರಾಂಶುಪಾಲರಿಗೆ ಸೂಕ್ತ ತರಬೇತಿ, ಮಾರ್ಗಸೂಚಿಗಳನ್ನು ನೀಡಿ, ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಹೆಚ್ಚು ಒತ್ತು ನೀಡಬೇಕು. ಕಂಪೌಂಡ್ ಗೋಡೆ ನಿರ್ಮಿಸಲು ಹಾಗೂ ಆಟದ ಮೈದಾನಗಳನ್ನು ನಿರ್ಮಿಸಲು ಕ್ರಮ ವಹಿಸಿ, ಮಕ್ಕಳಿಗೆ ಆಟದ ಪರಿಕರಗಳನ್ನು ಒದಗಿಸಲು ಕ್ರಮ ವಹಿಸಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಆರೋಗ್ಯ ಇಲಾಖೆಲ್ಲಿ18 ವೈದ್ಯರ ಕೊರತೆ ಇರುವುದಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಸಭೆಗೆ ತಿಳಿಸಿದರು.ಅದಕ್ಕೆ ಕಾರ್ಯದರ್ಶಿಗಳು ಹೊರಗುತ್ತಿಗೆ ಮೂಲಕ ತುಂಬಲು ಕ್ರಮ ವಹಿಸಲು ಸೂಚಿಸಿದರು. ಜಿಲ್ಲಾಯಲ್ಲಿ ಡೆಂಗ್ಯೂ ಪ್ರಕರಣಗಳು ಗಣನಿಯವಾಗಿ ಕಡಿಮೆಯಾಗಿರುವುದಕ್ಕೆ ಅಭಿನಂದಿಸಿದರು.ಇದೇ ಸಂದರ್ಭದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಸದರಿ ಯೋಜನೆಗೆ ಕ್ಯೂ ಆರ್ ಕೋಡ್ ಸ್ಕ್ಯಾನ್ ಮಾಡುವುದರಿಂದ ಆಯ್ಕೆಯಾಗುವವರೆಗಿನ ಸಮಸ್ತ ಪ್ರಕ್ರಿಯೆ ಆನ್ ಲೈನ್ ನಲ್ಲಿ ಆಗಲಿದೆ. ಇದರ ಸದುಪಯೋಗ ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಅವರು ತಿಳಿಸಿದರು.

# ವಿಜಯಪುರದಲ್ಲಿ 10 ಸಾವಿರ ಎಕರೆ ವಕ್ಫ್ ಬೋರ್ಡ್‌ಗೆ: ಜಮೀರ್ ಆದೇಶ

**ವಿಜಯಪುರ, ಅ.18–** ಜಿಲ್ಲೆಯಲ್ಲಿ ಇತರ ಹಲವು ಇಲಾಖೆಗಳಿಗೆ ಸೇರಿದ ಸುಮಾರು 10 ಸಾವಿರ ಎಕರೆ ಜಮೀನನ್ನು ವಕ್ಫ್ ಬೋರ್ಡ್ ತನ್ನದು ಎಂದು ಹಕ್ಕು ಸಾಧಿಸಿದ್ದು, ಇದರ ಸರ್ವೆಗೆ ಸಚಿವ ಜಮೀರ್ ಅಹಮದ್ ಆದೇಶ ನೀಡಿದ್ದಾರೆ.

ಇದು ಹಿಂದೂಗಳನ್ನು ಕೆರಳಿಸಿದ್ದು, ಪ್ರತಿಭಟನೆಗೆ ಸಜ್ಜಾಗಿದ್ದಾರೆ. ವಕ್ಫ್ ಬೋರ್ಡ್ ತಿದ್ದುಪಡಿ ಬಿಲ್ ಚರ್ಚೆಯಲ್ಲಿರುವಾಗಲೇ ವಿಜಯಪುರ ದಲ್ಲಿ ಈ ತಗಾದೆ ಎದ್ದಿದೆ.

ವಕ್ಫ್ ಬೋರ್ಡ್ ಸುಮಾರು 10 ಸಾವಿರ ಎಕರೆ ತನ್ನದು ಎಂದು



ಹೇಳಿ ಕೊಳ್ಳುತ್ತಿದೆ. ಸಚಿವ ಜಮೀರ್ ಅಹ್ಮದ್ ಆಸ್ತಿ ಸರ್ವೆಗೆ ಆದೇಶ ನೀಡಿದ್ದಾರೆ. ಇದರಲ್ಲಿ ಇದರಲ್ಲಿ ಕಂದಾಯ ಇಲಾಖೆಯ 2148 ಎಕರೆ, ಗ್ರಾಮೀಣಾಭಿವೃದ್ಧಿ ಇಲಾಖೆಯ 1012 ಎಕರೆ, ನಗರಾಭಿವೃದ್ಧಿ ಇಲಾಖೆ 322 ಎಕರೆ ಜಮೀನು ಒಳಗೊಂಡಿದೆ.

ಇದೆಲ್ಲವೂ ವಕ್ಫ್ ಆಸ್ತಿ ಎಂದು ಸರ್ವೆ ಮಾಡಲು ಸಚಿವ ಜಮೀರ್ ಅಹ್ಮದ್ ಅಧಿಕಾರಿಗಳಿಗೆ ಆದೇಶ ನೀಡಿದ್ದಾರೆ. 45 ದಿನಗಳೊಳಗಾಗಿ ಸರ್ವೆ ನಡೆಸಲು ಆದೇಶ ನೀಡಿದ್ದಾರೆ. ಈಗಾಗಲೇ ಭೂಮಿ ಸರ್ವೆ ಬಗ್ಗೆ ನೋಟಿಸ್ ಪಡೆದವರು ಆತಂಕ ಕ್ಕೊಳಗಾಗಿ ದ್ದಾರೆ. ಪಹಣಿಯಲ್ಲಿ ವಕ್ಫ್ ಹೆಸರು ಸೇರಿಸಲು, ವಕ್ಫ್ ಜಮೀನು ಮಾರಾಟವಾಗದಂತೆ ಫ್ಲಾಗಿಂಗ್ ಮಾಡಲು ಸಚಿವರು ಸೂಚನೆ ನೀಡಿದ್ದಾರೆ ಎನ್ನಲಾಗಿದೆ.

# ಬಿಜೆಪಿ ಅಭ್ಯರ್ಥಿಯ ಬಗ್ಗೆ ತನ್ವೀರ್ ಸೇಠ್ ಲೇವಡಿ

**ಮೈಸೂರು, ಅ. 18–** ಚನ್ನಪಟ್ಟಣ ಉಪ ಚುನಾವಣೆಗೆ ಸಂಬಂಧಿಸಿದಂತೆ ಬಿಜೆಪಿ – ಜೆಡಿಎಸ್ ಮೈತ್ರಿ ಅಭ್ಯರ್ಥಿ ಆಯ್ಕೆ ಕಸರತ್ತಿನ ಬಗ್ಗೆ ಶಾಸಕ ತನ್ವೀರ್ ಸೇಠ್ ಲೇವಡಿ ಮಾಡಿದ್ದಾರೆ.

ಸುದ್ದಿಗಾರರೊಂದಿಗೆ, ರಾಷ್ಟ್ರ ರಾಜಕಾರಣವೇ ಬೇರೆ. ಚನ್ನಪಟ್ಟಣ ಪರಿಸ್ಥಿತಿಯೇ ಬೇರೆ. ಉಪ ಚುನಾವಣೆಯಲ್ಲಿ ಚನ್ನಪಟ್ಟಣ ಬಹಳ ವಿಶೇಷವಾಗಿದೆ. ಶಿಗ್ಗಾವ್, ಸಂಡೂರು ಒಂದಾದರೆ, ಚನ್ನಪಟ್ಟಣ ಅತ್ಯಂತ ಕುತೂಹಲ ಮೂಡಿಸಿದೆ. ಈಗಾಗಲೇ ಅಭ್ಯರ್ಥಿ ಆಕಾಂಕ್ಷಿಗಳಿಂದ ಅರ್ಜಿ ಆಹ್ವಾನ ಮಾಡಲಾಗಿದೆ.ಮೈತ್ರಿ ಅಭ್ಯರ್ಥಿ ಯಾರು, ಕಾಂಗ್ರೆಸ್‌ನಿಂದ ಯಾರು ಎಂಬುದು ಪ್ರಶ್ನೆ. ಡಿಸಿಎಂ ನಾನೇ ಅಭ್ಯರ್ಥಿ ಅಂತ ಹೇಳಿದ್ದಾರೆ. ಆದಾಗ್ಯೂ ಪರಿಸ್ಥಿತಿಗೆ ಅನುಗುಣವಾಗಿ ಕಾಂಗ್ರೆಸ್ ಅಭ್ಯರ್ಥಿ ಹಾಕುವ ಕೆಲಸ ಮಾಡುತ್ತೆ. ನಾಲ್ಕೈದು ದಿನದಲ್ಲಿ ಚನ್ನಪಟ್ಟಣ ಕಾಂಗ್ರೆಸ್ ಅಭ್ಯರ್ಥಿ ಘೋಷಣೆ ಆಗುತ್ತದೆ ಎಂದು ಅವರು ತಿಳಿಸಿದರು.

ಡಿ.ಕೆ.ಸುರೇಶ್ ರಾಜಕೀಯವಾಗಿ ಮುಂದುವರಿಯಬೇಕಾದ ಅನಿವಾರ್ಯತೆ ಪಕ್ಷಕ್ಕೆ ಇದೆ. ಸಾಮಾಜಿಕ ನ್ಯಾಯದ ವಿಚಾರದಲ್ಲಿ ಶಿಗ್ಗಾವಿಯಲ್ಲಿ ಮುಸ್ಲಿಂ ಅಭ್ಯರ್ಥಿ ನಿಲ್ಲಿಸಿ ಅಂತ ನಾನೂ ಕೂಡ ಮನವಿ ಮಾಡಿದ್ದೇನೆ ಎಂದರು.ಬಿಜೆಪಿ ಅಧಿಕಾರದಲ್ಲಿದ್ದಾಗ ಒಂದು ಸಮುದಾಯ ಗುರಿಯಾಗಿ ಇಟ್ಟುಕೊಂಡು ಅಮಾಯಕರ ಮೇಲೆ ಕೇಸ್ ಹಾಕಿತ್ತು. ಆ ಕೇಸ್ ಈಗ ವಾಪಾಸ್ ಪಡೆದಿದ್ದೇವೆ. ಇದರಲ್ಲಿ ತಪ್ಪೇನಿದೆ ಎಂದು ಶಾಸಕ ತನ್ವೀರ್ ಸೇಠ್ ಪ್ರಶ್ನಿಸಿದರು.



ಮ್ಯುಡಾ ಅಧ್ಯಕ್ಷ ಸ್ಥಾನಕ್ಕೆ ಕೆ. ಮರಿಗೌಡ ರಾಜೀನಾಮೆ ವಿಚಾರ ಕುರಿತು ಪ್ರತಿಕ್ರಿಯಿಸಿದ ಶಾಸಕ ತನ್ವೀರ್ ಸೇಠ್, ಆರೋಗ್ಯ ದೃಷ್ಟಿಯಿಂದ ರಾಜೀನಾಮೆ ಕೊಟ್ಟಿದ್ದೇನೆ ಎಂದಿದ್ದಾರೆ. ರಾಜೀನಾಮೆ ತನಿಖೆಗೆ ಒಳ್ಳೆಯದೇ. ಮರೀಗೌಡ ರಾಜೀನಾವೆ ುಯಿಂದ ಮೂಡಾ ತನಿಖೆಗೆ ಬಲ ಬಂದಿದೆ. ಮರಿಗೌಡ ಸಿಎಂ ಆಪ್ತರು. ಪಾರದರ್ಶಕ ತನಿಖೆ ಸಹಕಾರಿ ಆಗಲಿ ಅಂತ ರಾಜೀನಾಮೆ ಕೊಟ್ಟಿದ್ದಾರೆ. ಮುಡಾದಿಂದ ಸಿಎಂಗೆ ಅಂಟಿರುವ ಕಳಂಕ ದೂರು ಆಗತ್ತೆ ಎಂದರು.

50:50 ಅನುಪಾತದಲ್ಲಿ ಮಂಜೂರಾಗಿರುವ ಎಲ್ಲಾ ಸೈಟ್ ವಾಪಸ್ ಪಡೆದುಕೊಳ್ಳಿ: ಸಿಎಂ ಪತ್ನಿ 14 ಸೈಟ್ ವಾಪಸ್ ಕೊಟ್ಟ ರೀತಿಯಲ್ಲೆ ಅವತ್ತಿನ ಸಭೆಯಲ್ಲಿ ಮಂಜೂರಾದ ಉಳಿದ 161 ಸೈಟ್ ಕೂಡ ವಾಪಸ್ ಪಡೆಯಿರಿ ಎಂದು ಶಾಸಕ ತನ್ವೀರ್ ಸೇಠ್ ಆಗ್ರಹಿಸಿದರು. ಮೂಡಾದಲ್ಲಿ 50:50 ಅನುಪಾತದಲ್ಲಿ ಮಂಜೂರಾಗಿರುವ ಎಲ್ಲಾ ಸೈಟ್ ವಾಪಸ್ ಪಡೆದುಕೊಳ್ಳಿ. ಇದಕ್ಕೂ ಮುನ್ನ ಸಿಎಂ ಪತ್ನಿಗೆ ನಿವೇಶನ ಮಂಜೂರಾದ ಸಭೆಯಲ್ಲಿ ಆದ ಮಂಜೂರಾತಿಗಳನ್ನು ರದ್ದು ಮಾಡಿ ಎಂದು ಅವರು ಒತ್ತಾಯಿಸಿದರು.

# ಅರ್ಥಪೂರ್ಣವಾಗಿ ಕನ್ನಡ ರಾಜ್ಯೋತ್ಸವ ಆಚರಣೆಗೆ ಡಿ.ಸಿ ಸೂಚನೆ

**ಮೈಸೂರು, ಅ.18–** ಕಳೆದ ಬಾರಿಯಂತೆ ಈ ಬಾರಿಯೂ ಅರ್ಥಪೂರ್ಣವಾಗಿ ಅದ್ದೂರಿ ಯಾಗಿ ಕನ್ನಡ ರಾಜ್ಯೋತ್ಸವ ಆಚರಣೆ ಮಾಡಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜ್ ಅವರು ತಿಳಿಸಿದರು.

ಕನ್ನಡ ರಾಜ್ಯೋತ್ಸವ ಆಚರಣೆ ಕುರಿತ ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿ, ಕನ್ನಡ ರಾಜ್ಯೋತ್ಸವ ಆಚರಣೆಯನ್ನು ಓವೆಲ್ ಮೈದಾನದಲ್ಲಿ ಆಚರಣೆ ಮಾಡಲಾಗುವುದು. ಅಂದು ಬೆಳಗ್ಗ 8 ಗಂಟೆಗೆ ಅರಮನೆ ಆವರಣ ದಲ್ಲಿ ಇರುವ ಶ್ರೀ ಭುವನೇಶ್ವರಿ ದೇವಿಗೆ ಜಿಲ್ಲಾ ಉಸ್ತುವಾರಿ ಸಚಿವರು ಪೂಜೆ ಸಲ್ಲಿಸುವರು. ನಂತರ ಓವಲ್ ಮೈದಾನದಲ್ಲಿ ಸಚಿವರು ಬೆಳಗ್ಗೆ 9.00 ಗಂಟೆಗೆ ಧ್ವಜಾರೋಹಣ ನೆರವೇರಿಸುವರು. ಮೆರವಣಿಗೆಯು ಅರಮನೆ ಆವರಣದಿಂದ ಹೊರಟು ಕಾರ್ಯಕ್ರಮ ಸ್ಥಳಕ್ಕೆ ಬರುವುದು. ಮೆರವಣಿಗೆಯಲ್ಲಿ ಕಲಾತಂಡಗಳು ಭಾಗ ವಹಿಸುವುವು. ಅಗತ್ಯ ಕಲಾ ತಂಡಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ನೀಡುವರು. ಮೆರವಣಿಗೆಗೆ 6 ಸ್ಥಬ್ದ ಚಿತ್ರಗಳು ಭಾಗವಹಿಸುವುವು. ಆಹ್ವಾನ ಪತ್ರಿಕೆಯನ್ನು ಶಿಷ್ಟಾಚಾರ ಅನ್ವಯ ಮುದ್ರಿಸಿ ಜನಪ್ರತಿನಿಧಿಗಳು, ಗಣ್ಯರು ಹಾಗೂ ಸಂಘ ಸಂಸ್ಥೆಗಳಿಗೆ ವಿತರಿಸಲಾ ಗುವುದು. ಸಂಜೆ 6 ಗಂಟೆಗೆ ಕಲಾ ಮಂದಿರದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗುವುದು.



ಪ್ರತಿಯೊಬ್ಬ ಸರ್ಕಾರಿ ಅಧಿಕಾರಿ ಹಾಗೂ ಸಿಬ್ಬಂದಿಗಳು ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು. ಕಳೆದ ಶೈಕ್ಷಣಿಕ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಕನ್ನಡ ಭಾಷೆ ಯಲ್ಲಿ ಅತಿ ಅಂಕ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಲಾಗುವುದು. ಜಿಲ್ಲಾ ಮಟ್ಟದಲ್ಲಿ ಸಾಧನೆ ಮಾಡಿದ ಗೌರವಾನ್ವಿತರಿಗೆ ಸನ್ಮಾನ ಮಾಡಲಾಗುವುದು.

ಕನ್ನಡ ಸಂಘಟನೆಗಳ ಮುಖಂಡರು ಮಾತನಾಡಿ ಸಾಧಕರ ಆಯ್ಕೆ ಯಲ್ಲಿ ನಿರ್ದಿಷ್ಟ ಮಾನದಂಡ ಇಟ್ಟುಕೊಳ್ಳಬೇಕು. ಎಲ್ಲಾ ಸಂಘ ಸಂಸ್ಥೆಗಳವರಿಗೆ ಮುಖಂಡರಿಗೆ ಕನ್ನಡದ ಬ್ಯಾಡ್ಜ್ ಹಾಗೂ ಶಾಲು ನೀಡಬೇಕು. ಶೇಕಡಾ 60 ಕನ್ನಡ ಬಳಕೆ ಎಲ್ಲಾ ಕಡೆ ಆಗಬೇಕು. ಎಲ್ಲಾ ಅಂಗಡಿಗಳು ಹಾಗೂ ಮಳಿಗೆಗಳ ಬೋರ್ಡ್‌ಗಳಲ್ಲಿ 60 ರಷ್ಟು ಕನ್ನಡ ಬಳಕೆ ಆಗಬೇಕು. ಮೈಸೂರು ಚಲನಚಿತ್ರ ಮಂದಿರಗಳಲ್ಲಿ ನ.1ರಿಂದ ಒಂದು ವಾರಗಳ ಕಾಲ ಕನ್ನಡ ಚಲನಚಿತ್ರ ಪ್ರದರ್ಶನಗಳು ಆಗಬೇಕು ಎಂದು ಮನವಿ ಮಾಡಿದರು.

# ದೀಪಾವಳಿ ಹಬ್ಬಕ್ಕೆ ಕಲಬುರಗಿ–ಬೆಂಗಳೂರು ನಡುವೆ 2 ವಿಶೇಷ ರೈಲು ಸಂಚಾರ


**ಕಲಬುರಗಿ, ಅ.18–** ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ನಿರ್ವಹಿಸುವುದಕ್ಕಾಗಿ ನೈಋತ್ಯ ರೈಲ್ವೆ ಬೆಂಗಳೂರು ಹಾಗೂ ಕಲಬುರಗಿ ಮಧ್ಯೆ 2 ವಿಶೇಷ ರೈಲುಗಳ ಚಂಚಾರ ಘೋಷಣೆ ಮಾಡಿದೆ. ಇದರಿಂದ ಹಬ್ಬಕ್ಕೆ ತಮ್ಮೂರು ಕಲಬುರಗಿಗೆ ಬರಲು ಮತ್ತು ಬೆಂಗಳೂರಿಗೆ ಹೋಗಲು ಪ್ರಯಾಣಿಕರಿಗೆ ಅನುಕೂಲವಾಗಲಿದೆ.

ಈ ಹಿಂದೆ ಗಣೇಶ ಹಬ್ಬ ಹಾಗೂ ದಸರಾ ಹಬ್ಬಗಳ ಸೀಸನ್‌ನಲ್ಲಿ ಕರ್ನಾಟಕದ ವಿವಿಧ ಪ್ರದೇಶಗಳಿಗೆ ವಿಶೇಷ ರೈಲುಗಳ ವ್ಯವಸ್ಥೆ ಮಾಡಿದ್ದ ನೈಋತ್ಯ ರೈಲ್ವೆ ಇದೀಗ ದೀಪಾವಳಿಗೂ ಪ್ರಯಾಣಿಕರ ನೆರವಿಗೆ ಧಾವಿಸಿದೆ. ದೀಪಾವಳಿ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ಬೇಡಿಕೆಗೆ ಅನುಗುಣವಾಗಿ ಬೆಂಗಳೂರು ಹಾಗೂ ಕಲಬುರಗಿ ಮಧ್ಯೆ 2 ಟ್ರಿಪ್ ವಿಶೇಷ ರೈಲುಗಳನ್ನು ಘೋಷಣೆ ಮಾಡಿದೆ.

**ಪ್ರಯಾಣಿಕರ ಗಮನಕ್ಕೆ:** ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ಸರಿದೂಗಿಸುವ ಸಲುವಾಗಿ ಬೆಂಗಳೂರಿನ ಸರ್ ಎಂ ವಿಶ್ವೇಶ್ವರಯ್ಯ ಟರ್ಮಿನಲ್ ಮತ್ತು ಕಲಬುರಗಿ ನಿಲ್ದಾಣಗಳ ನಡುವೆ ಎರಡು ಟ್ರಿಪ್ ವಿಶೇಷ ರೈಲುಗಳನ್ನು ಓಡಿಸಲು ನೈಋತ್ಯ ರೈಲ್ವೆ ವಲಯವು ನಿರ್ಧರಿಸಿದೆ ಎಂದು ತಿಳಿಸಲಾಗಿದೆ.

**ವಿಶೇಷ ರೈಲು ವೇಳಾಪಟ್ಟಿ :**


ಬೆಂಗಳೂರು–ಕಲಬುರಗಿ ವಿಶೇಷ ಎಕ್ಸ್‌ಪ್ರೆಸ್ ರೈಲು 06533 ಅಕ್ಟೋಬರ್ 30 ಮತ್ತು ನವೆಂಬರ್ 2ರಂದು ಸಂಚರಿಸಲಿದೆ. ಕಲಬುರಗಿ ಎಸ್‌ಎಂವಿಟಿ



ವಿಶೇಷ ಎಕ್ಸ್?ಪ್ರೆಸ್ ರೈಲು 06533 ಅಕ್ಟೋಬರ್ 31 ಮತ್ತು ನವೆಂಬರ್ 3ರಂದು ಸಂಚರಿಸಲಿದೆ ಎಂದು ನೈಋತ್ಯ ರೈಲ್ವೆ ತಿಳಿಸಿದೆ. ಬೆಂಗಳೂರು–ಕಲಬುರಗಿ ವಿಶೇಷ ಎಕ್ಸ್‌ಪ್ರೆಸ್ ರೈಲು ಒಟ್ಟು 12 ನಿಲುಗಡೆಗಳನ್ನು ಹೊಂದಿದೆ. ಎಸ್‌ಎಂವಿಟಿ ಬೆಂಗಳೂರು, ಯಲಹಂಕ, ಧರ್ಮಾವರಂ, ಅನಂತಪುರ, ಗುಂತಕಲ್, ಆದೋನಿ, ಮಂತ್ರಾಲಯಂ ರೋಡ್, ರಾಯಚೂರು, ಯಾದಗಿರಿ, ಶಹಾಬಾದ್, ಕಲಬುರಗಿ ನಿಲ್ದಾಣಗಳಲ್ಲಿ ನಿಲುಗಡೆ ಹೊಂದಿದೆ. ಈ ರೈಲು 12 ಜನರಲ್ ಸೆಕೆಂಡ್ ಕ್ಲಾಸ್, 3 ಸ್ಲೀಪರ್ ಕ್ಲಾಸ್, 2 ಎಸಿ.ಸಿ ತ್ರಿ–ಟೈಯರ್, 1 ಲಗೇಜ್/ಬ್ರೇಕ್ ವ್ಯಾನ್ ಕಮ್ ಜನರೇಟರ್ ಕಾರ್ ಮತ್ತು। ಎಸ್‌ಎಲ್‌ಆರ್‌ಡಿ ಸೇರಿ ಗಿಂತೆ 19 ಬೋಗಿಗಳನ್ನು ಒಳಗೊಂಡಿರಲಿದೆ ಎಂದು ರೈಲ್ವೆ ಇಲಾಖೆ ತಿಳಿಸಿದೆ.

# ನಗರದ ಆರೋಗ್ಯ ಕಾಪಾಡುವ ಪೌರಕಾರ್ಮಿಕರ ಆರೋಗ್ಯವೂ ಮುಖ್ಯ: ಶಾಸಕ ಜಿ.ಟಿ.ದೇವೇಗೌಡ

**ಮೈಸೂರು, ಅ.18–** ನಗರವನ್ನು ಸ್ವಚ್ಛಗೊಳಿಸುವ ಮೂಲಕ ಜನರ ಆರೋಗ್ಯ ಕಾಪಾಡುವ ಪೌರಕಾರ್ಮಿಕರ ಆರೋಗ್ಯವೂ ಮುಖ್ಯ ವಾಗಿದ್ದು, ಅವರು ಈ ವಿಷಯದಲ್ಲಿ ನಿರ್ಲಕ್ಷ್ಯ ತೋರದೇ ಆರೋಗ್ಯ ತಪಾಸಣೆಯನ್ನು ಮಾಡಿಸಿಕೊಳ್ಳಬೇಕು ಶಾಸಕ ಜಿ ಟಿ ದೇವೇಗೌಡ ನಗರದ ಹೂಟಗಳ್ಳಿ ನಗರ ಸಭೆ ಆವರಣದಲ್ಲಿ ಸಮೃದ್ಧಿ ಟ್ರಸ್ಟ್ , ಅನ್ನಪೂರ್ಣ ಕಣ್ಣಿನ ಆಸ್ಪತ್ರೆ, ಎನ್ ಪಿ ಆಸ್ಪತ್ರೆ ಹಾಗೂ ಬಯೋ ಸ್ನೇಹಿ ರವರ ಸಹಯೋಗದೊಂದಿಗೆ ಪೌರ ಕಾರ್ಮಿಕರಿಗೆ ಉಚಿತ ಕಣ್ಣಿತ ತಪಾಸಣಾ ಶಿಬಿರ ಹಾಗೂ ಆರೋಗ್ಯ ತಪಾಸಣಾ ಶಿಬಿರವು ಆಯೋಜಿಸಿದ್ದು



ಅದನ್ನು ಉದ್ಘಾಟಿಸಿ ಮಾತನಾಡಿದ ಅವರು, ಪೌರಕಾರ್ಮಿಕರು ನಗರವನ್ನು ಸ್ವಚ್ಛವಾಗಿಡುತ್ತಿರುವ ಕಾರಣದಿಂದ ಇಂದು ನಮ್ಮೆಲ್ಲರ ಆರೋಗ್ಯ ಉತ್ತಮವಾಗಿದೆ. ಪೌರ ಕಾರ್ಮಿಕರ ಆರೋಗ್ಯವನ್ನು ಕಾಪಾಡುವ ಸಲುವಾಗಿ ಆರೋಗ್ಯ ತಪಾಸಣೆಯನ್ನು ಮಾಡಿಸಲಾಗುತ್ತಿದೆ. ಕೆಲಸದ ಒತ್ತಡ ದಲ್ಲಿ ಮಾಡುವ ಕೆಲವೊಂದು ನಿರ್ಲಕ್ಷ್ಯತನದಿಂದ ನಮ್ಮ ಆರೋಗ್ಯ ಹಾಳಾಗುತ್ತಿದೆ. ಪೌರಕಾರ್ಮಿಕರು ಆರೋಗ್ಯ ತಪಾ ಸಣೆ ಶಿಬಿರ ಗಳಿಗೆ ಸೀಮಿತವಾಗದೇ ನಿತ್ಯ ಆರೋಗ್ಯದ ಕಡೆಗೆ ಗಮನ ಹರಿಸಬೇಕು ಹೇಳಿದರು. ಪೌರಕಾರ್ಮಿಕರು ಆರೋಗ್ಯವಾಗಿದ್ದರೆ ಇಡೀ ನಗರ ಆರೋಗ್ಯ ವಾಗಿರುತ್ತದೆ. ಪೌರಕಾರ್ಮಿಕರು ಆರೋಗ್ಯವಂತ ರಾಗಿದ್ದರೆ ನಗರದ ಸ್ವಚ್ಛತೆಯನ್ನು ಕಾಪಾಡಿ ಎಲ್ಲರ ಆರೋಗ್ಯ ಕಾಪಾಡಲು ಸಾಧ್ಯವಾಗುತ್ತದೆ. ಆದುದರಿಂದ ಅವರು ಇಂತಹ ಆರೋಗ್ಯ ಶಿಬಿರಗಳನ್ನು ಸದುಪಯೋಗ ಪಡೆದು ಕೊಳ್ಳಬೇಕು ಎಂದರು.

# ಕೆಜಿಎಫ್‌ನಲ್ಲಿ ಟೌನ್‌ಶಿಪ್ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ

**ಕೋಲಾರ, ಅ.18–** ಕೆಜಿಎಫ್‌ನಲ್ಲಿ ಬೆಮೆಲ್‌ನಿಂದ ವಶ ಪಡಿಸಿಕೊಂಡಿರುವ 294 ಎಕರೆ ಜಾಗದಲ್ಲಿ ಇಂಟಿಗ್ರೇಟೆಡ್ ಟೌನ್ಶಿಪ್ ನಿರ್ಮಾಣ ಮಾಡುವ ಕುರಿತು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಸ್ಥಳ ಪರಿಶೀಲಿಸಿದರು.

ಚೆನ್ನೈ ಎಕ್ಸ್‌ಪ್ರೆಸ್ ಹೈವೇ ಪಕ್ಕದ 294 ಎಕರೆ ಪ್ರದೇಶಕ್ಕೆ ಸಂಪರ್ಕ ಕಲಿಸಲು 30 ಅಡಿ ಅಗಲದ ರಸ್ತೆ ನಿರ್ಮಿಸಲು 11 ಎಕರೆ ಸರಕಾರಿ ಗೋಮಾಳವನ್ನು ಹಸ್ತಾಂತರಿಸಲು ತಹಸೀಲ್ದಾರ್ ನಾಗವೇಣಿ ಅವರಿಗೆ ಸಚಿವರು ಸೂಚಿಸಿದರು.



ನಗರಾಭಿವೃದ್ಧಿ ಇಲಾಖೆಯಿಂದ ಇಂಟಿಗ್ರೇಟೆಡ್ ಟೌನ್ಶಿಪ್ ನಿರ್ಮಾಣ ಮಾಡಲಾಗುವುದು. ಅತ್ಯಾಧುನಿಕ ಸೌಲಭ್ಯಗಳೊಂದಿಗೆ ವಾಣಿಜ್ಯ ಕೇಂದ್ರ, ಶಿಕ್ಷಣ ಮತ್ತು ಆರೋಗ್ಯ ಕೇಂದ್ರ, ಉದ್ಯಾನಗಳು ಮತ್ತು ವಸತಿ ಸಮುಚ್ಚಯ ನಿರ್ಮಿಸುವುದಾಗಿ ಅವರು ತಿಳಿಸಿದರು.

# ವೇತನ ಬಿಡುಗಡೆಗೆ ಆಗ್ರಹಿಸಿ ಹಾಸ್ಟೆಲ್ ಹೊರಗುತ್ತಿಗೆ ನೌಕರರಿಂದ ಪ್ರತಿಭಟನೆ


ಕಲಬುರಗಿ ಜಿಲ್ಲೆಯ ಸರ್ಕಾರಿ ಹಾಸ್ಟೆಲ್ ಹೊರಗುತ್ತಿಗೆ ನೌಕರ ಸಂಘದ ನೇತೃತ್ವದಲ್ಲಿ ವೇತನ ಬಿಡುಗಡೆ ಮಾಡುವಂತೆ ನಗರದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

**ಕಲಬುರಗಿ, ಅ.18–** ಹಾಸ್ಟೆಲ್‌ಗಳಲ್ಲಿ ಕೆಲಸ ಮಾಡುತ್ತಿರುವ ಹೊರಗುತ್ತಿಗೆ ನೌಕರರ ಬಾಕಿ ವೇತನ ಬಿಡುಗಡೆಗೆ ಆಗ್ರಹಿಸಿ ನಗರದಲ್ಲಿ ಸರ್ಕಾರಿ ಹಾಸ್ಟೆಲ್ ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘದಿಂದ ಪ್ರತಿಭಟನೆ ನಡೆಸಲಾಯಿತು.

ಕರ್ನಾಟಕ ರಾಜ್ಯ ಹೊರಗುತ್ತಿಗೆ ನೌಕರರ ಸಂಘದ ನೇತೃತ್ವದಲ್ಲಿ ನಗರದ ಜಗತ್ ವೃತ್ತದಿಂದ ನೂರಾರು ಜನ ಹೊರ ಗುತ್ತಿಗೆ ಕಾರ್ಮಿಕರು ಪ್ರಾದೇಶಿಕ ಆಯುಕ್ತರ ಕಚೇರಿವರೆಗೆ ತೆರಳಿ ಪ್ರಾದೇಶಿಕ ಆಯುಕ್ತರ ಕಚೇರಿ ಮುಂದೆ ಪ್ರತಿಭಟನೆ ನಡೆಸಿ, ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು.

ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ನಲ್ಲಿ ಕೆಲಸ ಮಾಡುತ್ತಿರುವ ಹೊರಗುತ್ತಿಗೆ ನೌಕರರಿಗೆ ಎರಡ್ಮೂರು ತಿಂಗಳಿಂದ ಸಂಬಳ ನೀಡಿಲ್ಲ. ಇನ್ನೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್ ನಲ್ಲಿ ಕೆಲಸ ಮಾಡುವ ಹೊರಗುತ್ತಿಗೆ ನೌಕರರಿಗೆ ಏಳೆಂಟು ತಿಂಗಳಿಂದ ಸಂಬಳ ನೀಡಿಲ್ಲ. ಸಂಬಳ ಇಲ್ಲದೆ ದಸರ ಹಬ್ಬ ಆಚರಣೆ ಮಾಡಲಾಗಿದೆ. ಇವಾಗ ದೀಪಾವಳಿ ಹಬ್ಬ ಬರುತ್ತಿದ್ದು, ಕೈಯಲ್ಲಿ ದುಡ್ಡು ಇಲ್ಲದೆ ಜೀವನ ನಡೆಸುವುದು ಕಷ್ಟವಾಗುತ್ತಿದೆ ಎಂದು ಅಳಲು ತೋಡಿಕೊಂಡಿದ್ದಾರೆ.

ಹಾಸ್ಟೆಲ್ ಗಳಲ್ಲಿ ದುಡಿಯುತ್ತಿರುವ ಹೊರಗುತ್ತಿಗೆ ನೌಕರರಿಗೆ ಸೇವಾ ಭದ್ರತೆ ನೀಡಬೇಕು. ಬಾಕಿ ವೇತನ ಕೂಡಲೇ ಪಾವತಿಸಬೇಕು, ಅವರಿಗೆ ಕನಿಷ್ಠ 31ಸಾವಿರ ವೇತನ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸಬೇಕೆಂದು ಪ್ರತಿಭಟನಾ ನಿರತರು ಒತ್ತಾಯಿಸಿದ್ದಾರೆ.

# ಪುಷ್ಪಾವತಿ ನಾಗರಾಜ್ ಭೇಟಿ ಮಾಡಿದ ಜನಾರ್ದನರೆಡ್ಡಿ–ಸಂತೋಷ್‌ಲಾಡ್ ಬೆಂಬಲಿಗರಲಿ ಮೂಡಿದ ಆತಂಕ



ಸಂಡೂರು, ಅ.18–ಬಳ್ಳಾರಿ ಜಿಲ್ಲೆಯ ಸಂಡುರು ವಿಧಾನ ಸಭಾ ಕ್ಷೇತ್ರದ ಉಪ ಚುನಾವಣೆ ಘೋಷಣೆಯಾಗಿದ್ದು ಗಂಗಾವತಿ ಶಾಸಕರಾದ ಗಾಲಿ ಜನಾರ್ದನ ರೆಡ್ಡಿ ಅವರು ಸಂಡೂರು ಪಟ್ಟಣದಲ್ಲಿ ನೂತನ ಗೃಹ ಪ್ರವೇಶ ಮಾಡಿದ ನಂತರ ಸಂಡೂರಿನ ಮಾಜಿ ಶಾಸಕರೂ ಹಾಲಿ ಬಳ್ಳಾರಿ ಸಂಸದರಾದ ಇ. ತುಕಾರಾಂ ಅವರ ಸಹೋದರಿ ಯಾದ ಪುಷ್ಪಾವತಿ ನಾಗರಾಜ್ ಅವರ ಮನೆಗೆ ಭೇಟಿ ನೀಡಿ ಅವರ ಕುಶಲೋಪರಿ ವಿಚಾರಿಸಿ ನಂತರ ರಾಜಕೀಯ ಬಗ್ಗೆ ಚರ್ಚಿಸಿದರು. ಇದು ತುಕರಾಂ ಮತ್ತು ಸಂತೋಷ್ ಲಾಡ್‌ರವರ ಬೆಂಬಲಿಗರಲ್ಲಿ ತೀವ್ರ ಸಂಚಲನ ಮೂಡಿಸಲು ಕಾರಣವಾಗಿದೆ ಎಂದು ತಿಳಿದುಬಂದಿದೆ.

# ಮಾಜಿ ಶಾಸಕ ಸೋಮಲಿಂಗಪ್ಪ ನೇತೃತ್ವದಲ್ಲಿ ವಾಲ್ಮೀಕಿ ಜಯಂತಿ ಆಚರಣೆ

**ಸಿರುಗುಪ್ಪ ಅ 18–** ಭಾರತೀಯ ಜನತಾ ಪಾರ್ಟಿಯ ಕಚೇರಿಯಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಮಾಜಿ ಶಾಸಕರಾದ ಎಂಎಸ್ ಸೋಮಲಿಂಗಪ್ಪ ಅವರ ನೇತೃತ್ವದಲ್ಲಿ ಆಚರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ತಾಲೂಕು ಭಾರತೀಯ ಜನತಾ ಪಾರ್ಟಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಸ್ವಾಮಿ, ದರಪ್ಪ ನಾಯಕ, ಎಸ್ಟಿ ಮೋರ್ಚಾ ಅಧ್ಯಕ್ಷ ಶಿವಪ್ಪ, ಮೆಕಾಲ್ ವೀರೇಶ, ಮೋಹನ್ ರೆಡ್ಡಿ, ನಟರಾಜ್, ಬಸವರಾಜ್, ನಾಗರಾಜ, ಬೆಳಗಲ್ ಬಸವರಾಜ, ಆಶೋಕ ಮತ್ತು ಸಮಾಜದ ಹಿರಿಯರ ಮುಖಂಡರು, ಕಾರ್ಯಕರ್ತರು ಭಾಗವಹಿಸಿದ್ದರು.

## ಗರಿಗೆದರಿದ ಸಂಡೂರು ವಿಧಾನಸಭಾ ಉಪಚುನಾವಣಾ ಕಣ

# ಕಾಂಗ್ರೆಸ್ ಟಿಕೆಟ್ ಕುರಿತು ಚರ್ಚಿಸಲು ಸಂತೋಷ್ ಲಾಡ್ ಭೇಟಿಯಾದ ಕಾಂಗ್ರೆಸ್ ಮುಖಂಡರು

**ಬೆಂಗಳೂರು, ಅ.18–** ವಿಧಾನ ಸಭಾ ಉಪ ಚುನಾವಣೆಯ ದಿನಾಂಕ ಘೋಷಣೆಯಾಗುತ್ತಿದ್ದಂತೆ ಎಲ್ಲ ಪಕ್ಷಗಳಲ್ಲೂ ಚಟುವಟಿಕೆಗಳು ಗರಿಗೆದರಿವೆ. ಅದರಂತೆ ಸಂಡೂರು ಕ್ಷೇತ್ರದಲ್ಲೂ ಸಾಕಷ್ಟು ರಾಜಕೀಯ ಬೆಳವಣಿಗೆಗಳು ನಡೆಯುತ್ತಿವೆ. ಸಂಡೂರು ಕ್ಷೇತ್ರದ ಶಾಸಕರಾಗಿದ್ದ ಇ ತುಕಾರಾಂ ಅವರು ಬಳ್ಳಾರಿ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಿ ಗೆಲುವು ಸಾಧಿಸಿದ್ದರಿಂದ ಈಗ ಉಪ ಚುನಾವಣೆ ನಡೆಯುತ್ತಿದೆ.

ಕಾರ್ಮಿಕ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ್‌ಲಾಡ್ ಅವರ ಬೆಂಗಳೂರಿನ ಅಧಿಕೃತ ನಿವಾಸಕ್ಕೆ ಇಂದು ಸಂಡೂರಿನ ಕಾಂಗ್ರೆಸ್ ಕಾರ್ಯಕರ್ತರು ಭೇಟಿ ನೀಡಿದ್ದರು. ನೂರಾರು ಕಾರ್ಯಕರ್ತರು ಸಂತೋಷ್ ಲಾಡ್ ಅವರನ್ನು ಭೇಟಿ ಮಾಡಿ ಮುಂಬರುವ ಸಂಡೂರಿನ ವಿಧಾನಸಭಾ ಉಪ ಚುನಾವಣೆಯ ಕುರಿತು ಚರ್ಚಿಸಿದರು. ಸಂಡೂರಿನ ಚುನಾವಣೆಯ ಕಣದಲ್ಲಿ ಸಚಿವ ಸಂತೋಷ್ ಲಾಡ್ ಅವರ ಪಾತ್ರ ನಿರ್ಣಾಯಕವಾಗಿದ್ದು, ಅವರು ಸೂಚಿಸಿದ ಅಭ್ಯರ್ಥಿಗೆ ನಮ್ಮ ಬೆಂಬಲ ಸದಾ ಇರಲಿದೆ ಎಂದು ಕಾರ್ಯಕರ್ತರು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಸಂಡೂರು



ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವಿನ ಸಾಧ್ಯತೆ ಹೆಚ್ಚಿರುವುದರಿಂದ ಪಕ್ಷದಿಂದ ಸೂಕ್ತ ವ್ಯಕ್ತಿಗೆ ಅವಕಾಶ ನೀಡಿ ಎಂದು ಕಾರ್ಯಕರ್ತರು ಮನವಿ ಮಾಡಿದರು.

ಸಂತೋಷ್ ಲಾಡ್ ಅವರು, "ಎಲ್ಲರೂ ಒಗ್ಗಟ್ಟಾಗಿ ಕಾಂಗ್ರೆಸ್ ಅಭ್ಯರ್ಥಿಯ ಗೆಲುವಿಗಾಗಿ ಕೆಲಸ ಮಾಡೋಣ. ಅಭ್ಯರ್ಥಿ ಆಯ್ಕೆ ಸಂಬಂಧ ಉತ್ತಮ ನಿರ್ಧಾರ ಕೈಗೊಳ್ಳಲಾಗುವುದು" ಎಂದು ಹೇಳಿದರು.

# ಇಂದು ಗ್ರಾಹಕರ ಸಂವಾದ ಸಭೆ– ಕೆ.ಎ.ಉಮೇಶ್ ಕುಮಾರ್

ಸಂಡೂರು, ಅ.18– ಜೆಸ್ಕಾಂ ಸಂಡೂರು ಉಪ–ವಿಭಾಗ ಕಚೇರಿ ಯಲ್ಲಿ ಅ. 19 (ಶನಿವಾರ) ರಂದು ಮಧ್ಯಾಹ್ನ 3 ಗಂಟೆಯಿಂದ ಸಂಜೆ 5.30 ರವರೆಗೆ ಗ್ರಾಹಕರ ಸಂವಾದ ಸಭೆ ನಡೆಯಲಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಜೆಸ್ಕಾಂ ಸಂಡೂರು ಉಪ–ವಿಭಾಗದ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರ ಕೆ.ಎ.ಉಮೇಶ್ ಕುಮಾರ್, ಸಂಡೂರು ತಾಲೂಕಿನ ಎಲ್ಲಾ ಗ್ರಾಹಕರು ಈ ಸಭೆಯಲ್ಲಿ ಭಾಗವಹಿಸಿ ವಿದ್ಯುತ್ ಸಂಬಂಧಿತ ಸಮಸ್ಯೆಗಳು ಹಾಗೂ ಇನ್ನಿತರ ಕೊರತೆ ಗಳಿಗೆ ಪರಿಹಾರ ಕಂಡುಕೊಳ್ಳುವಂತೆ ಕೊರಿದ್ದಾರೆ.

# ಟ್ರಾಮಾ ಕೇರ್ ದಿನಾಚರಣೆ: ದೇಶದಲ್ಲಿ ವಾರ್ಷಿಕ 1.6 ಲಕ್ಷ ಜನ ಅಪಘಾತದಿಂದ ಸಾವು: ಡಾ.ಶರಣಪ್ಪ

## ಗೋಲ್ಡನ್ ಅವರ್ ಚಿಕಿತ್ಸೆಗೆ ಆದ್ಯತೆ

**ಅಪಘಾತವಾದ ಮರುಕ್ಷಣದ ಸುವರ್ಣ ಗಳಿಗೆ (ಗೋಲ್ಡನ್ ಅವರ್)ಯಲ್ಲಿ ತಕ್ಷಣ ಸ್ಪಂದಿಸಿ, ಉತ್ತಮ ಚಿಕಿತ್ಸೆ ನೀಡುವಲ್ಲಿ ನಗರದ ಯುನೈಟೆಡ್ ಆಸ್ಪತ್ರೆಯ ವೈದ್ಯರು ಮತ್ತು ಎಲ್ಲ ಸಿಬ್ಬಂದಿ ವರ್ಗ ಉತ್ತಮ ಸೇವೆ ಸಲ್ಲಿಸುತ್ತಿದೆ. ಜೇವರ್ಗಿ ರಸ್ತೆಯ ಹಸ್ತಿನಾಪುರದ ಬಳಿ ಅ. 16ರಂದು ರಾತ್ರಿ ಸಂಭವಿಸಿದ ಅಪಘಾತದಲ್ಲಿ ಗಾಯಗೊಂಡವರನ್ನು ತಂದಾಗ ಯುನೈಟೆಡ್ ಆಸ್ಪತ್ರೆ ವೈದ್ಯರ ತಂಡ ಉತ್ತಮ ಸ್ಪಂದನೆ ನೀಡಿದೆ ಎಂದು ಡಾ. ಶರಣಪ್ಪ ಎಸ್.ಡಿ. ಶ್ಲಾಘಿಸಿದರು. ಅಪಘಾತದ ಸ್ಥಳದಲ್ಲಿದ್ದ ಸಾರ್ವಜನಿಕರು ತಕ್ಷಣ ಆಸ್ಪತ್ರೆಗೆ ದಾಖಲಿಸಬೇಕು. ಆಸ್ಪತ್ರೆಗೆ ದಾಖಲಿಸಿದವರನ್ನು ಸಾಕ್ಷಿಯನ್ನಾಗಿ ಮಾಡುವುದಿಲ್ಲ. ಪೊಲೀಸರಿಂದ ತೊಂದರೆ ಆಗಲ್ಲ. ಜೀವ ಉಳಿಸುವುದಕ್ಕೆ ಸಾಥ್ ನೀಡಬೇಕು ಎಂದು ಸಲಹೆ ನೀಡಿದರು.**


ಕಲಬುರಗಿಯ ಯುನೈಟೆಡ್ ಆಸ್ಪತ್ರೆಯಲ್ಲಿ ಟ್ರಾಮಾ ದಿನಾಚರಣೆಯನ್ನು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಉದ್ಘಾಟಿಸಿದರು. ಎಸ್ಪಿ ಎ. ಶ್ರೀನಿವಾಸಲು, ಆಸ್ಪತ್ರೆಯ ಮುಖ್ಯಸ್ಥ ಡಾ. ವಿಕ್ರಂ ಸಿದ್ದಾರಡ್ಡಿ ಮತ್ತಿತರರಿದ್ದರು.

## ಪ್ರಥಮ ಚಿಕಿತ್ಸಾ ಕಿಟ್ ವಿತರಣೆ

**ಯುನೈಟೆಡ್ ಆಸ್ಪತ್ರೆ ಮುಖ್ಯಸ್ಥ ಡಾ. ವಿಕ್ರಂ ಸಿದ್ದಾರೆಡ್ಡಿ ಅಕರ್ತ ಸಿದ್ದಾರೆಡ್ಡಿ ಅವರು, ವಿಶ್ವ ಟ್ರಾಮಾ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದ ನಾಗನಹಳ್ಳಿ ಪೊಲೀಸ್ ತರಬೇತಿ ಮಹಾ ವಿದ್ಯಾಲಯದ ಪೊಲೀಸರು, ನಗರ ಪೊಲೀಸ್ ಸಂಚಾರಿ ಪೊಲೀಸರು, ಸಾರ್ವಜನಿಕರು, ಮಾಧ್ಯಮದವರು ಸೇರಿ ಆಸ್ಪತ್ರೆಗೆ ಆಗಮಿಸಿದ ಎಲ್ಲರಿಗೂ ಪ್ರಥಮ ಚಿಕಿತ್ಸೆಯ ಕಿಟ್‌ಗಳನ್ನು ಯುನೈಟೆಡ್ ಆಸ್ಪತ್ರೆಯಿಂದ ವಿತರಿಸಿದರು.**

**ಕಲಬುರಗಿ, ಅ.18–** 'ಭಾರತದಲ್ಲಿ ವಾರ್ಷಿಕ 1.6 ಲಕ್ಷ ಜನರು, ನಿತ್ಯ 400 ಜನ, ನಿಮಿಷಕ್ಕೆ ಮೂರು ಜನ ವಾಹನ ಅಪಘಾತದಿಂದ ಮೃತಪಡುತ್ತಿದ್ದಾರೆ. ಅಪಘತ ಸಾವುಗಳ ತಡೆಗೆ ಚಾಲಕರಿಂದ ನಿಯಮ ಪಾಲನೆ ಮತ್ತು ಗುಣಮಟ್ಟದ ತುರ್ತು ವೈದ್ಯಕೀಯ ಸೇವೆ ಅಗತ್ಯ. ತುರ್ತು ವೈದ್ಯಕೀಯ ಸೇವೆ ಅಂದರೆ ಗೋಲ್ಡನ್ ಅವರ ಚಿಕಿತ್ಸೆಯಿಂದ ಅನೇಕರ ಪ್ರಾಣ ಉಳಿಸಬಹುದು ಎಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಹೇಳಿದರು.

ನಗರದ ಯುನೈಟೆಡ್ ಆಸ್ಪತ್ರೆಯಲ್ಲಿ ಏರ್ಪಡಿಸಿದ್ದ ವಿಶ್ವ ಟ್ರಾಮಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ನಗರದಲ್ಲಿ ಸಂಚಾರ ನಿಯಮ ಪಾಲನೆಗೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಮೊದಲ ಹಂತದಲ್ಲಿ ಜಾಗೃತಿ ಮೂಡಿಸಲಾಗುವುದು. ಇಲ್ಲದಿದ್ದರೆ ಕ್ರಮ ತೆಗೆದುಕೊಳ್ಳಲಾಗುವುದು. ನಿಯಮಗಳು ಇರುವುದು ಪಾಲಿಸಲು ಹೊರತು, ದಂಡ ವಿಧಿಸಲು ಅಲ್ಲ. ಅಪಘಾತವಾದಾಗ ಜನರು ಗಾಯಾಳುಗಳನ್ನು ತಕ್ಷಣ ಆಸ್ಪತ್ರೆಗೆ ಕರೆತರಬೇಕು. ನೆರವಿಗೆ ಬಂದವರನ್ನು ಸಾಕ್ಷಿ ಮಾಡದಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಯುನೈಟೆಡ್ ಆಸ್ಪತ್ರೆಯ ಮುಖ್ಯಸ್ಥ ಡಾ. ವಿಕ್ರಂ ಸಿದ್ದಾರಡ್ಡಿ ಮಾತನಾಡಿ, ದೇಶದಲ್ಲಿ 4.5 ಲಕ್ಷ ರಸ್ತೆ ಅಪಘಾತ ಗಳಾಗುತ್ತಿದ್ದು, ಅತಿ ವೇಗ, ಸಂಚಾರ ನಿಯಮ ಉಲ್ಲಂಘನೆ ಇದಕ್ಕೆ ಕಾರಣ. ಅತಿ ದೊಡ್ಡ ಆರೋಗ್ಯ ಗಂಡಾಂತರವಾಗಿ ಅಪಘಾತ ಮಾರ್ಪಟ್ಟಿದೆ. ಅಪಘಾತಗಳಿಂದ ದೇಹಕ್ಕೆ ಹಲವು ಗಾಯ, ಗಂಭೀರ ಸಮಸ್ಯೆ ಸೃಷ್ಟಿಯಾಗುತ್ತವೆ. ಅದನ್ನು ನಿಯಂತ್ರಿಸಲು ಉತ್ಕೃಷ್ಟ ದರ್ಜೆಯ ಚಿಕಿತ್ಸೆ ಅವಶ್ಯ. ಅದನ್ನು ನೀಡಲು ಇಡೀ ವೈದ್ಯಕೀಯ ವರ್ಗ ಶ್ರಮಿಸುತ್ತಿದೆ ಎಂದು ಹೇಳಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಮಾತನಾಡಿದರು.

ಡಾ. ವೀಣಾ ವಿಕ್ರಂ ಸಿದ್ದಾರಡ್ಡಿ, ಡಾ. ರಾಜು ಕುಲಕರ್ಣಿ, ಡಾ. ವಿನಯ ಸಾಗರ, ಡಾ.ಸುದರ್ಶನ ಲಾಖೆ, ಮೇಜರ್ ಡಾ.ಮುಜಾಫರ್, ಡಾ. ಮಂಜುನಾಥ ರೆಡ್ಡಿ, ಡಾ.ರಾಕೇಶ ಬೇಂದ್ರೆ, ಡಾ. ಪವನ ಪಾಟೀಲ್, ಕೈಲಾಶ ಬನಾಳೆ, ಡಾ. ನಿಶಾಂತ ಜಾಜಿ, ಡಾ.ರಾಮಾಚಾರಿ, ಡಾ. ಶ್ರೀಕಾಂತ ರಾಠೋಡ, ಡಾ. ಮುಜಾಹಿದ್, ಎಸಿಪಿ ಭೂತೇಗೌಡ, ಎಸಿಪಿ ಮಹ್ಮದ್ ಇಸ್ಮಾಯಿಲ್, ದಾವೂದ್ ಅಲಿ, ಶರಣು ಪಾಟೀಲ್, ಗೀತಾ ಚಿನಕೋಡ, ರವಿ, ಚಿದಾನಂದ್ ಇದ್ದರು.

# ಸಂಡೂರು ಉಪಚುನಾವಣೆ–ನೂತನ ಮನೆಯ ಗೃಹಪ್ರವೇಶ ಮಾಡಿದ ಗಾಲಿ ಜನಾರ್ದನರೆಡ್ಡಿ ದಂಪತಿ



**ಬಳ್ಳಾರಿ, ಅ.18–** ಬಳ್ಳಾರಿ ಜಿಲ್ಲೆಯ ಸಂಡೂರು ಉಪಚುನಾವಣೆಯ ನಿಮಿತ್ತ ಸಂಡೂರು ನಗರದಲ್ಲಿ ಗಾಲಿ ಜನಾರ್ದನ್ ರೆಡ್ಡಿ ಅವರು ಪತ್ನಿ ಲಕ್ಷ್ಮಿ ಅರುಣ ಸಮೇತ ಪೂಜಾ ವಿಧಿ ವಿಧಾನಗಳೊಂದಿಗೆ ನೂತನ ಮನೆಯ ಗೃಹಪ್ರವೇಶ ಮಾಡಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಅನಿಲ್ ನಾಯ್ಡು, ಮಾಜಿ ಶಾಸಕರಾದ ಸೋಮಶೇಖರ ರೆಡ್ಡಿ, ಎಸ್ ಟಿ ಮೋರ್ಚಾ ರಾಜ್ಯಾಧ್ಯಕ್ಷರಾದ ಬಂಗಾರ ಹನುಮಂತು, ಮಾಜಿ ಬುಡಾ ಅಧ್ಯಕ್ಷರಾದ ದಮ್ಮೂರು ಶೇಖರ್, ಮುಖಂಡರಾದ ಗೋನಾಳ ರಾಜಶೇಖರ ಗೌಡ,ಕೆ ಎಸ್ ದಿವಾಕರ್, ಸಂಡೂರು ಮಂಡಲ ಅಧ್ಯಕ್ಷರಾದ ನಾನ ಸಾಹೇಬ್ ನಿಕ್ಕಂ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಉಡೇದ ಸುರೇಶ್, ತಿರುಮಲ ಹಾಗೂ ಜಿಲ್ಲಾ ಮತ್ತು ಮಂಡಲದ ವಿವಿಧ ಪದಾಧಿಕಾರಿಗಳು ಮತ್ತು ನೂರಾರು ಕಾರ್ಯಕರ್ತರು ಭಾಗವಹಿಸಿದರು.

# ವಾಲ್ಮೀಕಿ ಪುತ್ತಳಿಗೆ ಮಾಲಾರ್ಪಣೆ ಮಾಡಿ ಕೊಂಡಾಡಿದ


## ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ



**ಬಳ್ಳಾರಿ, ಅ.18–** ಮಹರ್ಷಿ ವಾಲ್ಮೀಕಿ ಜಯಂತಿ ಅಂಗವಾಗಿ ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ, ನಗರದ ಬಿಜೆಪಿ ಮುಖಂಡರು ಎಸ್ಪಿ ಸರ್ಕಲ್ ನಲ್ಲಿರುವ ವಾಲ್ಮೀಕಿಯವರ ಪುತ್ತಳಿಗೆ ಪುಷ್ಪಮಾಲೆ ಹಾಕಿ ನಮನ ಸಲ್ಲಿಸಿದರು. ಪಾಲಿಕೆ ಸದಸ್ಯ ಕೆ.ಹನುಮಂತಪ್ಪ ಮೊದಲಾದವರು ಪುಷ್ಪ ಮಾಲೆ ಅರ್ಪಿಸಿ ವಾಲ್ಮೀಕಿ ಅವರ ಬದುಕಿನ ಗುಣಗಾನ ಮಾಡಿದರು.


ನಿವೇಶನ ಹಂಚಿಕೆಯಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪದ ಮೇಲೆ ಜಾರಿ ನಿರ್ದೇಶನಾಲಯ ಶುಕ್ರವಾರ (ಅಕ್ಟೋಬರ್ 18, 2024) ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ (ಮುಡಾ) ಕಚೇರಿ ಮೇಲೆ ದಾಳಿ ನಡೆಸಿದೆ.

# ವಿದ್ಯುತ್ ಉಪಕೇಂದ್ರ ಕಾಮಗಾರಿ ಕಳಪೆ: ಶಾಸಕ ಚವ್ಹಾಣ ಆಕ್ರೋಶ


ಬೀದರ್ ಜಿಲ್ಲೆಯ ನಾಗೂರ–ಬಿ ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ 220 ವಿದ್ಯುತ್ ಉಪಕೇಂದ್ರ ಕಾಮಗಾರಿ ಸ್ಥಳಕ್ಕೆ ಶಾಸಕ ಪ್ರಭು ಚವ್ಹಾಣ ಭೇಟಿ ನೀಡಿ ಪರಿಶೀಲಿಸಿದರು.

**ಬೀದರ್, ಅ.18–** ಸಾರ್ವಜನಿಕ 'ರಿಂದ ನಿರಂತರ ದೂರುಗಳು ಬರುತ್ತಿರುವ ಹಿನ್ನೆಲೆಯಲ್ಲಿ ಶಾಸಕ ಪ್ರಭು ಚವ್ಹಾಣ್ ನಾಗೂರ(ಬಿ) ಗ್ರಾಮದಲ್ಲಿ ನಿರ್ಮಿಸಲಾಗುತ್ತಿರುವ 220 ಕೆ.ವಿ ವಿದ್ಯುತ್ ಉಪ ಕೇಂದ್ರಕ್ಕೆ ದಿಢೀರ್ ಭೇಟಿ ನೀಡಿ, ಈ ವೇಳೆ ಕಾಮಗಾರಿ ಕಳಯಾಗುತ್ತಿರುವುದನ್ನು ಕಂಡು ಗುತ್ತಿಗೆದಾರರು ಮತ್ತು ಅಧಿಕಾರಿಗಳ ವಿರುದ್ಧ ತೀವ್ರ ಆಕ್ರೋಶ ಹೊರಹಾಕಿದರು.

ನಿರ್ಮಾಣ ಹಂತದಲ್ಲಿರುವ ಕಂಪೌಂಡ್ ಗೋಡೆಯಲ್ಲಿ ಸಿಮೆಂಟ್ ಎದ್ದು ಕಾಣುತ್ತಿರುವುದನ್ನು ಕಂಡು ಆಕ್ರೋಶಗೊಂಡರು. ಈ ಹಿಂದೆಯೂ ಕಳಪೆಯಾಗಿ ನಿರ್ಮಿಸಿದ್ದ ಒಂದು ಕಂಪೌಂಡ್ ಗೋಡೆಯನ್ನು ಕೆಡವಿ ಪುನಃ ನಿರ್ಮಿಸಲಾಗುತ್ತಿದೆ. ಇದು ಕೂಡ ಕ್ಯೂರಿಂಗ್ ಆಗಿಲ್ಲ. ಆರಂಭದಲ್ಲಿಯೇ ಹೀಗಾದರೆ ಮುಂದಿನ ಗತಿಯೇನು ಎಂದು ಬೇಸರ ಹೊರಹಾಕಿದರು. ವಿದ್ಯುತ್ ಉಪ ಕೇಂದ್ರದ ಆವರಣದಲ್ಲಿ ನಿರ್ಮಿಸಲಾಗಿರುವ ಕಟ್ಟಡ ಕಾಮಗಾರಿ ವೀಕ್ಷಣೆ ವೇಳೆ ಗೋಡೆಯ ಬುನಾದಿಯಲ್ಲಿ ಕಲ್ಲು–ಮಣ್ಣು ಎದ್ದು ಕಾಣಿಸುತ್ತಿತ್ತು. ಗೋಡೆಗೆ ಕೈ ತಾಕಿದ ಕೂಡಲೇ ಮಣ್ಣು ಉದುರಲು ಆರಂಭಿಸಿತ್ತು. ಕಟ್ಟಡದ ಸುತ್ತಲೂ ಇದೇ ಪರಿಸ್ಥಿತಿ ಇರುವುದು ಕಂಡು ಶಾಸಕರು ಗುತ್ತಿಗೆದಾರರ ವಿರುದ್ಧ ಕೋಪಗೊಂಡರು. ಉಪಕೇಂದ್ರದಲ್ಲಿ ಅಳವಡಿಸಲಾದ ಯಂತ್ರಗಳು, ವಿದ್ಯುತ್ ತಂತಿಗಳು ಹಾಗೂ ಮತ್ತಿತರೆ ಉಪಕರಣಗಳ ಬಗ್ಗೆಯೂ ದೂರುಗಳಿವೆ. ಇವು ಹಳೆಯದಾಗಿದ್ದು, ಬಣ್ಣ ಬಳಿದು ಹೊಸದಾಗಿ ಕಾಣುವಂತೆ ಮಾಡಲಾಗಿದೆ ಎಂದು ಸ್ಥಳೀಯರು ಆರೋಪಿಸುತ್ತಿದ್ದಾರೆ. ಈ ಕುರಿತು ತಜ್ಞರಿಂದ ತನಿಖೆಯಾಗಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರು ಮತ್ತು ಮುಖ್ಯ ಇಂಜಿನೀಯರ್‌ಗೆ ದೂರವಾಣಿ ಮೂಲಕ ಸಂಪರ್ಕಿಸಿ ಕಾಮಗಾರಿಯ ಬಗ್ಗೆ ಮಾಹಿತಿ ನೀಡಿದರು. ನನ್ನ ಮತಕ್ಷೇತ್ರದ ಜನತೆಗೆ ಅನುಕೂಲವಾಗಬೇಕೆಂಬ ಉದ್ದೇಶದಿಂದ ಸರ್ಕಾರದ ಮೇಲೆ ನಿರಂತರ ಒತ್ತಡ ತಂದು ಹಲವು ವರ್ಷ ಪ್ರಯತ್ನಪಟ್ಟು 118 ಕೋಟಿ ವೆಚ್ಚದಲ್ಲಿ ವಿದ್ಯುತ್ ಉಪ ಕೇಂದ್ರ ನಿರ್ಮಿಸಲಾಗುತ್ತಿದೆ. ಕೆಲಸ ಕಳಪೆಯಾಗುತ್ತಿದೆಯೆಂದು ಜನ ಆರೋಪಿಸುತ್ತಿದ್ದಾರೆ. ತಾವು ಒಂದು ಬಾರಿ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಬೇಕು.

ವಿದ್ಯುತ್ ಕೊರತೆ ನೀಗಿಸಲು ಸರ್ಕಾರದಿಂದ 220 ಕೆ.ವಿ ವಿದ್ಯುತ್ ಉಪ ಕೇಂದ್ರವನ್ನು ಮಂಜೂರು ಮಾಡಿಸಿ ಕೆಲಸ ಆರಂಭಿಸಲಾಗಿದೆ. ಕಾಮಗಾರಿಯನ್ನು ಹೈದ್ರಾಬಾದ್ ಮೂಲದ ಸಂಸ್ಥೆಗೆ ವಹಿಸಲಾಗಿದೆ. ಅವರು ಇಲ್ಲಿಗೆ ಬರುವುದೇ ಇಲ್ಲ. ನೇರವಾಗಿ ಕೆಲಸ ಮಾಡದೇ 3ನೇ ವ್ಯಕ್ತಿಗಳಿಂದ ಕೆಲಸ ಮಾಡಿಸುತ್ತಿದ್ದಾರೆ ಎನ್ನುವ ಆರೋಪಗಳಿವೆ. ಬೃಹತ್ ಗಾತ್ರದ ಯಂತ್ರಗಳನ್ನು ರಾತ್ರೋರಾತ್ರಿ ಅಳವಡಿಸಲಾಗುತ್ತಿದೆ ಎಂದು ಗ್ರಾಮಸ್ಥರು ಆರೋಪಿಸುತ್ತಿದ್ದಾರೆ. ಕಟ್ಟಡಗಳು ಮತ್ತು ಕಂಪೌಂಡ್ ಕಾಮಗಾರಿಯನ್ನು ವೀಕ್ಷಿಸಿದ್ದು, ಕೆಲಸ ಸಂಪೂರ್ಣ ಕಳಪೆಯಾಗಿದೆ. ಜನರಿಂದ ಸಾಕಷ್ಟು ದೂರುಗಳು ಬಂದ ಹಿನ್ನಲೆಯಲ್ಲಿ ಈ ಕುರಿತು ಈ ಹಿಂದೆ ಎರಡು ಬಾರಿ ಸಚಿವರು ಮತ್ತು ಅಧಿಕಾರಿಗಳ ಗಮನಕ್ಕೆ ತರಲಾಗಿದೆ ಎಂದು ಮಾಹಿತಿ ನೀಡಿದರು.

# ಫಸ್ಟ್ ನೈಟ್ ವಿಡಿಯೋ ಮಾಡಿಟ್ಟುಕೊಂಡ ಸರ್ಕಾರಿ ಅಧಿಕಾರಿಯಿಂದ ವರದಕ್ಷಿಣೆಗಾಗಿ ಪತ್ನಿಗೆ ಬ್ಲ್ಯಾಕ್‌ಮೇಲ್




**ರಾಯಚೂರು, ಅ.18–** ವರದಕ್ಷಿಣೆಗಾಗಿ ಪತ್ನಿಗೆ ಕಿರುಕುಳ ಕೊಡುವುದು, ಮನೆಯಲ್ಲಿ ಹಿಂಸೆ, ದೌರ್ಜನ್ಯ ಎಸಗಿದ ಬಗ್ಗೆ ಆಗಾಗ ವರದಿಯಾಗುತ್ತಿರುತ್ತವೆ. ಆದರೆ ರಾಯಚೂರಿನ ಮಾನ್ವಿಯಲ್ಲೊಬ್ಬ ಸರ್ಕಾರಿ ಅಧಿಕಾರಿ, ಮೊದಲ ರಾತ್ರಿಯ ವಿಡಿಯೋ ರೆಕಾರ್ಡ್ ಮಾಡಿ ಇಟ್ಟುಕೊಂಡು ಪತ್ನಿಯನ್ನೇ ಬ್ಲ್ಯಾಕ್‌ಮೇಲ್ ಮಾಡಿದ ಘಟನೆ ನಡೆದಿದ್ದು, ಈ ಸಂಬಂಧ ಜಿಲ್ಲೆಯ ಮಾನ್ವಿ ಪೊಲೀಸ್ ಠಾಣೆಯಲ್ಲಿ ಮಹಿಳೆ ದೂರು ಸಲ್ಲಿಸಲ್ಲಿಸಿದ್ದಾಳೆ.

ಫಸ್ಟ್‌ನೈಟ್ ವಿಡಿಯೋ ರೆಕಾರ್ಡ್ ಮಾಡಿ ಇಟ್ಟುಕೊಂಡಿರುವ ಪತಿ, ತನ್ನ ವಿರುದ್ಧ ಮಾತನಾಡಿದರೆ, ಖಾಸಗಿ ಕ್ಷಣದ ವಿಡಿಯೋ ವೈರಲ್ ಮಾಡುವುದಾಗಿ ಬೆದರಿಕೆ ಹಾಕುತ್ತಿದ್ದಾರೆ ಎಂದು ದೂರಿನಲ್ಲಿ ಮಹಿಳೆ ಉಲ್ಲೇಖಿಸಿದ್ದಾರೆ. ಮಾನ್ವಿ ವಿಭಾಗದ ಜೆಸ್ಕಾಂನಲ್ಲಿ ಮೇಲ್ವಿಚಾರಕ ಹುದ್ದೆಯಲ್ಲಿರುವ ಗುರುರಾಜ್ ಎಂಬವರ ವಿರುದ್ಧ ದೂರು ದಾಖಲಾಗಿದೆ.

**ಮ್ಯಾಟ್ರಿಮೋನಿಯಲ್ಲಿ ಪರಿಚಯ–ಮದುವೆ:** ಮ್ಯಾಟ್ರಿಮೋನಿಯಲ್ಲಿ ಪರಿಚಯವಾಗಿದ್ದ ಗುರುರಾಜ್ ನಾಯಕನನ್ನು ನಂಬಿ ಮದುವೆಯಾಗಿದ್ದಾಗಿ ಸಂತ್ರಸ್ತೆ ಹೇಳಿಕೊಂಡಿದ್ದಾರೆ. ಗುರುರಾಜ್ ತನ್ನ ಚಾಲಕನನ್ನು ಬಳಸಿಕೊಂಡು ಸಾಕಷ್ಟು ಜನರಿಗೆ ಪತ್ನಿಯ ಜತೆಗಿನ ಲೈಂಗಿಕ ಕ್ರಿಯೆಯ ವಿಡಿಯೋ ತೋರಿಸಿದ್ದಾರೆ ಎಂದೂ ಆರೋಪಿಸಲಾಗಿದೆ. ಕೆಲವು ಮಂದಿ ಬೇರೆ ಹೆಣ್ಣುಮಕ್ಕಳಿಗೂ ಇದೇ ರೀತಿ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ. ತಮಗೆ ಯಾರ ಬಳಿ ಕೆಲಸ ಆಗತ್ತದೆಯೋ ಅಂಥವರ ಬಳಿ ಹೋಗು ಎಂದು ಗುರುರಾಜ್ ನಾಯಕ ಪತ್ನಿಗೆ ಟಾರ್ಚರ್ ಕೊಟ್ಟಿದ್ದಾರೆ ಎನ್ನಲಾಗಿದೆ. ಅಷ್ಟೇ ಅಲ್ಲದೆ, ಸಾಮಾಜಿಕ ಜಾಲತಾಣಗಳಲ್ಲಿ ಹುಡುಗಿಯರಿಗೆ ಅಶ್ಲೀಲವಾಗಿ ವಿಡಿಯೋ ಕಾಲ್ ಮಾಡಿರುವ ಸಾಕ್ಷಿಗಳಿವೆ ಎಂದೂ ಸಂತ್ರಸ್ತೆ ಆರೋಪಿಸಿದ್ದಾರೆ. ಜತೆಗೆ, ಈಗಾಗಲೇ ಪತಿ ಗುರುರಾಜ್ ನಾಯಕ ನಾಲ್ಕು ಮದುವೆ ಆಗಿದ್ದಾರೆ.

ಸಾಕಷ್ಟು ಬಾರಿ ನನ್ನ ಮೇಲೆ ದಾಳಿ ಮಾಡಿದ್ದಾರೆ. ನನಗೆ ರಕ್ಷಣೆ ಕೊಡಿ, ಪತಿ ಗುರುರಾಜ್ ವಿರುದ್ಧ ಕ್ರಮಕೈಗೊಳ್ಳಿ ಎಂದು ಮಾನ್ವಿ ಠಾಣೆ ಪೊಲೀಸರಿಗೆ ಮಹಿಳೆ ಮನವಿ ಮಾಡಿದ್ದಾರೆ. ಮಹಿಳೆ ನೀಡಿದ ದೂರಿನ ಆಧಾರದಲ್ಲಿ ಪ್ರಕರಣ ದಾಖಲಿಸಲಾಗಿದೆ.

# ವಾಲ್ಮಿಕಿ ರಾಮಾಯಣ ವಿಶ್ವಮಾನ್ಯ ಗ್ರಂಥವಾಗಿದೆ: ಡಾ.ಶಿವರಾಜ ಪಾಟೀಲ್



**ರಾಯಚೂರು, ಅ.18–** ಕಾಡಿನಲ್ಲಿ ಅಲೆಯುತ್ತಿದ್ದ ವಾಲ್ಮಿಕಿ ತಪಸ್ಸು ಮಾಡಿ ಮಹರ್ಷಿ ವಾಲ್ಮಿಕಿಯಾಗಿ ರಾಮಾಯಣದಂಥ ವಿಶ್ವಮಾನ್ಯ ಮಹಾನ್ ಗ್ರಂಥ ರಚಿಸಿದರು. ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ರಾಮರಾಜ್ಯ ನಿರ್ಮಾಣ ಮಾಡಬೇಕು ಎಂದು ಶಾಸಕ ಡಾ. ಶಿವರಾಜ ಪಾಟೀಲ್ ಕರೆ ನೀಡಿದರು.

ನಗರದ ಆಶಾಪೂರ ರಸ್ತೆಯ ಶ್ರೀ ಮಹರ್ಷಿ ವಾಲ್ಮೀಕಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆದಿಕವಿ ಮಹರ್ಷಿ ವಾಲ್ಮೀಕಿಯವರು ಮಹಾಕಾವ್ಯ ರಾಮಾಯಣದ ಮೂಲಕ ಬದುಕಿನಲ್ಲಿ ಇರಬೇಕಾದ ಆದರ್ಶಗಳನ್ನು ವಿವಯಿರಿಸಿದ್ದಾರೆ. ಜಯಂತಿಗಳು ಕೇವಲ ಆಚರಣೆಗೆ ಸೀಮಿತವಾಗಬಾರದು. ಆಚರಣೆಗಳಿಂದ ನಮ್ಮ ತಪ್ಪುಗಳನ್ನು ತಿದ್ದಿಕೊಂಡು ಸರಿದಾರಿಗೆ ಹೋಗುವ ಪ್ರಯತ್ನ ಮಾಡಬೇಕು ಎಂದು ಹೇಳಿದರು.

ಇಂತಹ ಮಹಾನ್ ನಾಯಕರನ್ನು ಒಂದು ಸಮಾಜಕ್ಕೆ ಸೀಮಿತಗೊಳಿಸದೆ ಎಲ್ಲರೂ ಸೇರಿ ಆಚರಿಸಬೇಕು. ಬ್ರಿಟಿಷ್ ಆಳ್ವಿಕೆಯ ನಿಜಾಮರ ಕಾಲದ ಸುರಪುರ ದೊರೆ ರಾಜ ವೆಂಕಟಪ್ಪ ನಾಯಕ ಅವರು ನಿಜಾಮರ ವಿರುದ್ಧ ಹೋರಾಡಿದವರು. ಅಂಥ ರಾಜರನ್ನು ಕೊಟ್ಟ ಸಮಾಜ ವಾಲ್ಮೀಕಿ ಸಮಾಜವಾಗಿದೆ ಎಂದು ಹೇಳಿದರು.

ಸಂಸದ ಜಿ. ಕುಮಾರ್ ನಾಯಕ್ ಅವರು ಮಾತನಾಡಿ, ವಾಲ್ಮೀಕಿ ಜಯಂತಿ ಕಾರ್ಯಕ್ರಮವು ಕೇವಲ ಒಂದು ದಿನದ ಕಾರ್ಯಕ್ರಮವಾಗಬಾರದು. ಸಾವಿರ ವರ್ಷಗಳ ಹಿಂದೆ ನಾವು ಹೇಗೆ ಬಾಳಬೇಕೆಂದು ಹೇಳಿಕೊಟ್ಟವರು ವಾಲ್ಮೀಕಿ. ಮಾನವ ಸಂಬಂಧ ಮತ್ತು ರಾಜಾಳ್ವಿಕೆಯನ್ನು ತಿಳಿಸುವ ಕೃತಿ. ಅಂದಿನ ಕಾಲದ ಸಂವಿಧಾನ ರಾಮಾಯಣ ಎಂದು ತಿಳಿಸಿದರು.

# ಭಜನಾ ತಂಡದೊಂದಿಗೆ ಹೆಜ್ಜೆಹಾಕಿ ಗಮನಸೆಳೆದ ಪ್ರಭು ಚವ್ಹಾಣ್



**ಬೀದರ್, ಅ. 18–** ದೇವಸ್ಥಾನದಲ್ಲಿ ವಿಶೇಷ ಪೂಜೆ ನೆರವೇರಿಸಿ ಕ್ಷೇತ್ರದ ಜನತೆಯ ಒಳಿತಿಗಾಗಿ ಪ್ರಾರ್ಥನೆ ಸಲ್ಲಿಸಿ, ನಂತರ ಜ್ಞಾನೇಶ್ವರ ಗ್ರಂಥ ಗದ್ದುಗೆಗೆ ಪೂಜೆ ನೆರವೇರಿಸಿದರು. ಸಪ್ತಾಹದಲ್ಲಿ ಪಾಲ್ಗೊಂಡು ಭಜನಾ ತಂಡದೊಂದಿಗೆ ಹೆಜ್ಜೆ ಹಾಕಿ ಗಮನ ಸೆಳೆದ ಶಾಸಕ ಚೌವ್ಹಾಣ.

ಭವಾನಿ ಬಿಜಲಗಾಂವ ದೇವಸ್ಥಾನ ಪುರಾತನ ಮತ್ತು ಐತಿಹಾಸಿಕ ಹಿನ್ನೆಲೆ ಹೊಂದಿರುವ ದೇವಸ್ಥಾನವಾಗಿದೆ. ಭವಾನಿ ಮಾತೆ ಶಕ್ತಿಶಾಲಿ ದೇವತೆಯಾಗಿದ್ದಾರೆ. ಕಷ್ಟದಲ್ಲಿರುವ ಭಕ್ತರ ಸಮಸ್ಯೆಗಳೆಲ್ಲ ನಿವಾರಣೆಯಾಗಿ, ಜೀವನ ಸುಂದರವಾಗುತ್ತದೆ ಎಂದು ಶಾಸಕ ಚೌವ್ಹಾಣ ಮಾಹಿತಿ ನೀಡಿದರು. ಪ್ರತಿ ವರ್ಷ ನವರಾತ್ರಿ ಮಹೋತ್ಸವದ ನಿಮಿತ್ತ ಅಖಂಡ ಹರಿನಾಮ ಸಪ್ತಾಹ ನಡೆಸುತ್ತಾ ಬಂದಿರುವುದು ಉತ್ತಮ ಕೆಲಸವೆಂದು ಗ್ರಾಮಸ್ಥರ ಕೆಲಸವನ್ನು ಅಖಂಡ ಹರಿನಾಮ ಸಪ್ತಾಹವು ಯುವಕರಲ್ಲಿ ನಮ್ಮ ದೇಶದ ಕಲೆ, ಪರಂಪರೆಯನ್ನು ತಿಳಿಸಲು ಸಹಕಾರಿಯಾಗುತ್ತದೆ.

# ನಗರದಲ್ಲಿ ವಾಲ್ಮಿಕಿ ಭವನ ನಿರ್ಮಾಣಕ್ಕೆ ಪ್ರಯತ್ನ: ಎಂಎಲ್‌ಸಿ ಕಮಕನೂರ

**ಕಲಬುರಗಿ, ಅ.18–** ವಾಲ್ಮೀಕಿ ಸಮುದಾಯದವರು ಸ್ಥಳೀಯ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಸಿ.ಎ. ನಿವೇಶನಕ್ಕೆ ಪ್ರಸ್ತಾವನೆ ಸಲ್ಲಿಸಲಿ. ನಂತರ ಸಿ.ಎ. ನಿವೇಶನ ಮಂಜೂರಾತಿ ಕೊಡಿಸಿ ಕೋಟ್ಯಂತರ ಖರ್ಚಿನಲ್ಲಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣಕ್ಕೆ ಸರ್ಕಾರದ ಮಟ್ಟದಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುವೆ ಎಂದು ವಿಧಾನಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಭರವಸೆ ನೀಡಿದರು.


ಕಲಬುರಗಿಯ ಡಾ.ಎಸ್.ಎಂ.ಪಂಡಿತ ಜಿಲ್ಲಾ ರಂಗಮಂದಿರದಲ್ಲಿ ನಡೆದ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಎಂಎಲ್‌ಸಿ ತಿಪ್ಪಣ್ಣಪ್ಪ ಕಮಕನೂರ ಉದ್ಘಾಟಿಸಿದರು. ಮೇಯರ್ ಯಲ್ಲಪ್ಪ ನಾಯ್ಕೋಡಿ ಮತ್ತಿತರರಿದ್ದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಸಮಾಜಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಆಶ್ರಯದಲ್ಲಿ ನಗರದ ಡಾ.ಎಸ್.ಎಂ.ಪಂಡಿತ ಜಿಲ್ಲಾ ರಂಗಮಂದಿರದಲ್ಲಿ ಆಯೋಜಿಸಿದ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೋಲಿ ಭವನದ ಮಾದರಿಯಲ್ಲಿ ಬೃಹತ್ ವಾಲ್ಮೀಕಿ ಭವನ ನಿರ್ಮಾಣಕ್ಕೆ ಮುಂದಾಗಲಾಗುವುದು. ವಿಶ್ವ ವಿದ್ಯಾಲಯ ಆವರಣದಲ್ಲಿ ಅಂಬಿಗರ ಚೌಡಯ್ಯ ಹಾಗೂ ಹೇಮರಡ್ಡಿ ಮಲ್ಲಮ್ಮ ಅಧ್ಯಯನ ಪೀಠದಲ್ಲಿ ಮಹರ್ಷಿ ವಾಲ್ಮೀಕಿ ಅಧ್ಯಯನ ಪೀಠಕ್ಕೆ ಪುನಶ್ಚೇತನ ತುಂಬುವ ಕೆಲಸ ಮಾಡುತ್ತೇನೆ. ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ಅವರನ್ನು ಮನವೊಲಿಸಿ, 50 ಲಕ್ಷ ರೂ. ಅನುದಾನ ಮಂಜೂರಾತಿ ಕೊಡಿಸುವೆ. ಅಲ್ಲದೆ ಮಹಾನಗರ ಪಾಲಿಕೆಯ ನಾಮನಿರ್ದೇಶಿತ ಸದಸ್ಯನಾಗಿರುವುದರಿಂದ ಮುಖ್ಯ ರಸ್ತೆಗೆ ಮಹರ್ಷಿ ವಾಲ್ಮೀಕಿ ಹೆಸರಿಡಲಾಗುವುದು ಎಂದು ಅಶ್ವಾಸನೆ ನೀಡಿ ದರು. ಅಲ್ಲದೆ ನಾಗರಿಕ ಸಮಾಜದಲ್ಲಿ ನಯ, ವಿನಯ, ಭ್ರಾತೃತ್ವ ಮತ್ತು ಸಹೋದರತೆ ಭಾವನೆಯಿಂದ ಎಲ್ಲರೊಂದಿಗೆ ಬೆರೆತು ಜೀವನ ನಡೆಸಬೇಕು. ಇಲ್ಲಿ ಯಾರು ಮೇಲು ಕೀಳು ಇಲ್ಲ, ಎಲ್ಲರೂ ಸರಿಸಮಾನರು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

# ಉತ್ತರ ಕೊರಿಯಾ ಮಧ್ಯಪ್ರವೇಶಿಸಿದರೆ ವಿಶ್ವ ಯುದ್ಧ: ಉಕ್ರೇನ್ ಅಧ್ಯಕ್ಷ ಝೆಲೆನ್‌ಸ್ಕಿ

**ಬ್ರಸೆಲ್ಸ್,ಅ.18:** ಉತ್ತರ ಕೊರಿಯಾದ 10 ಸಾವಿರ ಸೈನಿಕರು ತಮ್ಮ ದೇಶದ ವಿರುದ್ಧ ಹೋರಾಡುತ್ತಿರುವ ರಷ್ಯಾದ ಸೇನೆಗೆ ಸೇರಲು ಸಿದ್ಧರಾಗಿದ್ದಾರೆ ಎಂಬ ಗುಪ್ತಚರ ಮಾಹಿತಿ ಲಭಿಸಿರುವುದಾಗಿ ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್‌ಸ್ಕಿ ಹೇಳಿದ್ದಾರೆ.

ಉಕ್ರೇನ್-ರಷ್ಯಾ ನಡುವಣ ಯುದ್ಧದಲ್ಲಿ ಮೂರನೇ ರಾಷ್ಟ್ರವೊಂದು ತಲೆಹಾಕಿದರೆ, ಈಗ ನಡೆಯುತ್ತಿರುವ ಸಂಘರ್ಷವು ವಿಶ್ವ ಯುದ್ಧವಾಗಿ ಪರಿವರ್ತನೆಯಾಗಲಿದೆ ಎಂದು ಎಚ್ಚರಿಸಿದ್ದಾರೆ. ಉತ್ತರ ಕೊರಿಯಾವು ಯುದ್ಧತಂತ್ರ ನಿಪುಣರು ಮತ್ತು ಸೇನೆಯ ಕೆಲವು ಅಧಿಕಾರಿಗಳನ್ನು ರಷ್ಯಾಕ್ಕೆ ಕಳುಹಿಸಿರುವ ಮಾಹಿತಿ ನಮಗೆ ಲಭಿಸಿದೆ ಎಂದು ಝೆಲೆನ್‌ಸ್ಕಿ ಅವರು ನ್ಯಾಟೊ ಕೇಂದ್ರ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದಾರೆ. 10 ಸಾವಿರ ಸೈನಿಕರನ್ನು ತಮ್ಮದೇ ನೆಲದಲ್ಲಿ ಅಣಿಗೊಳಿಸುತ್ತಿದ್ದಾರೆ. ಅವರನ್ನು ಉಕ್ರೇನ್ ಅಥವಾ ರಷ್ಯಾಕ್ಕೆ ಇನ್ನಷ್ಟೇ ಕಳುಹಿಸಬೇಕಿದೆ ಎಂದಿದ್ದಾರೆ.

**12 ಸಾವಿರ ಯೋಧರು ಸಜ್ಜು:**



ಉಕ್ರೇನ್ ವಿರುದ್ಧದ ಯುದ್ಧದಲ್ಲಿ ರಷ್ಯಾವನ್ನು ಬೆಂಬಲಿಸಲು ಉತ್ತರ ಕೊರಿಯಾವು ವಿಶೇಷ ಕಾರ್ಯಾಚರಣೆ ಪಡೆಗಳು ಸೇರಿದಂತೆ 12 ಸಾವಿರ ಸೈನಿಕರನ್ನು ಕಳುಹಿಸಿರುವುದನ್ನು ದಕ್ಷಿಣ ಕೊರಿಯಾದ ಗುಪ್ತಚರ ಸಂಸ್ಥೆ ಪತ್ತೆ ಮಾಡಿದೆ. ದಕ್ಷಿಣ ಕೊರಿಯಾದ ಅಧ್ಯಕ್ಷ ಯೂನ್ ಸುಕ್ ಯೊಲ್ ಅವರು ಉಕ್ರೇನ್ ವಿರುದ್ಧದ ಯುದ್ಧದಲ್ಲಿ ರಷ್ಯಾ ಪರ ಉತ್ತರ ಕೊರಿಯಾದ ಪಡೆಗಳ ಪಾಲ್ಗೊಳ್ಳುವಿಕೆ ಕುರಿತಂತೆ ಚರ್ಚಿಸಲು ಪ್ರಮುಖ ಗುಪ್ತಚರ, ಮಿಲಿಟರಿ ಮತ್ತು ರಾಷ್ಟ್ರೀಯ ಭದ್ರತಾ ಅಧಿಕಾರಿಗಳೊಂದಿಗೆ ಸಭೆಯನ್ನು ನಡೆಸಿದ್ದಾರೆ ಎಂದು ಮಾಧ್ಯಮಗಳು ವರದಿ ಮಾಡಿವೆ. 'ಪ್ರಸ್ತುತ ಪರಿಸ್ಥಿತಿಯಲ್ಲಿ ರಷ್ಯಾ ಮತ್ತು ಉತ್ತರ ಕೊರಿಯಾದ ನಿಕಟ ಸಂಬಂಧಗಳ ಹೊರತಾಗಿಯೂ ರಕ್ಷಣಾ ಕ್ಷೇತ್ರದ ನಿಯಮಗಳನ್ನು ಮೀರಿ ಸೈನಿಕರನ್ನು ಕಳುಹಿಸಲು ಮುಂದಾಗಿರುವುದು ನಮ್ಮ ದೇಶಕ್ಕೆ (ದಕ್ಷಿಣ ಕೊರಿಯಾ) ಮಾತ್ರವಲ್ಲದೆ ಅಂತರರಾಷ್ಟ್ರೀಯ ಸಮುದಾಯಕ್ಕೆ ಗಂಭೀರವಾದ ಭದ್ರತಾ ಬೆದರಿಕೆಯಾಗಿದೆ' ಎಂದು ಯೂನ್ ಸುಕ್ ಯೊಲ್ ಕಳವಳ ವ್ಯಕ್ತಪಡಿಸಿರುವುದಾಗಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರಷ್ಯಾ ಸೇನೆಯನ್ನು ಸೇರಲು ಉತ್ತರ ಕೊರಿಯಾದ ಪಡೆಗಳು ಈಗಾಗಲೇ ದೇಶವನ್ನು ತೊರೆದಿವೆ ಎಂದು ಗುಪ್ತಚರ ಸಂಸ್ಥೆಯನ್ನು ಉಲ್ಲೇಖಿಸಿ ವರದಿ ತಿಳಿಸಿದೆ. ಯಾವುದೇ ಪುರಾವೆ ಸಿಕ್ಕಿಲ್ಲ: 'ಉಕ್ರೇನ್ ವಿರುದ್ಧದ ಯುದ್ಧದಲ್ಲಿ ಉತ್ತರ ಕೊರಿಯಾ ಸೈನಿಕರು ಭಾಗಿಯಾಗಿದ್ದಾರೆ ಎಂಬುದಕ್ಕೆ ಯಾವುದೇ ಪುರಾವೆ ಲಭಿಸಿಲ್ಲ. ಆದರೆ ಉತ್ತರ ಕೊರಿಯಾವು ಶಸ್ತ್ರಾಸ್ತ್ರಗಳು ಮತ್ತು ತಂತ್ರಜ್ಞಾನ ಪೂರೈಸುವ ಮೂಲಕ ರಷ್ಯಾಕ್ಕೆ ನೆರವಾಗುತ್ತಿದೆ ಎಂಬುದು ನಮಗೆ ತಿಳಿದಿರುವ ವಿಚಾರ' ಎಂದು ನ್ಯಾಟೊ ಮಹಾ ಪ್ರಧಾನ ಕಾರ್ಯದರ್ಶಿ ಮಾರ್ಕ್ ರುಟೆ ಹೇಳಿದ್ದಾರೆ.

# ನನ್ನ ಮಾತು ಒಪ್ಪಿದರೆ ನಾಳೆಯೇ ಯುದ್ಧ ಕೊನೆ

## ಹಮಾಸ್‌ಗೆ ಇಸ್ರೇಲ್ ಪ್ರಧಾನಿ ಖಡಕ್ ಸಂದೇಶ

ಹಮಾಸ್ ತನ್ನ ಶಸ್ತ್ರಾಸ್ತ್ರಗಳನ್ನು ತ್ಯಜಿಸಲು ಇಚ್ಚಿಸಿದ್ರೆ ಹಾಗೂ ಒತ್ತೆಯಾಳುಗಳನ್ನ ಬಿಡುಗಡೆ ಮಾಡಲು ಒಪ್ಪಿದರೆ ನಾಳೆಯೇ ಯುದ್ಧ ಕೊನೆಗೊಳ್ಳುತ್ತದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ.

2023ರ ಅಕ್ಟೋಬರ್ 7 ರಂದು ಇಸ್ರೇಲ್ ಮೇಲೆ ನಡೆಸಿದ ದಾಳಿಯ ಮಾಸ್ಟರ್ ಮೈಂಡ್ ಹಮಾಸ್ ಉಗ್ರ ಸಂಘಟನೆಯ ನಾಯಕ ಯಾಹ್ಯಾ ಸಿನ್ವಾರ್ ಇಸ್ರೇಲ್ ನಡೆಸಿದ ದಾಳಿಗೆ ಬಲಿಯಾಗಿದ್ದಾನೆ. ಇದಾದ ಕೆಲ ಗಂಟೆಗಳ ನಂತರ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಗಾಜಾದ ಜನರನ್ನು ಉದ್ದೇಶಿಸಿ ಮಾತನಾಡಿದ್ದಾರೆ. ಹಮಾಸ್ ತನ್ನ ಶಸ್ತ್ರಾಸ್ತ್ರಗಳನ್ನು ತ್ಯಜಿಸಲು ಇಚ್ಚಿಸಿದರೆ, ಒತ್ತೆಯಾಳುಗಳನ್ನು ಬಿಡುಗಡೆ ಮಾಡಲು ಒಪ್ಪಿದರೆ ನಾಳೆಯೇ ಯುದ್ಧ ಕೊನೆಗೊಳ್ಳುತ್ತದೆ ಎಂದು ಹೇಳಿದ್ದಾರೆ.

ಈ ಕುರಿತು ತನ್ನ ಎಕ್ಸ್ ಖಾತೆಯಲ್ಲಿ ವೀಡಿಯೋವೊಂದನ್ನು ಹಂಚಿಕೊಂಡಿರುವ ನೆತನ್ಯಾಹು, ಯಾಹ್ಯಾ ಸತ್ತಿದ್ದಾನೆ. ಇಸ್ರೇಲ್‌ನ ಕೆಚ್ಚೆದೆಯ ಸೈನಿಕರ ದಾಳಿಯಿಂದ ಕೊಲ್ಲಲ್ಪಟ್ಟಿದ್ದಾನೆ. ಆದ್ರೆ ಇದು ಜಾದಲ್ಲಿನ



ಯುದ್ಧದ ಅಂತ್ಯವಲ್ಲ, ಆರಂಭ ಎಂದು ಎಚ್ಚರಿಸಿದ್ದಾರೆ. ಗಾಜಾದ ಜನರೇ ನನ್ನ ಬಳಿ ಒಂದು ಸರಳವಾದ ಸಂದೇಶವಿದೆ. ಹಮಾಸ್ ತನ್ನ ಶಸ್ತ್ರಾಸ್ತ್ರಗಳನ್ನು ತ್ಯಜಿಸಿ, ನಮ್ಮ ಒತ್ತೆಯಾಳುಗಳನ್ನು ಹಿಂದಿರುಗಿಸಿದರೆ, ಈ ಯುದ್ಧ ನಾಳೆಯೇ ಕೊನೆಗೊಳ್ಳಬಹುದು ಎಂದು ಹೇಳಿದ್ದಾರೆ.

ಜೊತೆಗೆ ಹಮಾಸ್ ಪ್ರಸ್ತುತ ಗಾಜಾದಲ್ಲಿ 101 ಒತ್ತೆಯಾಳುಗಳನ್ನು ಇರಿಸಿಕೊಂಡಿದೆ. ಇದರಲ್ಲಿ ಇಸ್ರೇಲ್ ಸೇರಿದಂತೆ ವಿವಿಧ ವಿವಿಧ ದೇಶಗಳ 23 ನಾಗರಿಕರು ಇದ್ದಾರೆ ಎಂದು ನೆತನ್ಯಾಹು ಬಹಿರಂಗಪಡಿಸಿದ್ದಾರೆ.

ಇಸ್ರೇಲ್ ತನ್ನ ದೇಶದ ನಾಗರಿಕರನ್ನು ಮಾತ್ರವಲ್ಲ, ಒತ್ತೆಯಾಳಾಗಿರುವ ಇತರ ದೇಶಗಳ ನಾಗರಿಕರನ್ನು ರಕ್ಷಿಸಿ ತಮ್ಮ ದೇಶಕ್ಕೆ ಕಳುಹಿಸುವ ಪ್ರಯತ್ನ ಮಾಡುತ್ತಿದೆ.

ಅದಕ್ಕೆ ಬದ್ಧವಾಗಿಯೂ ನಡೆದುಕೊಳ್ಳುತ್ತಿದೆ. ನಮ್ಮ ಒತ್ತೆಯಾಳುಗಳನ್ನು ಹಿಂದಿರುಗಿಸಿದ್ರೆ, ಅವರನ್ನ ಏನೂ ಮಾಡುವುದಿಲ್ಲ. ಒಂದು ವೇಳೆ ಅವರಿಗೆ ತೊಂದರೆ ಮಾಡಿದ್ರೆ, ಬೇಟೆಯಾಡದೇ ಬಿಡುವುದಿಲ್ಲ ಎಂಬ ಎಚ್ಚರಿಕೆಯನ್ನು ಬೆಂಜಮಿನ್ ನೆತನ್ಯಾಹು ನೀಡಿದ್ದಾರೆ.

ಮೊದಲು ನಸ್ರಲ್ಲಾ ಹೋದ, ಆಮೇಲೆ ಹಿಜ್ಬುಲ್ಲಾ ಮೋಹ್ಸೆನ್, ಹನಿಯೆ, ಡೀಫ್, ಸಿನ್ವಾರ್ ಸೇರಿ ಅನೇಕ ಟಾಪ್ ಲೀಡರ್ಗಳು ಹೋದರು. ಮುಂದೆ ಇರಾಕ್, ಸಿರಿಯಾ, ಲೆಬನಾನ್, ಯೆಮನ್ ದೇಶಗಳ ಭಯೋತ್ಪಾದನಾ ಆಳ್ವಿಕೆಯೂ ಕೊನೆಗೊಳ್ಳುತ್ತದೆ. ಆದ್ದರಿಂದ ಮಧ್ಯಪ್ರಾಚ್ಯದಲ್ಲಿ ಶಾಂತಿ, ಸಮೃದ್ಧಿ, ಉತ್ತಮ ಭವಿಷ್ಯ ಬಯಸುವ ಎಲ್ಲರೂ ಒಂದಾಗಬೇಕು. ಆಗ ಕತ್ತಲನ್ನು ದೂಡಿ ಬೆಳಕು ತರಬಹುದು ಎಂದು ಕಿವಿಮಾತು ಹೇಳಿದ್ದಾರೆ.

# ಮುಂಬೈನಲ್ಲಿ ತೈವಾನ್ ಕಚೇರಿ: ಭಾರತದ ವಿರುದ್ಧ ಪ್ರತಿಭಟನೆ ದಾಖಲಿಸಿದ ಚೀನಾ



**ಬೀಜಿಂಗ್,ಅ.18:** ತೈವಾನ್ ತನ್ನ ತೈಪೇಯಿ ಆರ್ಥಿಕ ಮತ್ತು ಸಾಂಸ್ಕೃತಿಕ ಕೇಂದ್ರವನ್ನು (ಟಿಇಸಿಸಿ) ಮುಂಬೈನಲ್ಲಿ ತೆರೆದಿರುವ ಸಂಬಂಧ ಭಾರತದ ವಿರುದ್ಧ ರಾಜತಾಂತ್ರಿಕ ಪ್ರತಿಭಟನೆ ದಾಖಲಿಸಿರುವುದಾಗಿ ಚೀನಾ ತಿಳಿಸಿದೆ.

ತೈವಾನ್ ಕೇಂದ್ರಕ್ಕೆ ಸಂಬಂಧಿಸಿದಂತೆ ಮಾಧ್ಯಮದವರೊಂದಿಗೆ ಮಾತನಾಡಿರುವ ಚೀನಾದ ವಿದೇಶಾಂಗ ಇಲಾಖೆಯ ವಕ್ತಾರ ಮಾವೊ ನಿಂಗ್, 'ಜಗತ್ತಿನಲ್ಲಿರುವುದು ಏಕೈಕ ಚೀನಾ.ತೈವಾನ್, ಚೀನಾದ ಅವಿಭಾಜ್ಯ ಅಂಗವಾಗಿದೆ' ಎಂದು ಹೇಳಿದ್ದಾರೆ. 'ಪರಸ್ಪರ ಪ್ರತಿನಿಧಿ ಕಚೇರಿಗಳನ್ನು ತೆರೆಯುವುದೂ ಸೇರಿದಂತೆ, ಯಾವುದೇ ರಾಷ್ಟ್ರವು ತೈವಾನ್ನೊಂದಿಗೆ ಹೊಂದಿರುವ ಅಧಿಕೃತ ಸಂಪರ್ಕ ಮತ್ತು ಸಂವಹನವನ್ನು ಚೀನಾ ಬಲವಾಗಿ ವಿರೋಧಿಸುತ್ತದೆ. ಭಾರತದ ವಿರುದ್ಧ ಪ್ರತಿಭಟನೆ ದಾಖಲಿಸಿದ್ದೇವೆ' ಎಂದು ತಿಳಿಸಿದ್ದಾರೆ. ಚೀನಾ-ಭಾರತದ ಬಾಂಧವ್ಯಕ್ಕೆ ರಾಜಕೀಯ ಬದ್ಧತೆಯೇ ಅಡಿಪಾಯವಾಗಿದೆ. ಅದಕ್ಕೆ ಅನುಗುಣವಾಗಿ ಭಾರತ ನಡೆಯಬೇಕು ಎಂದು ಒತ್ತಾಯಿಸಿದ್ದಾರೆ. 'ಚೀನಾದೊಂದಿಗಿನ ಸಂಬಂಧವನ್ನು ಸುಧಾರಿಸುವ ನಿಟ್ಟಿನಲ್ಲಿ ಯಾವುದೇ ತೊಡಕು ಆಗದಂತೆ ರಾಜಕೀಯ ಬದ್ಧತೆಯನ್ನು ಭಾರತ ಕಟ್ಟುನಿಟ್ಟಾಗಿ ಪಾಲಿಸಬೇಕು. ತೈವಾನ್ಗೆ ಸಂಬಂಧಿಸಿದ ಸಮಸ್ಯೆಗಳನ್ನು ವಿವೇಚನೆಯಿಂದ ಮತ್ತು ಸೂಕ್ತ ರೀತಿಯಲ್ಲಿ ಇತ್ಯರ್ಥಪಡಿಸುವುದಕ್ಕಾಗಿ ತೈವಾನ್ ಜೊತೆ ಯಾವುದೇ ರೀತಿಯ ಅಧಿಕೃತ ಸಂವಾದನ್ನು ನಡೆಸಬಾರದು' ಎಂದು ಮಾವೊ ಹೇಳಿದ್ದಾರೆ. ಟಿಇಸಿಸಿಯ ಶಾಖೆಯನ್ನು ಮುಂಬೈನಲ್ಲಿ ಬುಧವಾರ ಆರಂಭಿಸಲಾಗಿದೆ. ದೆಹಲಿ ಮತ್ತು ಚೆನ್ನೈನಲ್ಲಿಯೂ ಟಿಇಸಿಸಿ ಕಚೇರಿಗಳು ಇವೆ.


# ಇಸ್ರೇಲ್, ಯಾಹ್ಯಾ ಸಿನ್ವರ್‌ರನ್ನು ಹತ್ಯೆಗೈದಿದೆ: ಖಚಿತಪಡಿಸಿದ ಹಮಾಸ್

**ದೋಹಾ,ಅ.18:** ನಮ್ಮ ನಾಯಕ ಯಾಹ್ಯಾ ಸಿನ್ವರ್ ಅವರನ್ನು ಇಸ್ರೇಲ್ ಮಿಲಿಟರಿಯು ಗಾಜಾದಲ್ಲಿ ನಡೆಸಿದ ದಾಳಿಯಲ್ಲಿ ಕೊಂದು ಹಾಕಿದೆ ಎಂದು ಪ್ಯಾಲೆಸ್ಟೀನ್‌ನ ಬಂಡುಕೋರರ ಗುಂಪಾದ ಹಮಾಸ್ ಖಚಿತಪಡಿಸಿದೆ.


'ನಮ್ಮ ಶ್ರೇಷ್ಠ ನಾಯಕರು, ಹುತಾತ್ಮ ಸಹೋದರರಾದ ಯಾಹ್ಯಾ ಸಿನ್ವರ್, ಅಬು ಇಬ್ರಾಹಿಂ ನಿಧನಕ್ಕೆ ಸಂತಾಪ ಸೂಚಿಸುತ್ತೇವೆ'ಎಂದು ಕತಾರ್ ಮೂಲದ ಹಮಾಸ್ ಅಧಿಕಾರಿ ಖಲೀಲ್ ಅಲ್ ಹಯ್ಯಾ ವಿಡಿಯೊ ಸಂದೇಶದಲ್ಲಿ ಅಲ್ ಜಜೀರಾಗೆ ತಿಳಿಸಿದ್ದಾರೆ. ಇಸ್ರೇಲ್ ಇತಿಹಾಸದಲ್ಲೇ ಅತ್ಯಂತ ಭೀಕರ ದಾಳಿ ಎನ್ನಲಾದ 2023ರ ಅಕ್ಟೋಬರ್ 7ರ ಹಮಾಸ್ ಬಂಡುಕೋರರ ದಾಳಿ ಬಳಿಕ ಸಿನ್ವರ್, ಇಸ್ರೇಲ್‌ನ ಮೋಸ್ಟ್ ವಾಂಟೆಂಡ್ ಉಗ್ರರ



ಪಟ್ಟಿ ಸೇರಿದ್ದರು. ಗಾಜಾದಲ್ಲಿ ಯುದ್ಧ ಅಂತ್ಯವಾಗುವವರೆಗೂ ಇಸ್ರೇಲ್‌ನ ಒತ್ತೆಯಾಳುಗಳನ್ನು ಬಿಡುಗಡೆ ಮಾಡುವುದಿಲ್ಲ ಎಂದು ಹಯ್ಯಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಿನ್ವರ್ ಹತ್ಯೆಯಿಂದ ಧೃತಿಗೆಡುವುದಿಲ್ಲ. ಸಂಘಟನೆ ಅವರ ತ್ಯಾಗದಿಂದ ಶಕ್ತಿ ಪಡೆಯುತ್ತದೆ. ಅವರು ನಮ್ಮ ಚಳವಳಿಯ ಸಂಕೇತವಾಗಿದ್ದರು ಎಂದೂ ಅವರು ಹೇಳಿದ್ದಾರೆ.



ರಾಷ್ಟ್ರಪತಿ ದ್ರೌಪದಿ ಮುರ್ಮು ಶುಕ್ರವಾರ ಮಲಾವಿಯ ಲಿಲಾಂಗ್ವೆಯ ಸ್ಟೇಟ್ ಹೌಸ್‌ನಲ್ಲಿ ಮಲಾವಿ ಅಧ್ಯಕ್ಷ ಡಾ. ಲಾಜರಸ್ ಮೆಕಾರ್ಥಿ ಚಕ್ವೆರಾ ಅವರೊಂದಿಗೆ ಮಾತುಕತೆ ನಡೆಸಿದರು.



ಐಎನ್‌ಎಸ್ ಶಾರ್ದೂಲ್ ದೀರ್ಘ ಶ್ರೇಣಿಯ ತರಬೇತಿ ನಿಯೋಜನೆಯ ಭಾಗವಾಗಿ ದುಬೈನ ಪೋರ್ಟ್ ರಶೀದ್ ಭೇಟಿಯನ್ನು ಮುಕ್ತಾಯಗೊಳಿಸಿತು.

## ಚಕ್ರ ಎಸೆತ ಅವಿನಾಶ್ ಪ್ರಥಮ

**ವಿಜಯಪುರ.ಅ.18:** ಆಂಧ್ರಪ್ರದೇಶ ರಾಜ್ಯದ ಗುಂಟೂರಿನಲ್ಲಿರುವ ನಾಗಾರ್ಜುನ ಕ್ರೀಡಾಂಗಣದಲ್ಲಿ 7 ರಾಜ್ಯಗಳ ನಡುವೆ ನಡೆದ ದಕ್ಷಿಣ ವಲಯ ಜೂನಿಯರ್ ಅಥ್ಲೆಟಿಕ್ಸ್ 35 ನೇ ಚಾಂಪಿಯನ್‌ಶಿಪ್ – 2024ರ ಕ್ರೀಡಾಕೂಟದಲ್ಲಿ ವಿಜಯಪುರ ಜಿಲ್ಲೆ ದೇವರ ಹಿಪ್ಪರಗಿ ತಾಲೂಕಿನ ಅವಿನಾಶ ಮಲ್ಲಿಕಾರ್ಜುನ ತಳಕೇರಿ ಚಕ್ರ ಎಸೆತದಲ್ಲಿ ಪ್ರಥಮ ಸ್ಥಾನ (50.41 ಮೀ). ದೇವರ ಹಿಪ್ಪರಗಿ ತಾಲೂಕಿನ ಗುರು ಹಿರಿಯರು, ಶಾಲಾ ಶಿಕ್ಷಕರ ವೃಂದ ಹಾಗೂ ತರಬೇತುದಾರ ಹಾಜಿ ಮುಲ್ಲಾ ಮತ್ತು ರಾಜು ದ.ಕಾಖಂಡಕಿ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.




# ಡಬ್ಲ್ಯುಆರ್ ಚೆಸ್ ಮಾಸ್ಟರ್ಸ್ ಟೂರ್ನಿ ಅರ್ಜುನ್ ಇರಿಗೇಶಿಗೆ ಪ್ರಶಸ್ತಿ

**ಲಂಡನ್,ಅ.18:** ಆರ್ಮ್‌ಗೆಡನ್ ಗೇಮ್‌ನಲ್ಲಿ ಫ್ರಾನ್ಸ್‌ನ ಮ್ಯಾಕ್ಸಿಂ ವೇಷಿಯರ್ ಲಗ್ರಾವ್ ಮೇಲೆ ಹೋರಾಟವನ್ನು ಬದಿಗೊತ್ತಿದ ಭಾರತದ ಗ್ರ್ಯಾಂಡ್ಮಾಸ್ಟರ್ ಅರ್ಜುನ್ ಇರಿಗೇಶಿ, ಡಬ್ಲ್ಯುಆರ್ ಚೆಸ್ ಮಾಸ್ಟರ್ಸ್ ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದುಕೊಂಡರು. ಫೈನಲ್‌ನ ಮೊದಲ ಎರಡು ಸಾಂಪ್ರದಾಯಿಕ ಮಾದರಿಯ ಆಟ ಡ್ರಾ ಆದ ನಂತರ ವಿಜೇತರನ್ನು ನಿರ್ಧರಿಸಲು ಆರ್ಮ್‌ಗೆಡನ್ ಗೇಮ್ ಆಡಲಾಯಿತು. ಎರಡು ಗೇಮ್‌ಗಳ ಟೈಬ್ರೇಕ್‌ನಲ್ಲಿ ಅರ್ಜುನ್‌ಗೆ ಅದೃಷ್ಟ ಒಲಿಯಿತು. ಮೊದಲ ಬಹುಮಾನವಾಗಿ 18.23 ಲಕ್ಷ ಅರ್ಜುನ್ ಜೇಬಿಗಿಳಿಯಿತು. 16 ಆಟಗಾರರು ಟೂರ್ನಿಯಲ್ಲಿ ಅರ್ಜುನ್ ಟೂರ್ನಿಯುದ್ದಕ್ಕೂ ಉತ್ತಮ ಪ್ರದರ್ಶನ ನೀಡಿದರು. ಅರ್ಜುನ್ ಸೆಮಿಫೈನಲ್‌ನಲ್ಲಿ ಸ್ವದೇಶದ ಆರ್.ಪ್ರಜ್ಞಾನಂದ ವಿರುದ್ಧ 1.5–0.5 ರಿಂದ ಜಯಗಳಿಸಿದ್ದರು. 2ನೇ ಸುತ್ತಿನಲ್ಲಿ ಭಾರತದ ಇನ್ನೊಬ್ಬ ಆಟಗಾರ ವಿದಿತ್ ಗುಜರಾತಿ ಅವರನ್ನು 1.5–0.5 ರಿಂದ ಸೋಲಿಸಿದ್ದರು. ಮೊದಲ ಸುತ್ತಿನಲ್ಲಿ ತೆಲಂಗಾಣದ




ಆಟಗಾರ 2–0ಯಿಂದ ಇಂಗ್ಲೆಂಡ್‌ನ ಶಿವಾನಂದನ್ ಬೋಧನಾ ವಿರುದ್ಧ ಜಯಗಳಿಸಿದ್ದರು. ಈಕೆ ಇತ್ತೀಚಿನ ಒಲಿಂಪಿಯಾಡ್‌ನಲ್ಲಿ ಆಡಿದ ಆ ದೇಶದ ಅತಿ ಕಿರಿಯ ಆಟಗಾರ್ತಿ ಎನಿಸಿದ್ದರು. ಈ ಟೂರ್ನಿಯ ಯಶಸ್ಸಿನಿಂದ ಅರ್ಜುನ್ 2800ರ ರೇಟಿಂಗ್ ಸಮೀಪ ತಲುಪಿದ್ದಾರೆ. ಆದರೆ ಈ ಮೈಲಿಗಲ್ಲು ದಾಟಲು ಇನ್ನೊಂದು ಟೂರ್ನಿಗಾಗಿ ಕಾಯಬೇಕಾಗಿದೆ.

# ಏಷ್ಯನ್ ನೆಟ್‌ಬಾಲ್ ಚಾಂಪಿಯನ್‌ಶಿಪ್ ಜಪಾನ್ ವಿರುದ್ಧ ಭಾರತ ಶುಭಾರಂಭ




**ಬೆಂಗಳೂರು,ಅ.18:** ಆತಿಥೇಯ ಭಾರತ ತಂಡವು ಇಲ್ಲಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ 13ನೇ ಏಷ್ಯನ್ ನೆಟ್‌ಬಾಲ್ ಮಹಿಳಾ ಚಾಂಪಿಯನ್‌ಷಿಪ್‌ನಲ್ಲಿ ಶುಭಾರಂಭ ಮಾಡಿತು.

ಸ್ಪರ್ಧೆಯ ಮೊದಲ ದಿನವಾದ ಶುಕ್ರವಾರ ಸುರಭಿ ಬಿ.ಆರ್. ನೇತೃತ್ವದ ಭಾರತ ತಂಡವು 55–22ರಿಂದ ಜಪಾನ್ ತಂಡವನ್ನು ಸುಲಭವಾಗಿ ಮಣಿಸಿತು.

ದಿನದ ಇತರ ಪಂದ್ಯಗಳಲ್ಲಿ ಸಿಂಗಪುರ 122–03 ರಿಂದ ಇರಾಕ್ ತಂಡವನ್ನು; ಶ್ರೀಲಂಕಾ 73–44 ರಿಂದ ಫಿಲಿಪ್ಪೀನ್ಸ್ ತಂಡವನ್ನು; ಹಾಂಗ್‌ಕಾಂಗ್ 77–11ರಿಂದ ಚೀನಾ ತೈಪೆ ತಂಡವನ್ನು; ಮಾಲ್ಡೀವ್ಸ್ 74–13ರಿಂದ ಸೌದಿ ಅರೇಬಿಯಾ ತಂಡವನ್ನು ಮಣಿಸಿದವು.

ಟೂರ್ನಿಯಲ್ಲಿ ಒಟ್ಟು 14 ರಾಷ್ಟ್ರಗಳ ತಂಡಗಳು ಪಾಲ್ಗೊಂಡಿವೆ.

# ಡೆನ್ಮಾರ್ಕ್ ಓಪನ್: ಪಿ.ವಿ.ಸಿಂಧುಗೆ ಸೋಲು

**ಕೋಪನ್‌ಹೇಗನ್,ಅ.18:** ಮಹಿಳೆಯರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಎರಡು ಬಾರಿ ಒಲಿಂಪಿಕ್ಸ್ ಪದಕ ವಿಜೇತೆ ಪಿ.ವಿ. ಸಿಂಧು ಇಂಡೋನೇಷ್ಯದ ಗ್ರಿಗೋರಿಯಾ ಮರಿಸ್ಕಾ ವಿರುದ್ಧ ಸೋಲನುಭವಿಸುವ ಮೂಲಕ ಬಿಡಬ್ಲ್ಯುಎಫ್ ವರ್ಲ್ಡ್ ಟೂರ್ ಸೂಪರ್ 750 ಟೂರ್ನಮೆಂಟ್ ಡೆನ್ಮಾರ್ಕ್ ಓಪನ್‌ನಲ್ಲಿ ಭಾರತದ ಸವಾಲು ಅಂತ್ಯವಾಗಿದೆ.

2015ರಲ್ಲಿ ರನ್ನರ್ಸ್ ಅಪ್ ಆಗಿದ್ದ ಸಿಂಧು ಶುಕ್ರವಾರ 57 ನಿಮಿಷಗಳಲ್ಲಿ ಕೊನೆಗೊಂಡಿರುವ ಅಂತಿಮ–8ರ ಹಣಾಹಣಿಯಲ್ಲಿ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ವಿಜೇತ ಮರಿಸ್ಕಾ



ಎದುರು 13–21, 21–16, 9–21 ಗೇಮ್‌ಗಳ ಅಂತರದಿಂದ ಸೋತಿದ್ದಾರೆ.

ವಿಶ್ವದ ನಂ.8ನೇ ಆಟಗಾರ್ತಿ ಮರಿಸ್ಕಾ ಹಿಂದಿನ 12 ಪಂದ್ಯಗಳಲ್ಲಿ ಸಿಂಧು ಅವರನ್ನು ಕೇವಲ ಎರಡು ಬಾರಿ ಸೋಲಿಸಿದ್ದಾರೆ.

ಚೀನಾದ ಹಾನ್ ಯುಇ ಅವರನ್ನು 18–21, 21–12, 21–16 ಗೇಮ್‌ಗಳ ಅಂತರದಿಂದ ಮಣಿಸುವ ಮೂಲಕ ಸಿಂಧು ಕ್ವಾರ್ಟರ್ ಫೈನಲ್ ತಲುಪಿದ್ದರು. ಒಲಿಂಪಿಕ್ಸ್‌ನಲ್ಲಿ ಅಂತಿಮ 16ರ ಸುತ್ತಿನಲ್ಲಿ ಚೀನಾದ ಹೀ ಬಿಂಗ್ ಜಿಯಾವೊ ಎದುರು ಸೋತ ನಂತರ ಸಿಂಧು ಆಡಿರುವ 2ನೇ ಪಂದ್ಯಾವಳಿ ಇದಾಗಿದೆ.

# ಮೊದಲ ಪಂದ್ಯದಲ್ಲಿ ಬುಲ್ಸ್‌ಗೆ ಆಘಾತ



**ಹೈದರಾಬಾದ್,ಅ.18:** ಬೆಂಗಳೂರು ಬುಲ್ಸ್ ಪ್ರೊ ಕಬಡ್ಡಿ ಲೀಗ್ 11ನೇ ಆವೃತ್ತಿಯ ಮೊದಲ ಪಂದ್ಯದಲ್ಲಿ ಸೋಲು ಕಂಡಿದೆ. ಶುಕ್ರವಾರ ನಡೆದ ಪಂದ್ಯದಲ್ಲಿ ಬೆಂಗಳೂರು ಬುಲ್ಸ್ 29–27 ಅಂಕಗಳಿಂದ ತೆಲುಗು ಟೈಟನ್ಸ್ ತಂಡವನ್ನು ಮಣಿಸಿತು. ಈ ಮೂಲಕ ತೆಲುಗು ಗೆಲುವಿನ ಅಭಿಯಾನವನ್ನು ಆರಂಭಿಸಿದೆ.

ಶುಕ್ರವಾರದಿಂದ ಆರಂಭವಾದ ಪ್ರೊ ಕಬಡ್ಡಿ ಲೀಗ್‌ನ 11ನೇ ಆವೃತ್ತಿಯ ಮೊದಲ ಪಂದ್ಯದಲ್ಲಿ ಟಾಸ್ ಗೆದ್ದ ಬೆಂಗಳೂರು ಬುಲ್ಸ್ ಅಂಕಣವನ್ನು ಆಯ್ಕೆ ಮಾಡಿಕೊಂಡಿತು. ತೆಲುಗು ಟೈಟನ್ಸ್ ಮೊದಲ ಅವಕಾಶದಲ್ಲಿ ಅಂಗಳನ್ನು ಕಲೆ ಹಾಕಿತು. ಬೆಂಗಳೂರು ಈ ಪಂದ್ಯದ ಆರಂಭದಲ್ಲಿ ರೈಡ್‌ನಲ್ಲಿ ಕೊಂಚ ಹಿನ್ನಡೆ ಅನುಭವಿಸಿತು.

**ಬುಲ್ಸ್ ತಂಡಕ್ಕೆ ಆರಂಭಿಕ ಹಿನ್ನಡೆ**

ಬೆಂಗಳೂರು ಬುಲ್ಸ್ ಮೊದಲಾವಧಿಯ ಆಟ ಮುಕ್ತಾಯವಾದಾಗ 11–20 ಅಂಕಗಳಿಂದ ತೆಲುಗು ಟೈಟನ್ಸ್ ತಂಡದ ವಿರುದ್ಧ ಹಿನ್ನಡೆ ಅನುಭವಿಸಿತು. ಈ ಹಂತದಲ್ಲಿ ಬೆಂಗಳೂರು ಬುಲ್ಸ್ ದಾಳಿಯಲ್ಲಿ ಹಿನ್ನಡೆ ಅನುಭವಿಸಿತು. ಈ ಅವಧಿಯಲ್ಲಿ ಟೈಟನ್ಸ್ ದಾಳಿಯಲ್ಲಿ 11 ಅಂಕಗಳನ್ನು ಕಲೆ ಹಾಕಿದರೆ, ಬುಲ್ಸ್ 5 ಅಂಕವನ್ನು ಸೇರಿಸಿತು. ಟ್ಯಾಕಲ್‌ನಲ್ಲಿ ಉಭಯ ತಂಡಗಳು ಸಮಯೋಚಿತ ಪ್ರದರ್ಶನ ನೀಡಿ ತಂಡಕ್ಕೆ ಆಧಾರವಾದವು. ಈ ಅವಧಿಯಲ್ಲಿ ಬೆಂಗಳೂರು ಬುಲ್ಸ್ ಒಂದು ಬಾರಿ ಅಂಕಣವನ್ನು ಖಾಲಿ ಮಾಡಿತು.

**ಎರಡನೇ ಅವಧಿಯಲ್ಲಿ ಉಭಯ ತಂಡಗಳ ಆರ್ಭಟ**

ಎರಡನೇ ಅವಧಿಯ ಆಟದಲ್ಲಿ ಬೆಂಗಳೂರು ಬುಲ್ಸ್ ಅಬ್ಬರದ ಪ್ರದರ್ಶನ ನೀಡಿತು. ಅಲ್ಲದೆ ರನ್ ಗಳಿಕೆಯಲ್ಲಿ ಮುನ್ನಡೆ ಸಾಧಿಸಿತು. ಆದರೆ ಈ ಮುನ್ನಡೆ ಪಂದ್ಯ ಗೆಲ್ಲುವಷ್ಟು ಸಾಕಾಗಲಿಲ್ಲ. ಈ ಅವಧಿಯಲ್ಲಿ ಬೆಂಗಳೂರು 18–17 ಅಂಕಗಳನ್ನು ಕಲೆ ಹಾಕಿತು. ದಾಳಿಯ ಹಾಗೂ ಟ್ಯಾಕಲ್‌ನಲ್ಲಿ ಉಭಯ ತಂಡಗಳು ಅಮೋಘ ಪ್ರದರ್ಶನ ನೀಡಿದವು. ಇದೇ ಅವಧಿಯಲ್ಲಿ ತೆಲಗು ಟೈಟನ್ಸ್ ತಂಡವನ್ನು ಬೆಂಗಳೂರು ಆಲೌಟ್ ಮಾಡಿತು. ಇದೇ ಅವಕಾಶವನ್ನು ಬಳಸಿಕೊಂಡು ಅಬ್ಬರದ ಪ್ರದರ್ಶನ ನೀಡಿ ಮುನ್ನಡೆ ಸಾಧಿಸುವ ಬುಲ್ಸ್ ಆಸೆಗೆ ಪೆಟ್ಟು ನೀಡಿತು.

**ಪವನ್ 1200:** ತೆಲುಗು ಟೈಟನ್ಸ್ ತಂಡದ ಸ್ಟಾರ್ ಆಟಗಾರ ಪವರ ಶೆರಾವತ್ ಅಮೋಘ ಪ್ರದರ್ಶನ ನೀಡಿದರು. ಇವರು ಈ ಪಂದ್ಯದಲ್ಲಿ 13 ಅಂಕಗಳನ್ನು ಕಲೆ ಹಾಕಿದರು. ಈ ಮೂಲಕ ಪ್ರೊ ಕಬಡ್ಡಿ ಲೀಗ್‌ನಲ್ಲಿ 1200 ಅಂಕಗಳನ್ನು ಕಲೆ ಹಾಕಿ ಅಬ್ಬರಿಸಿದರು.